ಸಂಪುಟ : 13 Volume | ಸಂಚಿಕೆ : 198 Issue | ಪುಟಗಳು : 08 Pages | ಶುಕ್ರವಾರ 19 ಸೆಪ್ಟೆಂಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಸಮುದ್ರದ ದೃಶ್ಯ ಆನಂದಮಯ, ಆದರೆ ದಡದ ಮೇಲಿಂದ ನೋಡುವವರಿಗೇ ಹೊರತೂ ಮುಳುಗುವವರಿಗಲ್ಲ "
-ವಿನೋಬಾ ಬಾವೆ

43ನೇ ನವರಾತ್ರಿ ಮಹೋತ್ಸವ 2
ಕೇಂದ್ರದಲ್ಲಿ ಪೋಷಣ ಮಾಸಾಚರಣೆ 4
ನೋವಿಗೆ ಮಿಡಿದ ಮಹಿಳಾ ಆಯೋಗ 8

# ಆಳಂದನಲ್ಲಿ ಮತಗಳ್ಳತನ: ರಾಹುಲ್

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಸೆ.18: ಆಳಂದ ಕ್ಷೇತ್ರದಲ್ಲಿ ಮತಗಳ್ಳತನ ನಡೆದಿದೆ ಎಂದು ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಗಂಭೀರ ಆರೋಪ ಮಾಡಿದ್ದಾರೆ.ನವದೆಹಲಿಯಲ್ಲಿಸುದ್ದಿಗೋಷ್ಠಿಯಲ್ಲಿಮಾತನಾಡಿದಅವರು, ನಾನು ಕೆಲ ದಾಖಲೆಗಳನ್ನ ನೀಡುತ್ತೇನೆ, ತೀರ್ಮಾನ ನಿಮ್ಮದು. ನೀವು ನಂಬುತ್ತೀರಾ..!? ಒಂದು ಕ್ಷೇತ್ರದಲ್ಲಿ (ಆಳಂದ) 2023ರ ಎಲೆಕ್ಷನ್ ವೇಳೆ 6018 ಮತದಾರರನ್ನ ಡಿಲೀಟ್ ಮಾಡಲು ಯತ್ನಿಸಿದರು ಎಂದು ದೂರಿದ್ದಾರೆ.

ಬೇರೆ ರಾಜ್ಯಗಳ ಫೋನ್ ನಂಬರ್ ಬಳಕೆ ಮಾಡಲಾಗಿದೆ. ಕಾಂಗ್ರೆಸ್ ವೋಟ್‌ಗಳನ್ನೇ ಟಾರ್ಗೆಟ್ ಮಾಡಲಾಗಿದೆ. ಸೂರ್ಯಕಾಂತ್ ಹೆಸರು ಬಳಸಿ 14 ನಿಮಿಷದಲ್ಲಿ 12 ವೋಟ್ ಡಿಲೀಟ್ ಮಾಡಲಾಗಿದೆ. ಕಾಂಗ್ರೆಸ್ ಬಲವಾಗಿರುವ ಬೂತ್‌ಗಳನ್ನೇ ಟಾರ್ಗೆಟ್ ಮಾಡಿ ಮತಗಳ್ಳತನ ಮಾಡಲಾಗಿದೆ ಎಂದು ತಿಳಿಸಿದ್ದಾರೆ.ಕರ್ನಾಟಕ ಸಿಐಡಿ 18 ತಿಂಗಳಲ್ಲಿ 18 ಪತ್ರ ಬರೆದಿದೆ. ಚುನಾವಣಾ ಆಯೋಗಕ್ಕೆ ಪತ್ರ ಬರೆದಿದೆ. ಅವರು ಉತ್ತರ ನೀಡುತ್ತಿಲ್ಲ. ACA i Hbwqb|bmb ದೆಹಲಿಗೆ ಪತ್ರ ಬರೆದಿದೆ. ಉತ್ತರ ಬಂದಿಲ್ಲ. ಇದು ಬಲವಾದ ಸಾಕ್ಷ್ಯ. ಜ್ಞಾನೇಶ್ ಕುಮಾರ್ ಯಾರನ್ನೋ ರಕ್ಷಣೆ ಮಾಡುತ್ತಿದ್ದಾರೆ. ಚುನಾವಣಾ ಆಯೋಗಕ್ಕೆ ಉತ್ತರ ಗೊತ್ತಿದೆ. ಯಾರವರು ಎಂದು ರಾಹುಲ್ ಗಾಂಧಿ ಪ್ರಶ್ನಿಸಿದ್ದಾರೆ.ಇದು ಹೈಡ್ರೋಜನ್ ಬಾಂಬಲ್ಲ, ಹೈಡ್ರೋಜನ್ ಬಾಂಬ್ ಬರಬೇಕಷ್ಟೇ.ಈ ದೇಶದ ಯುವಕರಿಗೆ ಚುನಾವಣೆಗಳಲ್ಲಿ ಹೇಗೆ ಅಕ್ರಮ ನಡೆಯುತ್ತಿದೆ ಎಂಬುದನ್ನು ತಿಳಿಸುವ ನಿಟ್ಟಿನಲ್ಲಿ ಇದು ಮತ್ತೊಂದು ಮೈಲಿಗಲ್ಲು ಎಂದು ಹೇಳಿದ್ದಾರೆ.ಭಾರತದ




ಮುಖ್ಯ ಚುನಾವಣಾ ಆಯುಕ್ತರು ಭಾರತೀಯ ಪ್ರಜಾಪ್ರಭುತ್ವವನ್ನು ನಾಶ ಮಾಡಿದವರನ್ನು ರಕ್ಷಿಸುತ್ತಿದ್ದಾರೆ. ಈ ವೇದಿಕೆಯಲ್ಲಿ ನಾನು ಶೇ.100 ರಷ್ಟು ಸತ್ಯವಾದ ವಿಚಾರವನ್ನೇ ಹೇಳುತ್ತಿದ್ದೇನೆ. ನನ್ನ ದೇಶವನ್ನು ಪ್ರೀತಿಸುವ ವ್ಯಕ್ತಿ ನಾನು. ನನ್ನ ಸಂವಿಧಾನವನ್ನು ಪ್ರೀತಿಸುತ್ತೇನೆ. ನಾನು ಪ್ರಜಾಪ್ರಭುತ್ವವನ್ನು ಪ್ರೀತಿಸುತ್ತೇನೆ. ಅದನ್ನು ರಕ್ಷಿಸುತ್ತಿದ್ದೇನೆ. ಶೇ.100 ರಷ್ಟು ಸತ್ಯವಲ್ಲದ ಯಾವ ವಿಚಾರವನ್ನೂ ನಾನಿಲ್ಲಿ ನಿಮಗೆ ಹೇಳಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಆಳಂದ ಶಾಸಕ ಬಿ.ಆರ್.ಪಾಟೀಲ್ ನೇತೃತ್ವದಲ್ಲಿ ಮತದಾರರನ್ನ ಕರೆಸಿ ಸುದ್ದಿಗೋಷ್ಠಿ ಮುಂದೆ ನಿಲ್ಲಿಸಿ ರಾಹುಲ್ ಗಾಂಧಿ ಸಾಕ್ಷಿ ಹೇಳಿಸಿದ್ದಾರೆ. ಗೋದಾಬಾಯಿ, ಸೂರ್ಯಕಾಂತ್, ನಾಗರಾಜ್ ಎಂಬವರು ಹಾಜರಿದ್ದರು. ಈ ವೇಳೆ ಮಾತನಾಡಿದ ಸೂರ್ಯಕಾಂತ್, ನಾನು ಡಿಲೀಟ್ ಮಾಡಿಸಿಲ್ಲ. ಈ ಬಗ್ಗೆ ದೂರು ಕೊಟ್ಟಿದ್ದೇನೆ ಎಂದು ಮಾಹಿತಿ ನೀಡಿದ್ದಾರೆ.

## ರಾಹುಲ್ ಗಾಂಧಿ ಆರೋಪ ಆಧಾರ ರಹಿತ: ಜ್ಞಾನೇಶ್ ಕುಮಾರ್



ಮತಕಳ್ಳರನ್ನು ರಕ್ಷಿಸಲಾಗುತ್ತಿದೆ ಎಂಬ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಮಾಡಿರುವ ಆರೋಪಗಳು ಆಧಾರರಹಿತ ಎಂದು ಭಾರತೀಯ ಚುನಾವಣಾ ಆಯೋಗದ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಗುರುವಾರ ಹೇಳಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ ಮಾಡಿದ ಆರೋಪಗಳು ತಪ್ಪಾಗಿದ್ದು ಮತ್ತು ಆಧಾರರಹಿತವಾಗಿವೆ. ಯಾವುದೇ ವ್ಯಕ್ತಿ ಆನ್‌ಲೈನ್‌ನಲ್ಲಿ ಯಾವುದೇ ಮತವನ್ನು ಅಳಿಸಲು ಸಾಧ್ಯವಿಲ್ಲ, ರಾಹುಲ್ ಗಾಂಧಿಯವರ ಚಿಂತನ ತಪ್ಪು. ಬಾಧಿತ ವ್ಯಕ್ತಿಯ ಒಪ್ಪಿಗೆ ಇಲ್ಲದೆಯೇ ಯಾವುದೇ ಮತವನ್ನು ಅಳಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

## ಇಡೀ ದೇಶದಲ್ಲಿ ಮತಗಳ್ಳತನ ಆಗಿದೆ ರಾಮಲಿಂಗಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸೆ.18: ಇಡೀ ದೇಶದಲ್ಲಿ ವೋಟ್ ಚೋರಿ ಆಗಿದೆ. ಚುನಾವಣೆ ಆಯೋಗದಿಂದ ನಮಗೆ ನ್ಯಾಯ ಸಿಗಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕಿಡಿಕಾರಿದರು.ವೋಟ್ ಚೋರಿ ಬಗ್ಗೆ ರಾಹುಲ್ ಗಾಂಧಿ ಸುದ್ದಿಗೋಷ್ಠಿ ಸಂಬಂಧ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಲೋಕಸಭೆ ಚುನಾವಣೆ ವೇಳೆ ಮೂರನೇ ಎಲೆಕ್ಷನ್ ಆಗುವ ಹೊತ್ತಿಗೆ ಬಿಜೆಪಿಯವರ ಪಾಪ್ಯುಲಾರಿಟಿ ಕಡಿಮೆ ಆಯಿತು. ಹೀಗಾಗಿ ಗೆಲ್ಲೋಕೆ ದೇಶದ ಎಲ್ಲಾ ಭಾಗದಲ್ಲಿ ಮತ ತೆಗೆಯೋ ಕೆಲಸ ಮಾಡಿದರು. ಮಹದೇವಪುರ, ಆಳಂದ ಸೇರಿ ಹಲವು ಕಡೆ ಹೀಗೆ ಮಾಡಿದ್ದಾರೆ. ಬಿಜೆಪಿ ಅವರು ಅಧಿಕಾರ ಇರುವ ಕಡೆ ವಿಪಕ್ಷಗಳ ಕ್ಷೇತ್ರದ ಕಡೆ ಜಾಸ್ತಿ ಮಾಡಿದ್ದಾರೆ. ಇಂತಹ ಮತ ಅಕ್ರಮ ದೇಶದಲ್ಲಿ ವ್ಯಾಪಕವಾಗಿ ನಡೆಯುತ್ತಿದೆ. ಎಲೆಕ್ಷನ್ ಕಮಿಷನ್ ಕೇಂದ್ರದ ಕೈಗೊಂಬೆಯಾಗಿದೆ. ನಮಗೆ ಕಮಿಷನ್‌ನಿಂದ ನ್ಯಾಯ ಸಿಗುವ ಭರವಸೆ ಇಲ್ಲ. ಸುಪ್ರೀಂಕೋರ್ಟ್‌ಗೆ ಹೋಗಬೇಕು ಅಷ್ಟೆ ಎಂದು ತಿಳಿಸಿದರು.ರಾಜ್ಯದಲ್ಲಿ ಮತಪರಿಷ್ಕರಣೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಎಲೆಕ್ಷನ್ ಕಮಿಷನ್ ಕೇಂದ್ರದ ಕೈಗೊಂಬೆ ಆಗಿದೆ. ಮೋದಿ, ಅಮಿತ್ ಶಾ ಅವರು ಹೇಳಿದ್ದಕ್ಕೆ ಮುದ್ರೆ ಒತ್ತುತ್ತಾರೆ. ಕಾಂಗ್ರೆಸ್ ಪ್ರಬಲ ಇರುವ ಕಡೆ ಅಕ್ರಮ ಮಾಡ್ತಿದ್ದಾರೆ. ಮತ ತೆಗೆಯೋದು ಅಲ್ಲ. ಸೇರಿಸೋ ಕೆಲಸ ಮಾಡ್ತಾರೆ. ಮಹಾರಾಷ್ಟ್ರದಲ್ಲಿ ಒಂದೇ ದಿನ 40-50 ಲಕ್ಷ ಮತ ಸೇರ್ಪಡೆ ಮಾಡಿದ್ದಾರೆ. ಇವರು ಮಹಾರಾಷ್ಟ್ರ ಚುನಾವಣೆ ಮೋಸದಿಂದ ಗೆದ್ದಿದ್ದು. ಆಳಂದ, ಗಾಂಧಿನಗರ ಸೇರಿ ಬೇಕಾದಷ್ಟು ಕಡೆ ಈ ಅಕ್ರಮ ಆಗಿದೆ ಎಂದು ಆರೋಪಿಸಿದರು.



## ವೋಟ್ ಚೋರಿ: ಸಿಐಡಿ ಆಯೋಗಕ್ಕೆ 18 ಪತ್ರ ಬರೆದಿದ್ದರೂ ಒಂದಕ್ಕೂ ಉತ್ತರವಿಲ್ಲ: ಖರ್ಗೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಸೆ.18:ಆಳಂದ್ ಕ್ಷೇತ್ರದಲ್ಲಿ ಸಾಮೂಹಿಕ ಮತದಾರರ ಅಳಿಸುವಿಕೆಯನ್ನು ಬಹಿರಂಗಪಡಿಸಿದ ಪಕ್ಷದ ನಾಯಕ ರಾಹುಲ್ ಗಾಂಧಿಯನ್ನು ಶ್ಲಾಘಿಸಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ನಿಜವಾದ ಮತದಾರರನ್ನು ಡಿಲೀಟ್ ಮಾಡಲು ಪ್ರಯತ್ನಿಸುತ್ತಿರುವವರನ್ನು ಚುನಾವಣಾ ಆಯೋಗ ರಕ್ಷಿಸುತ್ತಿದೆ ಎಂದು ಆರೋಪಿಸಿದ್ದಾರೆ. ಆಳಂದ್ ಮತದಾರರ ಅಳಿಸುವಿಕೆ ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿ, ಕಳೆದ 18 ತಿಂಗಳಲ್ಲಿ ಚುನಾವಣಾ ಆಯೋಗಕ್ಕೆ 18 ಪತ್ರಗಳನ್ನು ಬರೆದಿದೆ. ಆದರೆ ಅಪರಾಧಿಗಳನ್ನು ಪತ್ತೆಹಚ್ಚಲು ಅಗತ್ಯವಾದ ನಿರ್ಣಾಯಕ ಮಾಹಿತಿಯನ್ನು ಇಸಿಐ ಇದುವರೆಗೂ ನೀಡಿಲ್ಲ. ಚುನಾವಣಾ ಆಯೋಗ ಕಲ್ಲಿನ ಗೋಡೆಯಂತೆ ನಿಂತು ಆರೋಪಿಗಳನ್ನು ರಕ್ಷಿಸುತ್ತಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಸೂಕ್ತ ಪುರಾವೆಗಳೊಂದಿಗೆ ಶಸ್ತ್ರಸಜ್ಜಿತವಾದ ರಾಹುಲ್ ಗಾಂಧಿ ಅವರು ಕರ್ನಾಟಕದ ಆಳಂದ್ ವಿಧಾನಸಭೆಯಲ್ಲಿ ಸಾಮೂಹಿಕ ಮತ ಅಳಿಸುವಿಕೆಯನ್ನು ಬಹಿರಂಗಪಡಿಸಿದ್ದಾರೆ ಎಂದು ಖರ್ಗೆ ಎಕ್ಸ್ ನಲ್ಲಿ ಹೇಳಿದ್ದಾರೆ.ಮೂರು ಪ್ರಶ್ನೆಗಳನ್ನು ಎತ್ತಿರುವ ಖರ್ಗೆ, ಚುನಾವಣಾ ಆಯೋಗ ಯಾರನ್ನು ರಕ್ಷಿಸುತ್ತಿದೆ? ನಮ್ಮ ಪ್ರಜಾಪ್ರಭುತ್ವವನ್ನು ರಕ್ಷಿಸಲು ನೇಮಕಗೊಂಡಿರುವ ಸಂಸ್ಥೆಗಳನ್ನೇ ಬಿಜೆಪಿ ನಾಶಪಡಿಸುತ್ತಿದೆಯೇ? ವೋಟ್ ಚೋರಿ ಫ್ಯಾಕ್ಟರಿ ಚುನಾವಣಾ ವ್ಯವಸ್ಥೆಯನ್ನು ಬುಡಮೇಲು ಮಾಡುತ್ತಿರುವಾಗ ನಾವು ಪ್ರಜಾಪ್ರಭುತ್ವನ್ನು ಉಳಿಸಲು ಸಾಧ್ಯವೇ? ಎಂದು ಖರ್ಗೆ ಪೋಸ್ಟ್ ಮಾಡಿದ್ದಾರೆ.ಪಕ್ಷದ ಹಿರಿಯ ನಾಯಕ ಅಶೋಕ್ ಗೆಹ್ಲೋಟ್ ಅವರು, ನಕಲಿ ಲಾಗಿನ್ ರಚಿಸಿ 12 ಜನರೊಂದಿಗೆ ತನ್ನ ಹೆಸರನ್ನು ಡಿಲೀಟ್ ಮಾಡಿದ ಗೋದಾಬಾಯಿಯ ಉದಾಹರಣೆಯನ್ನು ಸಹ ನೀಡಿದ್ದಾರೆ.



## ಪ್ರತಿಪಕ್ಷಗಳು ಅಧಿಕಾರಕ್ಕೆ ಬಂದರೆ ಬಿಹಾರ ನುಸುಳುಕೋರರಿಂದ ಭರ್ತಿ: ಅಮಿತ್ ಶಾ

ಪಾಟ್ನಾ:ಸೆ.18:ಈ ವರ್ಷದ ಅಕ್ಟೋಬರ್-ನವೆಂಬರ್‌ನಲ್ಲಿ ನಡೆಯಲಿರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟ (ಎನ್‌ಡಿಎ) ಪೂರ್ಣ ಬಹುಮತದೊಂದಿಗೆ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗುರುವಾರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.ಇಂದು ಬಿಹಾರದ ಬೇಗುಸರಾಯ್‌ನಲ್ಲಿ ಭಾರತೀಯ ಜನತಾ ಪಕ್ಷದ (ಬಿಜೆಪಿ) ಕಾರ್ಯಕರ್ತರ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅಮಿತ್ ಶಾ, ಎನ್‌ಡಿಎ ಚುನಾವಣೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಗೆಲ್ಲುತ್ತದೆ. ವಿರೋಧ ಪಕ್ಷದ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಮುಂದಿನ ಬಾರಿ ಚುನಾವಣೆಯಲ್ಲಿ ಸ್ಪರ್ಧಿಸುವ ಧೈರ್ಯ ಮಾಡುವುದಿಲ್ಲ ಎಂದರು.ಬಿಹಾರದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಮತದಾರ ಅಧಿಕಾರ ಯಾತ್ರೆಯನ್ನು ಉಲ್ಲೇಖಿಸಿದ ಅಮಿತ್ ಶಾ, ಯಾತ್ರೆಯು ಮುಖ್ಯವಾಗಿ ಬಾಂಗ್ಲಾದೇಶಿ ನುಸುಳುಕೋರರನ್ನು ರಕ್ಷಿಸುವ ಗುರಿ ಹೊಂದಿದೆ ಎಂದು ಆರೋಪಿಸಿದರು.ಅವರು (ವಿರೋಧ ಪಕ್ಷಗಳು) ಆಕಸ್ಮಿಕವಾಗಿ ಅಧಿಕಾರಕ್ಕೆ ಬಂದರೆ, ಬಿಹಾರದ ಪ್ರತಿಯೊಂದು ಜಿಲ್ಲೆಯು ನುಸುಳುಕೋರರಿಂದ ತುಂಬಿರುತ್ತದೆ ಎಂದು ಅಮಿತ್ ಶಾ ಎಚ್ಚರಿಸಿದರು. ನೀವು ರಾಜ್ಯಾದ್ಯಂತ ಪ್ರಚಾರ ಮಾಡಬೇಕು, ಪ್ರತಿ ಮನೆಗೆ ಭೇಟಿ ನೀಡಿ, ಅವರು ಅಧಿಕಾರಕ್ಕೆ ಬಂದರೆ, ಬಿಹಾರದ ಪ್ರತಿಯೊಂದು ಜಿಲ್ಲೆಯು ನುಸುಳುಕೋರರಿಂದ ತುಂಬಿರುತ್ತದೆ ಎಂದು ಜನರಿಗೆ ತಿಳಿಸಬೇಕು ಎಂದು ಅಮಿತ್ ಶಾ ಪಕ್ಷದ ಕಾರ್ಯಕರ್ತರಿಗೆ ಸೂಚಿಸಿದರು.ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಸಮಯದಲ್ಲಿ ಚುನಾವಣಾ ಆಯೋಗವು ನುಸುಳುಕೋರರ ಹೆಸರುಗಳನ್ನು ಮಾತ್ರ ಅಳಿಸಿದೆ. ಆದರೆ ವಿರೋಧ ಪಕ್ಷವು ಎಸ್‌ಐಆರ್ ವಿಷಯ ಎತ್ತುವ ಮೂಲಕ ಸುಳ್ಳು ನಿರೂಪಣೆ ಮಾಡಲಾಗುತ್ತಿದೆ. ಆದರೆ ನಿಜವಾದ ಮತದಾರರ ಹೆಸರುಗಳನ್ನು ಅಳಿಸಲಾಗಿಲ್ಲ ಎಂದು ಅವರು ಹೇಳಿದರು.ಇದೇ ವೇಳೆ ಕೇಂದ್ರ ಗೃಹ ಸಚಿವರು, ಕೇಂದ್ರದಲ್ಲಿ ನರೇಂದ್ರ ಮೋದಿ ಸರ್ಕಾರದ ಸಾಧನೆಗಳನ್ನು ಮತ್ತು ಬಿಹಾರದಲ್ಲಿ ಎನ್‌ಡಿಎ ಸರ್ಕಾರಕ್ಕೆ ನೀಡಿದ ಸಹಾಯವನ್ನು ಎತ್ತಿ ತೋರಿಸಿದರು.



## ಮತದಾರ ಪಟ್ಟಿ ವಿಶೇಷ ಪರಿಷ್ಕರಣೆ: ರಾಜ್ಯದಲ್ಲಿ ಸಿದ್ಧತೆ ಆರಂಭ

ಮಲ್ಲಮ್ಮ ನುಡಿ ವಾರ್ತೆ


ಬೆಂಗಳೂರು:ಸೆ.18:ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಗೆ ರಾಜ್ಯದಲ್ಲೂ ಸಿದ್ಧತೆಗಳು ನಡೆಯುತ್ತಿದ್ದು, ಭಾರತ ಚುನಾವಣಾ ಆಯೋಗ (ಇಸಿಐ) ದಿನಾಂಕಗಳನ್ನು ಘೋಷಿಸಿದ ನಂತರ ಪರಿಷ್ಕರಣೆ ಕಾರ್ಯ ಆರಂಭವಾಗಲಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬು ಕುಮಾರ್ ಅವರು ಹೇಳಿದ್ದಾರೆ.ಬುಧವಾರ ಬೆಂಗಳೂರಿನಲ್ಲಿ ಆಯೋಜಿಸಲಾದ ಮಾಧ್ಯಮ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಕಳೆದ ಒಂದು ತಿಂಗಳಿನಿಂದ ಕರ್ನಾಟಕದಲ್ಲಿ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಗೆ ಸಿದ್ಧತೆಗಳು ನಡೆಯುತ್ತಿವೆ ಎಂದು ಹೇಳಿದರು.ಇದರ ಭಾಗವಾಗಿ, ನಗರಗಳು ಮತ್ತು ಹಳ್ಳಿಗಳಲ್ಲಿ 58,000 ಬ್ಲಾಕ್ ಮಟ್ಟದ ಅಧಿಕಾರಿಗಳಿಗೆ ಸೆಪ್ಟೆಂಬರ್ 23 ರೊಳಗೆ ತರಬೇತಿ ಪೂರ್ಣಗೊಳ್ಳಲಿದೆ. ಇಸಿಐ ದಿನಾಂಕಗಳನ್ನು ಘೋಷಿಸಿದ ನಂತರ ಪರಿಷ್ಕರಣಾ ಕಾರ್ಯ ಆರಂಭಿಸಲು ಸಿದ್ಧರಿದ್ದೇವೆ ಎಂದು ತಿಳಿಸಿದರು. ಯಾವುದೇ ಅರ್ಹ ಮತದಾರರು ಹೊರಗುಳಿಯದಂತೆ ಮತ್ತು ಅನರ್ಹ ಮತದಾರರನ್ನು ಸೇರಿಸದಂತೆ ಖಚಿತಪಡಿಸಿಕೊಳ್ಳಲು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಮಾಹಿತಿ ನೀಡಿದರು.ಕರ್ನಾಟಕದಲ್ಲಿ 2002ರಲ್ಲಿ ವಿಶೇಷ ತೀವ್ರ ಪರಿಷ್ಕರಣೆ ನಡೆಸಲಾಗಿತ್ತು. ಮತದಾರರ ಪಟ್ಟಿಯನ್ನು ಈಗಾಗಲೇ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ, 2002 ರಲ್ಲಿ 3.4 ಕೋಟಿ ಮತದಾರರಿದ್ದರು, ಈ ಸಂಖ್ಯೆ ಇದೀಗ 5.4 ಕೋಟಿಯಾಗಿದೆ. ಹೀಗಾಗಿ ವ್ಯತ್ಯಾಸಗಳನ್ನು ಗುರುತಿಸಲು, ಪ್ರಸ್ತುತ 2025 ರ ಡೇಟಾವನ್ನು 2002ರ ಡೇಟಾದೊಂದಿಗೆ ಹೋಲಿಕೆ ಮಾಡಲಾಗುತ್ತದೆ ಎಂದು ಹೇಳಿದರು.ಬ್ಲಾಕ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡುತ್ತಾರೆ, ವಿಶಿಷ್ಟ ಕಿಖ ಕೋಡ್‌ಗಳೊಂದಿಗೆ ಎರಡು ಪೂರ್ವ ಭರ್ತಿ ಮಾಡಿದ ಎಣಿಕೆ ಫಾರ್ಮ್‌ಗಳನ್ನು ತೆಗೆದುಕೊಂಡು, ಪ್ರತಿ ಮತದಾರರನ್ನು ಪರಿಶೀಲಿಸುತ್ತಾರೆ.




## ಭಾಲ್ಕಿ: ಚಿನ್ನಾಭರಣ ಕಳವು

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಸೆ.18: ಪಟ್ಟಣದ ಬಾಲಾಜಿ ನಗರದ ಜಾಲೆಂದ್ರ, ಭೀಮಣ್ಣ ಮೇತ್ರೆ ಅವರ ಮನೆ ಬೀಗ ಮುರಿದು ಬುಧವಾರ ಚಿನ್ನಾಭರಣ ಕಳವು ಮಾಡಲಾಗಿದೆ. ಕುಟುಂಬ ಸದಸ್ಯರು ಕಾರ್ಯಕ್ರಮ ನಿಮಿತ್ತ ಮನೆಗೆ ಬೀಗ ಹಾಕಿ ಹೋದಾಗ ಕಳ್ಳರು ಮನೆ ಬೀಗ ಮುರಿದು ಮನೆಯಲ್ಲಿದ್ದ ಸುಮಾರು 14 ತೊಲೆ ಬಂಗಾರ, 40 ತೊಲೆ ಬೆಳ್ಳಿ ದೋಚಿ ಪರಿಯಾಗಿದ್ದಾರೆ.ಕಳ್ಳರ ಪತ್ತೆ ಕಾರ್ಯದ ತನಿಖೆ ಪ್ರಗತಿಯಲ್ಲಿದ್ದು, ಈ ಸಂಬಂಧ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಸಿಪಿಐ ಬಿ. ಅಮರೇಶ ತಿಳಿಸಿದ್ದಾರೆ.

## ಬಾಗಲಕೋಟೆ: ಎರಡು ದಿನಗಳಿಂದ ಭಾರೀ ಮಳೆ: ಕುಸಿದ ಮನೆಯ ಮೇಲ್ಛಾವಣಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಸೆ.18: ಸತತವಾಗಿ ಎರಡು ದಿನಗಳಿಂದ ಸುರಿಯುತ್ತಿರುವ ಸತತ ಮಳೆಗೆ ನೂರಾರು ಎಕರೆಯಲ್ಲಿ ಬೆಳೆದ ಬೆಳೆಗಳು ನಾಶವಾಗಿದ್ದರೆ ಇತ್ತ ಇಳಕಲ್ ತಾಲೂಕಿನ ಗೋನಾಳ್ ಎಸ್ ಟಿ ಗ್ರಾಮದಲ್ಲಿ ಎರಡು ಮನೆಗಳ ಮೇಲ್ಛಾವಣಿ ಕುಸಿದಿವೆ.ಗ್ರಾಮದ ಮಹಾಂತೇಶ ಗೌಡರ್ ಇವರ ಮನೆ ಸಂಪೂರ್ಣ ಕುಸಿದಿದ್ದು, ಮನೆಯ ಮೇಲ್ಛಾವಣಿಯೇ ನೆಲಕ್ಕೆ ಕುಸಿದು ಭಾರಿ ಅನಾಹುತ ಸೃಷ್ಟಿಸಿದೆ. ಇನ್ನು ಅದೇ ಗ್ರಾಮದ ಯಂಕಣ್ಣ ಹಾಳಕೇರಿ ಇವರ ಮನೆಯ ಗೋಡೆಯ ಭಾಗ ಬಿದ್ದಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿಯಾಗಿಲ್ಲ. ಮಳೆಗೆ ಗೋಡೆ ಬಿರುಕು ಬಿಟ್ಟಿದನ್ನು ನೋಡಿದ ಎರಡು ಮನೆಯವರು ಪಕ್ಕದ ಮನೆಗೆ ತೆರಳಿದ್ದಾರೆ. ಅಷ್ಟರಲ್ಲೇ ಮನೆ ಮೇಲ್ಛಾವಣಿ ಕುಸಿದು ಅನಾಹುತ ಸೃಷ್ಟಿಸಿದೆ.

## ಮಹಿಳಾ ಆಯೋಗದ ಅಂಗಳಕ್ಕೆ ಬಂದ ಸಿಂಧನೂರ ಮದುಮೇಹ ಪೀಡಿತ ವಿದ್ಯಾರ್ಥಿನಿಯ ಪಾಲಕರು

ಮಲ್ಲಮ್ಮ ನುಡಿ ವಾರ್ತೆ ರಾಯಚೂರ ಸೆ.18 : ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಇನ್ಸುಲಿನ್ ಸಿಗುತ್ತಿಲ್ಲ. ಮಗಳಿಗೆ ಚಿಕಿತ್ಸೆ ಕೊಡಿಸುವುದು ಹೊರೆಯಾಗುತ್ತಿದೆ ಎಂದು ಸಿಂಧನೂರ ತಾಲೂಕಿನ ಕುರಕುಂದ ಗ್ರಾಮದ ನಿವಾಸಿ ಗುಡದಪ್ಪ ಅವರು ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಅವರ ಬಳಿ ಅಳಲು ತೋಡಿಕೊಂಡರು. ಸೆ.18 ರಂದು, ಸಿಂಧನೂರಿನ ಟೌನ ಹಾಲಗೆ ಮಗಳೊಂದಿಗೆ ಆಗಮಿಸಿದ್ದ ಗುಡದಪ್ಪ ಅವರು ಕಾರ್ಯಕ್ರಮದ ಮಧ್ಯೆದಲ್ಲಿ ವೇದಿಕೆ ಏರಿ ಅಧ್ಯಕ್ಷರ ಬಳಿಗೆ ಬಂದು ತಮ್ಮ ಪುತ್ರಿಯ ಅನಾರೋಗ್ಯದ ವಿಷಯವನ್ನು ಪ್ರಸ್ತಾಪಿಸಿದರು. ಸುಗರ್ ಪ್ರಮಾಣ ಚೆಕ್ ಮಾಡುವ ಸೂಜಿ, ಪಿನ್ ಖರೀದಿ ಮತ್ತು ಇನ್ಸುಲಿನಗೆ ಪ್ರತಿ ತಿಂಗಳು 5 ಸಾವಿರ ರೂ ಖರ್ಚಾಗುತ್ತದೆ. ಬಡವರಾದ ನಮಗೆ ಇದರಿಂದಾಗಿ ಆರ್ಥಿಕವಾಗಿ ಹೊರೆಯಾಗಿ ಪರಿಣಮಿಸಿದೆ ಎಂದು ಗುಡದಪ್ಪ ಅವರು ಅಲವತ್ತುಕೊಂಡರು.ಈ ವೇಳೆ, ಅಧ್ಯಕ್ಷರು ಮದುಮೇಹ ಪೀಡಿತ ವಿದ್ಯಾರ್ಥಿನಿಯೊಂದಿಗೆ ಮಾತನಾಡಿ, ಅವಳ ಆರೋಗ್ಯದ ಬಗ್ಗೆ ಕೇಳಿದರು.ಏಳನೇ ವಯಸ್ಸಿಗೆ ನನಗೆ ಮದುಮೇಹ ಬಂದಿದೆ. ಈಗ 10ನೇ ತರಗತಿಯಲ್ಲಿದ್ದೇನೆ ಎಂದು ವಿದ್ಯಾರ್ಥಿನಿ ತಿಳಿಸಿದಾಗ, ಸಿಂಧನೂರ ತಾಲೂಕು ವೈದ್ಯಾಧಿಕಾರಿಗೆ ವೇದಿಕೆಗೆ ಕರೆದು, ವಿದ್ಯಾರ್ಥಿನಿಯ ದೂರಿನ ಬಗ್ಗೆ ಚರ್ಚಿಸಿದರು.



## ಆಳಂದದಲ್ಲಿ ಅಲ್ಪಸಂಖ್ಯಾತ, ಎಸ್‌ಸಿ ಮತ ಡಿಲೀಟ್ ಗುರಿ

ನವದೆಹಲಿ:ಸೆ.18:2023ರ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಅಲ್ಪಸಂಖ್ಯಾತ, ಪರಿಶಿಷ್ಟ ಜಾತಿ ಮತ್ತು ಹಿಂದುಳಿದ ಜಾತಿಗಳ ಮತದಾರರನ್ನು ಡಿಲೀಟ್ ಮಾಡುವ ಗುರಿ ಇತ್ತು ಎಂದು ಆಳಂದ್ ಕಾಂಗ್ರೆಸ್ ಶಾಸಕ ಬಿ.ಆರ್. ಪಾಟೀಲ್ ಅವರು ಗುರುವಾರ ಆರೋಪಿಸಿದ್ದಾರೆ.2023 ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಬಿಆರ್ ಪಾಟೀಲ್ ಅವರು 10,000 ಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು. ಇಂದು ಮತಗಳ್ಳತನದ ಬಗ್ಗೆ ದೆಹಲಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಆಳಂದ್ ಕ್ಷೇತ್ರದ ಉದಾಹರಣೆಯನ್ನು ಉಲ್ಲೇಖಿಸಿದ್ದರು.ನಂತರ, ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪಾಟೀಲ್, ಮತಗಳ ಅಳಿಸುವಿಕೆ ಬಗ್ಗೆ ನನಗೆ ತಿಳಿದಾಗ, ನಾನು ಮತ್ತು ಸಚಿವ ಪ್ರಿಯಾಂಕ್ ಖರ್ಗೆ ಇಬ್ಬರೂ ಚುನಾವಣಾ ಆಯೋಗ ಮತ್ತು ಜಿಲ್ಲಾಧಿಕಾರಿ ಬಳಿಗೆ ಹೋದೆವು. ನಂತರ ನಾವು ಪತ್ರಿಕಾಗೋಷ್ಠಿ ನಡೆಸಿದೆವು.ನನ್ನನ್ನು ಸೋಲಿಸಲು ಪಿತೂರಿ ನಡೆದಿದೆ. ಮತದಾರರನ್ನು ಡಿಲೀಟ್ ಮಾಡಲು ಯಾರೋ ಚುನಾವಣಾ ಆಯೋಗದ ಫಾರ್ಮ್-7 ಅಡಿಯಲ್ಲಿ ವಿನಂತಿ ಕಳುಹಿಸಿದ್ದಾರೆ. ಈ ಸಂಬಂಧ ಆಗಿನ ಚುನಾವಣಾ ಅಧಿಕಾರಿ ನೀಡಿದ ದೂರಿನ ಆಧಾರದ ಮೇಲೆ ಆಳಂದ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಿಸಲಾಗಿದೆ. ಆದರೆ ಪ್ರಕರಣ ತಾರ್ಕಿಕ ಅಂತ್ಯ ಕಾಣಲಿಲ್ಲ.



## ಬಿಜೆಪಿಯಿಂದ ಫಾರ್ಮ್ 7 ದುರುಪಯೋಗ: ಪ್ರಿಯಾಂಕ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಸೆ.18: ಮೇ 2023ರ ವಿಧಾನಸಭಾ ಚುನಾವಣೆಗೂ ಮುನ್ನ ಮತದಾರರನ್ನು ಸಾಮೂಹಿಕವಾಗಿ ಡಿಲೀಟ್ ಮಾಡಲು ಹಿಂದಿನ ಬಿಜೆಪಿ ಸರ್ಕಾರದ ಅಡಿಯಲ್ಲಿ ಫಾರ್ಮ್ 7 ಅನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಅವರು ಗುರುವಾರ ಆರೋಪಿಸಿದ್ದಾರೆ.

ಚುನಾವಣೆಗೆ ಮುನ್ನ ನಮ್ಮ ಪಕ್ಷದ ಬೆಂಬಲಿಗರ ಮತಗಳನ್ನು ವ್ಯವಸ್ಥಿತವಾಗಿ ಅಳಿಸಲಾಗುತ್ತಿದೆ ಎಂದು ಕಾಂಗ್ರೆಸ್ ನಾಯಕ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪತ್ರಿಕಾಗೋಷ್ಠಿ ನಡೆಸಿ ವಿವರ ನೀಡಿದ್ದಾರೆ. ಈ ನಡುವೆ, ಕಲಬುರಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಹ ಅಳಂದದಲ್ಲಿ ನಡೆದ ಘಟನೆಗಳ ಬಗ್ಗೆ ವಿವರ ನೀಡಿದ್ದಾರೆ. ಫಾರ್ಮ್ 7 ಎಂಬುದು ಇನ್ನೊಬ್ಬ ವ್ಯಕ್ತಿಯ ಹೆಸರನ್ನು ಸೇರಿಸುವುದಕ್ಕೆ ಆಕ್ಷೇಪ ವ್ಯಕ್ತಪಡಿಸಲು ಅಥವಾ ಒಬ್ಬರ ಹೆಸರನ್ನು ಡಿಲೀಟ್ ಮಾಡಲು ಅಥವಾ ಸಾವು ಹಾಗೂ ಸ್ಥಳಾಂತರಗೊಂಡಿದ್ದರೆ ಅವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವಂತೆ ಕೋರುವ ಅರ್ಜಿಯಾಗಿದೆ. ಅಳಂದ್ (ಕಲಬುರಗಿ ಜಿಲ್ಲೆಯಲ್ಲಿ) ದಲ್ಲಿನ ವೋಟ್ ಚೋರಿಯು ದೊಡ್ಡ ಪ್ರಮಾಣದ ಮತದಾರರ ಅಳಿಸುವಿಕೆಯ ಆಘಾತಕಾರಿ ಪ್ರಕರಣವಾಗಿದೆ.



## ಅನ್ನಭಾಗ್ಯ ಅಕ್ಕಿ ಅಕ್ರಮ ಸಾಗಾಟ : 2.62 ಲಕ್ಷ ಮೌಲ್ಯದ ಅಕ್ಕಿ ಜಪ್ತಿ, ಓರ್ವ ಅರೆಸ್ಟ್

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಸೆ.18:ಜಿಲ್ಲೆಯ ಶಹಾಪುರ ತಾಲೂಕಿನಲ್ಲಿ ಅನ್ನಭಾಗ್ಯ ಅಕ್ಕಿ ಅಕ್ರಮ ಸಾಗಾಟ ದಂಧೆಯೊಂದು ಬೆಳಕಿಗೆ ಬಂದಿದೆ. ಪೊಲೀಸರು 2.62 ಲಕ್ಷ ರೂ. ಮೌಲ್ಯದ ಅಕ್ಕಿ, ಗೂಡ್ಸ್ ವಾಹನವೊಂದನ್ನು ಸೀಜ್ ಮಾಡಿದ್ದು, ಓರ್ವ ಆರೋಪಿಯನ್ನು ಬಂಧಿಸಿದ್ದಾರೆ.ಆರೋಪಿ ರಾಜು ಪವಾರ್ ಎಂಬಾತನನ್ನು ಬಂಧಿಸಿದ್ದು, ಇನ್ನೋರ್ವ ಆರೋಪಿ ದೇವರಾಜ ರಾಠೋಡ್ ಪರಾರಿಯಾಗಿದ್ದಾನೆ.ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಸ್ವಕ್ಷೇತ್ರದಲ್ಲಿ ಅನ್ನಭಾಗ್ಯ ಅಕ್ಕಿ ಪತ್ತೆಯಾಗಿದೆ. ಶಹಾಪುರ ತಾಲೂಕಿನ ಗೋಗಿ ಗ್ರಾಮದ ಹೊರವಲಯದಲ್ಲಿ ಪಡಿತರ ಕಾರ್ಡ್‌ದಾರರಿಂದ ಅಕ್ಕಿ ಖರೀದಿಸಿ ಸಾಗಾಟ ಮಾಡಲಾಗ್ತಿತ್ತು. ಈ ವೇಳೆ ಆಹಾರ ನಿರೀಕ್ಷಕ ಬಸವರಾಜ್ ಹಾಗೂ ಪಿಎಸ್‌ಐ ದೇವಿಂದ್ರರೆಡ್ಡಿ ಅವರು ದಾಳಿ ನಡೆಸಿದ್ದಾರೆ. ತೆಲಂಗಾಣ ಪಾಸಿಂಗ್ ಹೊಂದಿರುವ ಗೂಡ್ಸ್ ವಾಹನದಲ್ಲಿ 2.62 ಲಕ್ಷ ರೂ. ಮೌಲ್ಯದ 158 ಚೀಲಗಳಲ್ಲಿ ಅನ್ನಭಾಗ್ಯ ಅಕ್ಕಿ ಪತ್ತೆಯಾಗಿದೆ.

ಪೊಲೀಸರು ಅಕ್ಕಿ ಸಹಿತ ಗೂಡ್ಸ್ ವಾಹನವನ್ನು ಜಪ್ತಿ ಮಾಡಿಕೊಂಡಿದ್ದು, ಗೋಗಿ ಠಾಣೆಯಲ್ಲಿ ಈ ಬಗ್ಗೆ ಕೇಸ್ ದಾಖಲಾಗಿದೆ. ಇನ್ನೂ ಚಾಮನಾಳ ತಾಂಡಾದ ವ್ಯಾಪ್ತಿಯ ಮನೆಯೊಂದರಲ್ಲಿ ಅಕ್ರಮವಾಗಿ ಸಂಗ್ರಹ ಮಾಡಿರುವ ಪಡಿತರ ಅಕ್ಕಿ ಖರೀದಿ ಮಾಡಿ, ಗೂಡ್ಸ್ ವಾಹನದಲ್ಲಿ ಸಾಗಾಟ ಮಾಡಲಾಗ್ತಿತ್ತು ಎಂದು ತಿಳಿದುಬಂದಿದೆ.

ಇತ್ತೀಚೆಗೆ ಗುರುಮಠಕಲ್‌ನಲ್ಲಿಯೂ ಅನ್ನಭಾಗ್ಯ ಅಕ್ಕಿ ಅಕ್ರಮ ಮಾರಾಟ ಜಾಲ ಪತ್ತೆಯಾಗಿತ್ತು.

ಏಷ್ಯಾಕಪ್:ದುಬೈನಲ್ಲಿ ಸೆ.21 ರಂದು ಭಾರತ-ಪಾಕ್ ಕ್ರಿಕೇಟ್ ತಂಡಗಳ ಮಧ್ಯೆ ಮತ್ತೆ ನೇರ ಹಣಾಹಣಿ ನಡೆಯಲಿದೆ.

# ವಿಶ್ವಕರ್ಮರು ಜ್ಞಾನ ತಂತ್ರಜ್ಞಾನದ ಹರಿಕಾರರು: ನವೀನಸ್ವಾಮೀಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.18–ಮನುಷ್ಯ ನಾಗರೀಕತೆಯ ಬೆಳವಣಿಗೆಯಲ್ಲಿ ಪಂಚಾಳ ವೃತ್ತಿಗಳ ಪಾಲು ಬಹುದೊಡ್ಡದಾಗಿದ್ದು ವಿಶ್ವಕರ್ಮರು ಜ್ಞಾನ ವಿಜ್ಞಾನ ತಂತ್ರಜ್ಞಾನದ ಹರಿಕಾರರು ಎಂದು ಮುರನಾಳದ ಮಳೆರಾಜೇಂದ್ರಸ್ವಾಮಿ ಮಠದ ಪೂಜ್ಯರಾದನವೀನಮಹಾಸ್ವಾಮಿಗಳು ಹೇಳಿದರು. ಮುರನಾಳ ಪುನರವಸತಿ ಕೇಂದ್ರದಲ್ಲಿ ವಿಶ್ವಕರ್ಮ ಸಮಾಜ ಕ್ಷೇಮಾಭಿವೃದ್ಧಿ ಸಂಘದಿಂದ ಬುಧವಾರ ಹಮ್ಮಿಕೊಂಡ ವಿಶ್ವಕರ್ಮ ಪೂಜಾ ಮಹೋತ್ಸವ ಹಾಗೂ ಧಾರ್ಮಿಕ ಸಭೆಯ ದಿವ್ಯಸಾನಿಧ್ಯವನ್ನು ವಹಿಸಿ ಮಾತನಾಡಿದ ಅವರು, ವಿಷಯ ಜ್ಞಾನವೆಂದರೆ ಭೌತಿಕ ತಿಳುವಳಿಕೆಯನ್ನು ಸಾಮಾಜಿಕ ವಿವೇಕವನ್ನಾಗಿ ಪರಿವರ್ತಿಸುವುದು. ಉಪಕರಣ ಜ್ಞಾನವೆಂದರೆ ಗುಣ ಮತ್ತು ಸ್ವಭಾವ ಭೇದವಿಲ್ಲದೆ ವಸ್ತುವಿನಲ್ಲಿನ ವಿಷಯವನ್ನು ಅಥವಾ ಆಕೃತಿಯನ್ನು ಉಪಕರಣಗಳ ಮೂಲಕ ಅನಾವರಣ ಮಾಡಿ ಲೋಕ ಬಳಕೆಗೆ ಸಾಧ್ಯವಾಗಿಸುವುದು. ಸಾಂಸ್ಕೃತಿಕ ದರ್ಶನವನ್ನಾಗಿಸುವುದು ಎಂದರು.



ಜಗತ್ತಿನ ಚೇತನ ಅಚೇತನಗಳಲ್ಲಿ ಅಸಾಧಾರಣ ಚೈತನ್ಯತುಂಬಿ ಮಾನವ ಕುಲದ ಸೌಂದರ್ಯ ಹಾಗೂ ಸ್ವಾಸ್ಥ್ಯ ಬದುಕಿಗೆ ಕಾರಣವಾಗುತ್ತ ಬಂದವರೇ ವಿಶ್ವಕರ್ಮರಾಗಿದ್ದಾರೆ. ವಿಶ್ವಕರ್ಮ ಎನ್ನುವುದೇ ಜ್ಞಾನವೆಂಬ ಒಳಗಣ್ಣಿನಿಂದ ತನ್ನನ್ನು ತಾನು ಬೆಳಗಿಕೊಂಡು ತನ್ನೆದುರಿನ ಲೋಕವನ್ನು ಬೆಳಗಿ ಸಂಸ್ಕರಿಸುವ ಹಾಗೂ ಸುಂದರೀಕರಿಸುವ ತತ್ತ್ವವಾಗಿದೆ ಎಂದು ಸ್ವಾಮೀಜಿ ಹೇಳಿದರು. ಮೌನೇಶ ಸ್ವಾಮಿಗಳು ಮಾತನಾಡಿ, ವಿಶ್ವಕರ್ಮ ತನ್ನ ಸಂಕಲ್ಪಮಾತ್ರದಿಂದಲೇ ಸಕಲವನ್ನು ಸೃಷ್ಟಿಸಿದವನು. ಜಗತ್ತಿನ ಜನರೆಲ್ಲರ ಹಿತಕ್ಕಾಗಿ ಅಗ್ನಿಷ್ಟೋಮಾದಿಯಾಗಗಳನ್ನು, ಎಲ್ಲಾ ವರ್ಣಗಳ ಪ್ರಾಣಿಗಳ ಸ್ಥಿತಿ ಕಾರಣಕ್ಕಾಗಿ ಶಿಲೆ, ಲೋಹ, ಕಾಷ್ಠ, ಸ್ವರ್ಣ ಮೊದಲಾದ ಪ್ರತಿಮಾ ಪಂಚಶಿಲ್ಪಗಳನ್ನು ನಿರ್ಮಿಸಿದವನು.

ವಿವಾಹಾದಿ ಯಜ್ಞಗಳಲ್ಲಿ ತೊಡಗುವವನೂ, ಗೃಹಾರಾಮಗಳನ್ನು ನಿರ್ಮಿಸುವವನೂ, ವೇದಾಧ್ಯಯನ ಪಾರಾಯಣನೂ, ಕಲೆಗಳಲ್ಲಿ ಪರಿಣಿತನೂ, ವಾಸ್ತುವಿದ್ಯಾ ಕೋವಿದನೂ, ಧರ್ಮನಿಷ್ಠನೂ, ಅಸಿಕರ್ಮ, ಲಿಪಿಕರ್ಮ, ಕೃಷಿಕರ್ಮ, ಶಾಸ್ತ್ರಜೀವನ, ವಾಣಿಜ್ಯಕರ್ಮಗಳೆಂಬ ಷಟ್ಕರ್ಮಗಳಲ್ಲಿ ನಿರತನಾದವನೂ, ಕರ್ಮವನ್ನೇಯೋಗಮಾಡಿಕೊಂಡವನೂ, ಜ್ಞಾನ ಮತ್ತು ಕರ್ಮಮಾರ್ಗಗಳನ್ನು ಸಮನ್ವಯ ಮಾಡಿ ಜಗತ್ತನ್ನು ಸಮಚಿತ್ತದಿಂದ ನಡೆಸುವವನೇ ವಿಶ್ವಕರ್ಮ ಪರಮಾತ್ಮನಾಗಿದ್ದಾನೆ ಎಂದರು. ಉಪನ್ಯಾಸ ನೀಡಿದ ಸಾಹಿತಿ ಡಾ. ಚಂದ್ರಶೇಖರ ಕಾಳನ್ನವರ, ಒಂದು ಜನಾಂಗದ ಒಂದು ಯುಗದ ಚಿಂತನೆಗಳ ಸಂಯುಕ್ತ ಅಭಿವ್ಯಕ್ತಿಗಳು. ರಾಮ, ಕೃಷ್ಣ, ಈಶ್ವರ, ಗಣಪತಿ, ಯಾವುದೇ ದೈವ ಅಥವಾ ಮಾನವ ಶಿಲ್ಪಗಳು ಅರಮನೆ, ಕೋಟೆ ಕೊತ್ತಲಗಳು ಶಿಲ್ಪಿಯ ವೈಯಕ್ತಿಕ ದರ್ಶನದ ಆವಿಷ್ಕಾರಗಳೂ ಆದಂತೆ. ಅವು ಒಂದು ಜನಾಂಗದ, ಒಂದು ಕಾಲಧರ್ಮದ, ಒಂದು ಸಂಸ್ಕೃತಿಯ ವೈಚಾರಿಕ ಪ್ರಜ್ಞೆಗಳೂ ಹೌದು. ವಿಶ್ವಕರ್ಮ ಆತ್ಮ ಸಂಸ್ಕೃತಿಯ ಪ್ರತೀಕ. ಇಂತಹ ಆತ್ಮ ಸಂಸ್ಕೃತಿಯ ಪ್ರತೀಕವಾದ ಶಿಲ್ಪಗಳ ಆರಾಧನೆಯಿಂದ, ಆರಾಧಕ ತನ್ನನ್ನು ತಾನು ಸಂಸ್ಕಾರ ಮಾಡಿಕೊಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಮಾಜದ ಹಿರಿಯರಾದ ಶಂಕ್ರಪ್ಪ ಬಡಿಗೇರ ವಹಿಸಿದ್ದರು. ವೇದಿಕೆ ಮೇಲೆ ಹಿರಿಯರಾದ ಹುಚ್ಚಪ್ಪ ಶಿರೂರ, ರಾಮಣ್ಣ ಗಣಿ,

ವಿಶ್ವಕರ್ಮ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಅಶೋಕ ಪತ್ತಾರ, ಉಪಾಧ್ಯಕ್ಷ ಚಂದ್ರಶೇಖರ ಪತ್ತಾರ ಶಿಲ್ಪಿ. ರುಕ್ಮಣ್ಣ ಪತ್ತಾರ, ಗಂಗಾಧರ ಬಡಿಗೇರ, ನಾರಾಯಣ ಬಡಿಗೇರ, ಈರಣ್ಣ ಬಡಿಗೇರ, ಅಪ್ಪಣ್ಣ ಬಡಿಗೇರ, ಮೌನೇಶ ಬಡಿಗೇರ, ಹನಮಂತ ಪತ್ತಾರ, ಮಂಜು ಜಿ ಪತ್ತಾರ, ಶಿವು ಬಡಿಗೇರ, ಮುತ್ತು ಪತ್ತಾರ. ಸುನೀಲ ಬಡಿಗೇರ, ಶಿವಣ್ಣ ಬೂದಿಹಾಳ, ಅಶೋಕ ಬಾಳಿಕಾಯಿ, ರಂಗಪ್ಪ ರೊಳ್ಳಿ, ಮಂಜು


ಬಾರಕೇರ, ಶ್ರೀಶೈಲ ಬಾಲಿಕಾಯಿ, ಸಿದ್ದಪ್ಪ ಮುಚಖಂಡಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಾಧನೆಗೈದ ಸಾಧಕರಿಗೆ ಹಾಗೂ ಧಾನಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಸಂಗಮೇಶ ಬ್ಯಾಳಿ ಕಾರ್ಯಕ್ರಮ ನಿರೂಪಿಸಿದರು. ಬೆಳಿಗ್ಗೆ ವಿಶ್ವಕರ್ಮ ಪ್ರಭುವಿನ ಭಾವಚಿತ್ರ ಹಾಗೂ ಪಲ್ಲಕ್ಕಿ ಮೆರವಣಿಗೆ ಕುಂಭ ಮೇಳದೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಗ್ರಾಮದೇವಿ ದೇವಸ್ಥಾನ ತಲುಪಿತು. ಪಲ್ಲಕ್ಕಿ ಉತ್ಸವ ನೋಡುಗರ ಗಮನ ಸೆಳೆಯಿತು.



ಭಾಲ್ಕಿ: ತಾಲೂಕಿನ ಕಲವಾಡಿ ಗ್ರಾಮದ ಮಹಾತ್ಮಾಗಾಂಧಿ ಪ್ರೌಢಶಾಲೆಯಲ್ಲಿ, ಕಲ್ಯಾಣ ಕರ್ನಾಟಕ ಉತ್ಸವ ನಿಮಿತ್ಯ ಆಯೋಜಿಸಿದ್ದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಮುಖ್ಯಶಿಕ್ಷಕ ಕಿರಣಕುಮಾರ, ನಿವೃತ್ತ ಮುಖ್ಯಶಿಕ್ಷಕ ಜಯರಾಜ ದಾಬಶೆಟ್ಟಿ, ಶಿಕ್ಷಕಿ ವಿಜಯಲಕ್ಷ್ಮೀ ರಾಠೋಡ, ಶಿಕ್ಷಕರಾದ ವಿಜಯಕುಮಾರ ಗುತ್ತೆದಾರ, ಪ್ರವೀಣ ಸಿಂಧೆ, ಶಿವಕುಮಾರ ವಾಡಿಕರ, ಆನಂದ ಖಂಡಗೊಂಡ, ಓಂಝುಡ್ ಬಿರಾದಾರ, ಪ್ರದೀಪ ಜೋಳದಪಕೆ ಇದ್ದರು

# ದೇವಿನಗರದಲ್ಲಿ ಭವಾನಿ ಮಾತೆಯ 43ನೇ ನವರಾತ್ರಿ ಮಹೋತ್ಸವ - ಕರಪತ್ರ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.18: ಪಟ್ಟಣದ ಪ್ರವಾಸಿ ಮಂದಿರದಲ್ಲಿ, ದೇವಿನಗರ ಭವಾನಿ ಮಂದಿರದ ನವರಾತ್ರಿ ಉತ್ಸವ ಸಮಿತಿಯ ವತಿಯಿಂದ ಗುರುವಾರ ದೇವಿನಗರದ ಭವಾನಿ ಮಾತೆಯ 43ನೇ ನವರಾತ್ರಿ ಮಹೋತ್ಸವದ ಕರಪತ್ರ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನವರಾತ್ರಿ ಉತ್ಸವ ಸಮಿತಿಯ ಅಧ್ಯಕ್ಷ ದಿಲೀಪ ಢವಳೆ, ಸೆ.21 ರಂದು ಸಂಜೆ 6.15 ಕ್ಕೆ ಘಟಸ್ಥಾಪನೆ ಮತ್ತು ಮಹಾಪೂಜೆ, ಸಂಜೆ 9 ಗಂಟೆಗೆ ವಿಲಾಸ ವಾಘಮಾರೆಯವರಿಂದ ದೇವಿ ಪ್ರವಚನ, ತಾನಾಜಿ IÄK-tÄPÉ ಇವರಿಂದ ಮಹಾಪ್ರಸಾದ ನಡೆಯಲಿದೆ. ಸೆ.23 ರಂದು ಸಂಜೆ 5.30ಕ್ಕೆ ಸಂಗಶೆಟ್ಟಿ ವಿರಶೆಟ್ಟಿ ಡೋಣಗಾಪುರ ಇವರಿಂದ ಸಂಗೀತ ಕಾರ್ಯಕ್ರಮ, ಸೆ.25 ರಂದು ಸಂಜೆ 5 ಗಂಟೆಗೆ ಕಸಾಪ ವತಿಯಿಂದ ಕವಿಗೋಷ್ಠಿ, ಪ್ರತಿಭಾ ಪುರಸ್ಕಾರ ಮತ್ತು ವಿಚಾರ ಸಂಕಿರಣ ನಡೆಯಲಿದೆ. ಸೆ.26 ರಂದು ಸಾಯಂಕಾಲ 8 ಗಂಟೆಗೆ ಸಂಸದ ಸಾಗರ ಖಂಡ್ರೆಯವರಿಂದ ಮಹಾ ಮಂಗಳಾರತಿ, ಸೆ.28 ರಂದು ಸಬೆಳಿಗ್ಗೆ 5.30 ರಿಂದ 7 ಗಂಟೆಯವರೆಗೆ ಯೋಗ ಮತ್ತು ವ್ಯಾಯಾಮ, ಬೆಳಗಿನ ಉಪಹಾರ ವ್ಯವಸ್ಥೆ ಬಸವಭಾಗ್ಯ ಎಜುಕೇಶನ ಮತ್ತು ಚಾರಿಟೆಬಲ್ ಟ್ರಸ್ಟ್ ವತಿಯಿಂದ ನಡೆಯಲಿದೆ. ಸೆ.30 ರಂದು ಬೆಳಿಗ್ಗೆ 8 ಗಂಟೆಗೆ ಪೂಜಾ ಹಾಗು ಮಹಾಪ್ರಸಾದ, ಸಂಜೆ 5 ಗಂಟೆಗೆ ಗ್ಲೋರಿ ಮೆಲೋಡಿಸ್ ವತಿಯಿಂದ ಸಂಗೀತ ರಸಮಂಜರಿ, ಅಕ್ಟೋಬರ್ 1ರಂದು ಮಹಾನವಮಿ ಪೂಜೆ ನಡೆಯಲಿದೆ. ಅ.2 ರಂದು ವಿಜಯ ದಶಮಿ ನಿಮಿತ್ಯ ಸಚಿವ ಈಶ್ವರ ಖಂಡ್ರೆಯವರಿಂದ ಮಹಾ ಮಂಗಳಾರತಿ, ಅ.6 ರಂದು ಕೋಜಾಗಿರಿ ಹುಣ್ಣಿಮೆ ನಿಮಿತ್ಯ ಸಂದೀಪಮಹಾರಾಜ ತೆಲಗಾಂವಕರ ವತಿಯಿಂದ ಕೀರ್ತನೆ, ಸೆ.7 ರಂದು ಬೆಳಿಗ್ಗೆ 9 ಗಂಟೆಗೆ ದೇವಿ ಪಲ್ಲಕ್ಕಿ ಮೆರವಣಿಗೆ ನಡೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುರಳಿಧರ ತೋರಖಡೆ, ವಿಜಯಕುಮಾರ ಗರುಡಕರ, ಸೂರ್ಯಕಾಂತ ಡೂಕೆ, ಸಂತೋಷ ಬಿಜಿಪಾಟೀಲ, ನಾಗಭೂಷಣ ಮಾಮಡಿ, ಮಲ್ಲಿಕಾರ್ಜುನ ಹಲಮಂಡಗೆ, ಸುರೇಶ ಕಾಳೆ, ತಾನಾಜಿ ರೇಣುಕೆ, ನಾರಾಯಣರಾವ ಕಾಳೆ, ಅನೀಲ ಗರುಡಕರ, ಮಹೇಶ ಗರುಡಕರ, ಶ್ರೀಕಾಂತ ತೋರಖಡೆ, ಚಂದ್ರಕಾಂತ ಪಾಚಂಗೆ, ಸುಗ್ರೀವ ವಾಘಮಾರೆ, ನಾರಾಯಣ ಗರುಡ, ವಿಷ್ಣು ಕಾಳೆ, ಪಾಂಡುರಂಗ ಪಾಚಂಗೆ ಇದ್ದರು.

# ರೈತರ ಜಮೀನಿಗೆ ದರ ನಿಗದಿ ಮಹತ್ವದ ತೀರ್ಮಾನ ನುಡಿದಂತೆ ನಡೆದ ಕಾಂಗ್ರೆಸ್ ಸರಕಾರ-ಜೆ.ಟಿ.ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.18–ಕೃಷ್ಣಾ ಮೇಲ್ದಂಡೆ ಯೋಜನೆಯ 3ನೇ ಹಂತದ ಸಂತ್ರಸ್ತರ ನೀರಾವರಿ ಭೂಮಿಗೆ 40 ಲಕ್ಷ ರೂ., ಒಣಬೇಸಾಯ ಭೂಮಿಗೆ 30 ಲಕ್ಷ ರೂ. ಒಪ್ಪಿತ ಬೆಲೆ ಘೋಷಣೆ ಮಾಡುವ ಮೂಲಕ ಸಿಎಂ ಸಿದ್ಧರಾಮಯ್ಯನವರ ಸರ್ಕಾರ ನುಡಿದಂತೆ ನಡೆದು ರೈತರ ಹಿತ ಕಾಪಾಡಿದೆ ಎಂದು ಶಾಸಕ ಜೆ. ಟಿ. ಪಾಟೀಲ ಹೇಳಿದರು.



ಯುಕೆಪಿ 3ನೇ ಹಂತ ಅನುಷ್ಠಾನಕ್ಕೆ ಭೂಸ್ವಾಧೀನಗೊಳ್ಳುವ ಜಮೀನಿಗೆ ಸರ್ಕಾರ ಒಪ್ಪಿತ ಪರಿಹಾರ ಘೋಷಿಸಿದ ಬಳಿಕ ಗುರುವಾರ ಬೀಳಗಿಗೆ ಆಗಮಿಸಿದ ತಮಗೆ ಹಮ್ಮಿಕೊಂಡಿದ್ದ ಸ್ವಾಗತ ಸಮಾರಂಭದಲ್ಲಿ ಅವರು ಮಾತನಾಡಿ, ಸಚಿವ ಸಂಪುಟ ಸಭೆಯಲ್ಲಿ ಸುಧೀರ್ಘವಾಗಿ ಚರ್ಚಿಸಿ ಪರಿಹಾರ ಘೋಷಣೆ ಮಾಡಲಾಗಿದೆ. ಇದು ಕಾಂಗ್ರೆಸ್ ಸರ್ಕಾರಕ್ಕಿರುವ ಬದ್ಧತೆ ತೋರಿಸುತ್ತದೆ ಎಂದು ಬಣ್ಣಿಸಿದರು.

ಸಿಎಂ ಸಿದ್ಧರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ, ಸಚಿವರಾದ ಎಚ್.ಕೆ.ಪಾಟೀಲ, ಆರ್. ಬಿ. ತಿಮ್ಮಾಪೂರ, ಎಂ.ಬಿ.ಪಾಟೀಲ, ಶಿವಾನಂದ ಪಾಟೀಲ ಸೇರಿದಂತೆ ಬೆಂಬಲಿಸಿದ ಎಲ್ಲ ಸಚಿವರಿಗೆ ಅಭಿನಂದನೆ ಸಲ್ಲಿಸಿದ ಅವರು, ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿಯವರ ಶಾಂತ ರೀತಿಯ ಹೋರಾಟಕ್ಕೆ ಪ್ರತಿಫಲ ದೊರತಿದೆ ಎಂದ ಪಾಟೀಲ, ಹಿಂದಿನ ಬಿಜೆಪಿ ಸರ್ಕಾರ 77 ಸಾವಿರ ಕೋಟಿ ರೂ. ಸಾಲವಿಟ್ಟು ಹೋಗಿತ್ತು. ಚುನಾವಣೆ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಗಳನ್ನು ಸಿದ್ಧರಾಮಯ್ಯನವರ ನೇತೃತ್ವದ ಸರ್ಕಾರ ಒಂದೊಂದಾಗಿ ಈಡೇರಿಸಿದೆ ಎಂದರು.

ಏಕಕಾಲದಲ್ಲಿಯೇ ಭೂಮಿ ಸ್ವಾಧೀನ ಮಾಡಿಕೊಳ್ಳಲು ನಿರ್ಧಾರ ತೆಗೆದುಕೊಂಡಿದ್ದು ಸಂತಸವನ್ನು ಮಾಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ರೈತಪರ ಕಾಳಜಿಯಿಂದ ಸರ್ಕಾರದ ಮೇಲೆ ಹೆಚ್ಚಿನ ಒತ್ತಡ ಹೇರಿದ್ದಕ್ಕೆ ಯೋಗ್ಯ ಒಪ್ಪಿತ ಬೆಲೆ ದೊರೆತಿದೆ. 3 ವರ್ಷದಲ್ಲಿ ಯುಕೆಪಿ ಯೋಜನೆ ಪೂರ್ಣಗೊಳಿಸುವುದಾಗಿ ಸಿಎಂ ಘೋಷಣೆ ಮಾಡಿದ್ದು, ಸಂತ್ರಸ್ತರ ಬೇಡಿಕೆಗಳನ್ನು ಕಾರ್ಯರೂಪಕ್ಕೆ ತರುವುದಕ್ಕೆ ಪ್ರಯತ್ನಿಸೋಣ ಎಂದ ಶಾಸಕರು, ಮುಳುಗಡೆ ಆಗಲಿರುವ ತೋಟಗಾರಿಕೆ ಬೆಳೆಗಳಿಗೆ, ಕಟ್ಟಡಗಳಿಗೆ ಪ್ರತ್ಯೇಕ ಯೋಗ್ಯ ಪರಿಹಾರ ಕೊಡುವದು. ಪುನರ್ವಸತಿ ಕೇಂದ್ರಗಳ ಅಭಿವೃದ್ಧಿ ಪಡಿಸಲಾಗುವುದು. ಹಿಂದಿನ ಸರ್ಕಾರ ಸುಳ್ಳು ಹೇಳಿದಂತೆ ಸಿಎಂ ಸಿದ್ದರಾಮಯ್ಯನವರ ಸರ್ಕಾರ ಸುಳ್ಳು ಹೇಳದೇ ನುಡಿದಂತೆ ನಡೆಯುತ್ತಿದೆ ಎಂದರು.

ಮುಳುಗಡೆ ಸಂತ್ರಸ್ತರ ಹೋರಾಟ ಸಮಿತಿ ಹುಟ್ಟು ಹಾಕಿದ ದಿ.ವಾಸಣ್ಣ ದೇಸಾಯಿ, ಬಿ.ಎಸ್.ಪಾಟೀಲ ಮನಗೂಳಿ ಗೌಡರನ್ನು ಸ್ಮರಿಸಿದ ಪಾಟೀಲ, ಅವರ ಹೋರಾಟಕ್ಕೆ ಇಂದು ಯಶಸ್ಸು ಸಿಕ್ಕಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಶ್ರಮಿಸಿದ ಎಲ್ಲ ಸಚಿವರನ್ನು ಕರೆದು ಸಂತ್ರಸ್ತರು ಸೇರಿ ಅಭಿನಂದಿಸೋಣ ಎಂದರು.

ಮುಳುಗಡೆ ಸಂತ್ರಸ್ತರ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಪ್ರಕಾಶ ಅಂತರಗೊಂಡ ಮಾತನಾಡಿ, ಸಂತ್ರಸ್ತರನ್ನು ಸಂಕಷ್ಟದಿಂದ ಪಾರು ಮಾಡಲು ಶಾಸಕ ಜೆ.ಟಿ.ಪಾಟೀಲರು ಸಿಎಂ ಅವರ ಮುಂದೆ ಸಮರ್ಥವಾಗಿ ವಿಷಯ ಮಂಡನೆ ಮಾಡಿ ನೀರಾವರಿಗೆ 40, ಒಣಬೇಸಾಯಕ್ಕೆ 30 ಲಕ್ಷ ರೂ. ಒಪ್ಪಿತ ಬೆಲೆ ಘೋಷಣೆ ಮಾಡಿಸಿದ್ದು ಶ್ಲಾಘನೀಯ ಎಂದರು.

ಕೆಪಿಸಿಸಿ ಮಾಜಿ ಕಾರ್ಯದರ್ಶಿ ಬಸವಪ್ರಭು ಸರನಾಡಗೌಡ ಮಾತನಾಡಿ, ಯುಕೆಪಿ 3ನೇ ಹಂತದ ಯೋಜನೆ ಪೂರ್ಣಗೊಳಿಸಲು ಶಾಸಕ ಜೆ.ಟಿ.ಪಾಟೀಲರು ಸದನದ ಹೊರಗೆ, ಒಳಗೆ ಹೋರಾಟ ಮಾಡಿ ಒಪ್ಪಿತ ಯೋಗ್ಯ ಬೆಲೆ ನಿರ್ಧಾರ ಮಾಡಿಸುವಲ್ಲಿ ಯಶಸ್ವಿಯಾದರೆಂದು ಹೇಳಿದರು. ಕೆಪಿಸಿಸಿ ಉಪಾಧ್ಯಕ್ಷ ಎಂ. ಬಿ. ಸೌದಾಗರ, ಜಿಪಂ ಮಾಜಿ ಅಧ್ಯಕ್ಷ ಎಂ.ಎಲ್.ಕೆಂಪಲಿಂಗಣ್ಣವರ ಮಾತನಾಡಿದರು.

ವೇದಿಕೆ ಮೇಲೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹನಮಂತ ಕಾಖಂಡಕಿ, ಟಿಎಪಿಸಿಎಂಎಸ್ ಅಧ್ಯಕ್ಷ ಎಂ. ಬಿ. ಕಂಬಿ, ಜಿಪಂ ಮಾಜಿ ಸದಸ್ಯ ಪಾಂಡು ಪೊಲೀಸ್, ಮಹಾದೇವ ಹಾದಿಮನಿ ಇದ್ದರು. ದೊಡ್ಡ ಸಂಖ್ಯೆಯಲ್ಲಿ ಸಂತ್ರಸ್ತರು ಪಾಲ್ಗೊಂಡಿದ್ದರು.

ಕಾರ್ಯಕ್ರಮಕ್ಕೂ ಮೊದಲು ಬೀಳಗಿ ಕ್ರಾಸ್‌ನಲ್ಲಿರುವ ಕನಕ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ಬಳಿಕ ಶಾಸಕ ಜೆ.ಟಿ.ಪಾಟೀಲ ಅವರನ್ನು ತೆರೆದ ವಾಹನದಲ್ಲಿ

ವಾದ್ಯವೈಭವದಿಂದ ಮೆರವಣಿಗೆ ಮೂಲಕ ಸಂತ್ರಸ್ತರು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಅಂಬೇಡ್ಕರ್ ವೃತ್ತದವರೆಗೆ ಕರೆತಂದರು. ಮೆರವಣಿಗೆ ಉದ್ದಕ್ಕೂ ಸಂತ್ರಸ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರು.

# ಸೆ.25 ರಂದು ಕವಿಗೋಷ್ಠಿ ಹಾಗು ಪ್ರತಿಭಾ ಪುರಸ್ಕಾರ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.18: ಪಟ್ಟಣದ ದೇವಿನಗರ ಹತ್ತಿರದ ಭವಾನಿ ದೇವಾಲಯದಲ್ಲಿ ನವರಾತ್ರಿ ಮಹೋತ್ಸವ ನಿಮಿತ್ಯ ನಡೆಯುವ ಕಾರ್ಯಕ್ರಮದ ನಿಮಿತ್ಯ ಸೆ.25 ರಂದು ಸಂಜೆ 5 ಗಂಟೆಗೆ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕವಿಗೋಷ್ಠಿ ಹಾಗು ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಯಲಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ, ಕಸಾಪ, ಜೈಕರ್ನಾಟಕ ಜನಪರ ವೇದಿಕೆ ಸಂಘಟನೆ ಮತ್ತು ಭವಾನಿ ಮಂದಿರ ನವರಾತ್ರಿ ಉತ್ಸವ ಸಮಿತಿಯ ವತಿಯಿಂದ ಗುರುವಾರ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು. ದೇವಿನಗರದ ಭವಾನಿ ದೇವಾಲಯದಲ್ಲಿ ಪ್ರತಿವರ್ಷ ನಡೆಯುವ ನವರಾತ್ರಿ ಮಹೋತ್ಸವದಲ್ಲಿ ಕಸಾಪ ವತಿಯಿಂದ ಕವಿಗೋಷ್ಠಿ ನಡೆಸಲಾಗುತ್ತಿತ್ತು. ತಾವು ಕಸಾಪ ತಾಲೂಕು ಘಟಕದ ಅಧ್ಯಕ್ಷನಾದ ನಂತರ ನಾಲ್ಕು ವರ್ಷಗಳಿಂದ ಕವಿಗೋಷ್ಠಿಯೊಂದಿಗೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಕನ್ನಡ ಭಾಷೆಯಲ್ಲಿ ಪ್ರತಿಶತ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದೆ. ಪ್ರಸ್ತುತ ಸಾಲಿನಲ್ಲಿಯೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯ ಕನ್ನಡ ಭಾಷೆಯಲ್ಲಿ ಪ್ರತಿಶತ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು, ಎಲ್ಲಾ ಶಾಲಾ ಕಾಲೇಜಿನ ಮುಖ್ಯಸ್ಥರು ತಮ್ಮ ಶಾಲಾ ಕಾಲೇಜಿನಲ್ಲಿಯ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳು ಕನ್ನಡ ಭಾಷೆಯಲ್ಲಿ ಪ್ರತಿಶತ ಅಂಕ ಪಡಿದ್ದಾದರೆ ಅವರ ಹೆಸರುಗಳನ್ನು ಸೆ.23 ರ ಒಳಗೆ ದೂರವಾಣಿ ಸಂಖೆ: 9448585312 ಮತ್ತು 9448886887ಗೆ ಸಂಪರ್ಕಿಸಿ ನೊಂದಾಯಿಸಲು ಕೋರಲಾಗಿದೆ. ಸದರಿ ವಿದ್ಯಾರ್ಥಿಗಳಿಗೆ ಸೆ.25 ರಂದು ಸಾಯಂಕಾಲ 5 ಗಂಟೆಗೆ ದೇವಿನಗರದ ಭವಾನಿ ಮಂದಿರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಲು ಕೋರಿದರು.

ಕಸಾಪ ಗೌರವ ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ ಮಾತನಾಡಿ, ನಾಗಭೂಷಣ ಮಾಮಡಿಯವರು ತಾವು ಅಧ್ಯಕ್ಷರಾದ ನಂತರ ತುಂಬಾ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಎಲ್ಲಾ ಕಾರ್ಯಕ್ರಮಗಳಿಗೂ ವೈಯಕ್ತಿಕ ಖರ್ಚುಮಾಡಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಸಿಕೊಂಡು ಬಂದಿದ್ದಾರೆ ಎಂದು ಹೇಳಿದರು. ಜೆಜವೇ ಸಂಘಟನೆಯ ತಾಲೂಕು ಅಧ್ಯಕ್ಷ ಸಂತೋಷ ಬಿಜಿಪಾಟೀಲ ಮತ್ತು ನವರಾತ್ರಿ ಮಹೋತ್ಸವ ಉತ್ಸವ ಸಮಿತಿಯ ಅಧ್ಯಕ್ಷ ದಿಲೀಪ ಢವಳೆ ಮಾತನಾಡಿದರು. ಮುರಳೀಧರ ತೋರಖಡೆ, ವಿಯಕುಮಾರ ಗರುಡಕರ, ಸೂರ್ಯಕಾಂತ ಡೂಕೆ ಇದ್ದರು.

# ತಂತ್ರಜ್ಞಾನ ಚಿಕಿತ್ಸಾಲಯ-ಬೆಲ್ಲ ಕ್ಲಸ್ಟರ್ ಕಾರ್ಯಾಗಾರಕ್ಕೆ ಸಚಿವ ಈಶ್ವರ ಬಿ.ಖಂಡ್ರೆ ಚಾಲನೆ

ಬೀದರ, ಸೆ.18 : ಜಿಲ್ಲೆಯಲ್ಲಿಕಬ್ಬನ್ನುಹೆಚ್ಚಿನಪ್ರಮಾಣದಲ್ಲಿಬೆಳೆಯುತ್ತಿದ್ದು,ಬೆಲ್ಲ ತಯಾರಿಕೆಯಲ್ಲಿಹಳಯಪದ್ಧತಿಯನ್ನೇಮುಂದುರೆಸುತ್ತಿದ್ದಾರೆ. ಬೀದರ ಜಿಲ್ಲೆಯಲ್ಲಿ ವಿಧವಿಧವಾಗಿಬೆಲ್ಲತಯಾರಿಕಾಘಟಕ್ಕಸ್ಥಾಪಿಸಿ ಮುಂದೆಬರಬೇಕೆಂದುಅರಣ್ಯ,ಜಿವಿಶಾಸ್ತ್ರ ಹಾಗೂ ಪರಿಸರಹಾಗೂ ಬೀದರಜಿಲ್ಲಾಉಸ್ತುವರಿಸಚಿವರಾದ ಈಶ್ವರ ಬಿ.ಖಂಡ್ರೆತಿಳಿಸಿದರು. ಅವರು ಬುಧವಾರ ಕೈಗಾರಿಕೆ ಮತ್ತುವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾಕೇಂದ್ರ,ಬೀದರಹಾಗೂಕರ್ನಾಟಕತಾಂತ್ರಿಕಉನ್ನತೀಕರಣಪ



ರಿಷತ್ತುಬೆಂಗಳೂರುಇವರ ಸಂಯುಕ್ತಾಶ್ರಯದಲ್ಲೇಂದ್ರಸರ್ಕಾರದಎಂಎಸ್‌ಎಂಇ, ರಾಂಪಯೋಜನೆಯಡಿಇನಸ್ಥಿರಾರೆಸಾರ್ಟ್‌ಮತ್ತುಕನ್ವೆನ್ಸನ್‌ಜನವಾಡ ರಸ್ತೆ,ಬೀದರದಲ್ಲಿಹಮ್ಮಿಕೊಂಡಿದ್ದಸೂಕ್ಷ್ಮ ಸಣ್ಣ ಮಧ್ಯಮಉದ್ಯಮಿಗಳಿಗೆಎರಡುದಿನಗಳ"ತಂತ್ರಜ್ಞಾನ ಚಿಕಿತ್ಸಾಲಯಬೆಲ್ಲಕ್ಲಸ್ಟರ್"ಕಾರ್ಯಾಗಾರವನ್ನುಉದ್ಘಾಟಿಸಿಮಾತನಾಡಿದರು.ಜಿಲ್ಲೆಯಉದ್ದಿಮೆದರಗೆಬೆಲ್ಲತಯಾರಿಕೆಯ ಅತ್ಯಾಧುನಿಕಹಾಗೂಹೊಸಯಂತ್ರೋಪಕರಣಗಳ ಬಗ್ಗೆಮಾಹಿತಿನೀಡುವಅಗತ್ಯವಿದೆ,ಉದಿಮೆದಾರರು ಈತರಹದ ಹೆಚ್ಚಿನ ಕಾರ್ಯಗಾರಗಲ್ಲಿಭಾಗವಹಿಸಿಮಾಹಿತಿಯನ್ನುಪಡೆಯಬೇಕೆಂದರು. ಈಸಂದರ್ಭದಲ್ಲಿಜಿಲ್ಲಾ ಕೈಗಾರಿಕಾಕೇಂದ್ರದ ಜಂಟಿನಿರ್ದೇಶಕಿ ಸುರೇಖಾಮುನ್ನೋಳಿ,ಬಿ.ಜಿಶೆಟಕಾರ್. ಶಿವರಾಜಹಲಶೆಟ್ಟಿ,ಡಿ.ವಿ.ಸಿಂಧೋಲ್, ಪಿ. ವಿಜಯಕುಮಾರ,ದೇವೆಂದ್ರಪ್ಪ, ಬಸವರಾಜ ನಿಟ್ಟೂರೆ ಸೇರಿದಂತೆ ಉದ್ದಿಮೆದಾರರು ಉಪಸ್ಥಿತರಿದ್ದರು.

# ಥೈಲ್ಯಾಂಡ್ ನೆಲದಲ್ಲಿ ಹಳ್ಳಿ ಹೈದ ಬಿ.ಎನ್.ಹೊರಪೇಟಿ ಕನ್ನಡ ಪ್ರೇಮ: ಗೌರವ

ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :ಸೆ.18: ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಮೋರನಹಳ್ಳಿ ಗ್ರಾಮದ ಬಹುಮುಖ ಪ್ರತಿಭೆ ಬಿ.ಎನ್.ಹೊರಪೇಟಿ ಇತ್ತಿಚೆಗೆ ಥೈಲ್ಯಾಂಡ್ ದೇಶದ ಬ್ಯಾಂಕಾ-ಕ್ ನಗರದಲ್ಲಿ ನದಡೆದ 51ನೇ ಅಂತರರಾಷ್ಟ್ರೀಯ ಕನ್ನಡ ಸಾಂಸ್ಕೃತಿಕ ಸಮ್ಮೇಳನದಲ್ಲಿ ಭಾಗವಹಿಸಿ ಕನ್ನಡ ಭಾಷೆ ನೆಲ ಮೂಲ ಸಂಸ್ಕೃತಿ, ಆಚರಣೆ, ಸಂಪ್ರದಾಯಗಳ ಬಗ್ಗೆ ಥೈಲ್ಯಾಂಡ್ ದೇಶದ ಜನರಿಗೆ ತಿಳಿಸಿದರು.



ಬಿ.ಎನ್.ಹೊರಪೇಟಿ ಮೂಲತಃ ಕೃಷಿ ಕುಟುಂಬದವರಾಗಿದ್ದು ಮೋರನಹಳ್ಳಿ ಗ್ರಾಮದ ದಿ.ಶಂಕ್ರಮ್ಮ ನಿಂಗಪ್ಪ ಹೊರಪೇಟಿ ಅವರ ಮಗನಾಗಿದ್ದು, ಬಾಲ್ಯದಿಂದಲೇ ನಾಟಕ, ಕಲೆ, ಸಾಹಿತ್ಯ, ಕನ್ನಡ ಅಭಿಮಾನದ ಅಪಾರ ಆಸಕ್ತಿ ಹೊಂದಿ ಸಂಘಟನೆ, ಸಿನೇಮಾ, ಸಮಾಜಸೇವೆ ಹಾಗೂ ಮಾಧ್ಯಮ ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದಾರೆ. ಗ್ರಾಮೀಣ ಭಾಗದ ಕಲೆ, ಕಲಾವಿದರನ್ನು ಉಳಿಸಿ ಬೆಳೆಸುವಲ್ಲಿ ಶ್ರಮಿಸುತ್ತಿದ್ದಾರೆ. ಎಲೆಮರೆಯ ಸಾಧಕರನ್ನು ಮುಖ್ಯವಾಹಿನಿಗೆ ಪರಿಚಯಿಸುವ ಕಾರ್ಯವನ್ನು ಮಾಡುತ್ತಾ ಕನ್ನಡ ನೆಲದಲ್ಲಿನ ಸಂಸ್ಕೃತಿ ಆಚರಣೆ ಪದ್ಧತಿ ಭಾಷಾಭಿಮಾನ ಹೆಚ್ಚಿಸುವಲ್ಲಿ ರಾಜ್ಯ ರಾಷ್ಟ್ರೀಯ ಮಟ್ಟದಲ್ಲಿ ಶ್ರಮಿಸುತ್ತಿದ್ದಾರೆ. ಬಿ.ಎನ್. ಹೊರಪೇಟಿ ಅವರ ಉಪನ್ಯಾಸ ಹಾಗೂ ಕವನ ವಾಚನಕ್ಕೆ ಥೈಲ್ಯಾಂಡ್ ದೇಶದ ಕನ್ನಡಿಗರು ಗೋಲ್ಡನ್ ಐಕಾನಿಕ್ ಅವಾರ್ಡ ನೀಡಿ ಗೌರವಿಸಿದರು. ಈ ಹಿಂದೆಯೂ ಭೂತಾನ್, ಶ್ರೀಲಂಕಾ, ಸಿಂಗಾಪುರ್, ಲಕ್ಷದ್ವೀಪ ಮುಂಬೈ, ದೆಹಲಿಯಲ್ಲಿ ನಡೆದ ಅಂತರಾಷ್ಟ್ರೀಯ ಕನ್ನಡ ಸಮ್ಮೇಳನದಲ್ಲಿ ಭಾಗವಹಿದ್ದು ಹೆಮ್ಮೆ.

ಕಾರ್ಯಕ್ರಮದಲ್ಲಿ ಕೃಷಿ ಸಂತರಾದ ಪರಮಪೂಜ್ಯ ಡಾ.ಮಹೇಶ್ವರ ಸ್ವಾಮೀಜಿ, ಅಜಾತ ಶಂಭುಲಿಂಗ ಸ್ವಾಮೀಜಿ, ಥೈಲ್ಯಾಂಡ್ ನ ಉಪ ಪ್ರಧಾನಿ ಕೊರ್ನ ದಬ್ಬಾರನ್ಸಿ, ನಟ ಅರುಣಿ ಬುಗ್ಗಾ, ಉದ್ಯಮಿ ಆಂಜನೇಯ, ಚಿಂತಕ ಕೆ.ಬಿ.ನಾಗೂರು, ಮಲ್ಲಿಕಾರ್ಜುನ ಇಂಡಿಗೇರಿ, ಕೊಟ್ರೇಶ್ ಕೋಗಳಿ ಹಾಗೂ ಕೆ.ಪಿ.ಮಂಜುನಾಥ ಸಾಗರ ಮತ್ತು ಥೈಲಾಂಡ್ ಕನ್ನಡಿಗರು, ನಟ ನಟಿಯರು ಉಪಸ್ಥಿತಿ ಇದ್ದರು. ಕಾರ್ಯಕ್ರಮದಲ್ಲಿ ಕನ್ನಡಿಗರಿಂದ ಮತ್ತು ಥೈಲ್ಯಾಂಡ್ ದೇಶದ ಚಿಂತಕ-ರಿಂದ ಉಪನ್ಯಾಸ, ಕವಿಗೋಷ್ಠಿ, ಹಾಸ್ಯ, ಭರತನಾಟ್ಯ, ಗಾಯನಗಳಂತಹ ಸಾಂಸ್ಕೃತಿಕ, ಸಂವಾದ ಕಾರ್ಯಕ್ರಮಗಳು ಜರುಗಿದವು.

# ಕಪಲಾಪೂರ್ ಗ್ರಾಮದಲ್ಲಿ ಗ್ಯಾರಂಟಿ ಯೋಜನೆ ಬಗ್ಗೆ ಮನೆ ಮನೆಗೆ ಭೇಟಿ

ಬೀದರ. ಸೆ. 18 : ಜನರ ಕಷ್ಟಗಳಿಗೆ ಕಾಂಗ್ರೆಸ ಬೆಲ್ಲ ಸಕ್ಕರೆಯಾಗಿದೆ, ಮನೆ ಮನೆಗೆ ಮಲ್ಲಿಗೆಯಾಗಿದೆ ಎಂದರೆ ತಪ್ಪಾಗಲಾರದು. ಮಹಿಳೆಯರ ಕಷ್ಟಗಳಿಗೆ ಹೆಗಲಾಗಿ ರಾಜ್ಯದ ಜವಾಬ್ದಾರಿಯ ನೊಗ ಹೊತ್ತು ಎಲ್ಲರನ್ನು ಒಳಗೊಂಡು ನುಡಿದಂತೆ ನಡೆದು–ನಡೆದಂತೆ ನುಡಿದು ಜನ ಸಾಮಾನ್ಯರ ಕೈ ಹಿಡಿದು ಸರ್ವರಿಗೂ ಸಮಬಾಳು ಸರ್ವರಿಗೆ ಸಮಪಾಲು ತತ್ವದಲ್ಲಿ ನಂಬಿಕೆಯಿಟ್ಟು ಕಳಂಕರಹಿತವಾಗಿ ಹೆಜ್ಜೆ ಹಾಕಿದೆ, ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ರವರ ಮಾರ್ಗದರ್ಶನದಲ್ಲಿ ಬೀದರ ತಾಲ್ಲೂಕಿನ ಪಂಚ್ ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ



ಹಳ್ಳಿ ಕಡೆ* ಕಾರ್ಯಕ್ರಮವನ್ನು ಬೀದರ ದಕ್ಷಿಣ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕಪಲಾಪೂರ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,'ಗೃಹ ಲಕ್ಷ್ಮಿ' ಗ್ಯಾರಂಟಿ ಯೋಜನೆ ರಾಜ್ಯದ ಲಕ್ಷಾಂತರ ಮಹಿಳೆಯರ ಬದುಕಿನಲ್ಲಿ ಬದಲಾವಣೆ ತಂದಿರುವುದೇ ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಪ್ರತಿ ಒಂದು ಕುಟುಂಬ ಲಾಭ ಪಡೆದು ಕೊಳ್ಳುತ್ತಿದೆ..ಶಕ್ತಿ ಯೋಜನೆ ಈ ಒಂದು ಯೋಜನೆ ನಾಡಿನ ಮಹಿಳೆಯರಿಗೆ ತುಂಬಾ ಅನುಕೂಲವಾಗಿದೆ ಎಂದು ಮನೆಯ ಯಜಮಾನಿಯರು

ತಿಳಿಸಿರುತ್ತಾರೆ. ಮತ್ತು ಅನ್ನಭಾಗ್ಯ, ಗೃಹ ಜ್ಯೋತಿ, ಯುವನಿಧಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿ

ಳಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ, ಗ್ರಾಮದ ಯುವಮುಖಂಡರಾದ ಹನುಮಂತ ಬಿರಾದಾರ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.


# ಅನುಭವ ಮಂಟಪದ ಮೂಲ ಸಂಕಲ್ಪದ ಸಂಕೇತವೆ ಅರಿವಿನ ಮನೆ ,, ಹಡಪದ ಅಪ್ಪಣ್ಣನವರ ಜೀವನ ಚರಿತ್ರೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:- ಹಡಪದ ಅಪ್ಪಣ್ಣ ಅವರು12ನೇ ಶತಮಾನದ ಪ್ರಮುಖ ವಚನಕಾರ ಮತ್ತು ಸಮಾಜ ಸುಧಾರಕರು. ಇವರು ಬಸವಣ್ಣನವರ ನಿಕಟವರ್ತಿ ಹಾಗೂ ಅವರ 'ಹಡಪ' ಹಿಡಿದುಕೊಳ್ಳುವ ಕಾಯಕದಲ್ಲಿದ್ದರು."ಹಡಪ' ಎಂದರೆ (ಗುರು ಬಸವಣ್ಣನವರ ಮಹತ್ವದ ದಾಖಲೆಯನ್ನು) ಇಡುವ ಪೆಟ್ಟಿಗೆ. ಅಥವಾ ವೀಳ್ಯದೆಲೆ ಇಡುವ ಚೀಲ ಎಂದು ಅರ್ಥ. ಆದ್ದ-ರಿಂದ, ಅಪ್ಪಣ್ಣ ಅವರ ಕಾಯಕದ ಹೆಸರು 'ಹಡಪದ ಅಪ್ಪಣ್ಣ' ಎಂದು ಪ್ರಸಿದ್ಧವಾಯಿತು. ಜೀವನ ಮತ್ತು ಕೊಡುಗೆಗಳು ಬಸವಣ್ಣನವರ ಕಾರ್ಯದರ್ಶಿ: ಹಡಪದ ಅಪ್ಪಣ್ಣ ಅವರು ಕಲ್ಯಾಣದಲ್ಲಿ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿ ಕೆಲಸ ಮಾಡಿದರು. ಬಸವಣ್ಣನವರ ಕಲ್ಯಾಣ ಕ್ರಾಂತಿಗೆ ಇವರ ಕೊಡುಗೆ ಅಪಾರ.

ವಚನ ಸಾಹಿತ್ಯ: ಅಪ್ಪಣ್ಣ ಅವರು "ಬಸವಪ್ರಿಯ ಕೂಡಲ ಚೆನ್ನಬಸವಣ್ಣ" ಎಂಬ ಅಂಕಿತನಾಮದಲ್ಲಿ ಸುಮಾರು 250 ವಚನಗಳನ್ನು ರಚಿಸಿದ್ದಾರೆ. ಅವರ ವಚನಗಳು ಸರಳ ಹಾಗೂ ನೇರವಾದ ಮಾತುಗಳಲ್ಲಿ ಸಮಾಜದ ತಪ್ಪುಗಳನ್ನು ಪ್ರಶ್ನಿಸುತ್ತವೆ. ಇವರು ಜಾತಿ, ಮತ ಮತ್ತು ಅಸಮಾನತೆಯ ವಿರುದ್ಧ ಧ್ವನಿ ಎತ್ತಿದರು. ಸಾಮಾಜಿಕ ಕ್ರಾಂತಿ: ಹಡಪದ ಅಪ್ಪಣ್ಣ ಅವರು ಕಾಯಕ ಮತ್ತು ದಾಸೋಹ ತತ್ವಗಳಿಗೆ ಬದ್ದರಾಗಿದ್ದರು. ಯಾವುದೇ ವೃತ್ತಿಯೂ ಕೀಳಲ್ಲ, ಎಲ್ಲಾ ಕಾಯಕಗಳೂ ಸಮಾನ ಎಂದು ಅವರು ಪ್ರತಿಪಾದಿಸಿದರು.

**ಪತ್ನಿಲಿಂಗಮ್ಮ:** ಅವರ ಪತ್ನಿ ಲಿಂಗಮ್ಮ ಕೂಡ ಒಬ್ಬ ವಚನಕಾರ್ತಿಯಾಗಿದ್ದರು. ಅವರ ವಚನಗಳಲ್ಲೂ ಪ್ರಗತಿಪರ ಚಿಂತನೆಗಳನ್ನು ಕಾಣಬಹುದು. ಮೂಲಕ ಸಮಾಜದಲ್ಲಿ ಸಮಾನತೆ ಹಡಪದ ಅಪ್ಪಣ್ಣ ಅವರು ತಮ್ಮ ವಚನಗಳ ಕ್ರಾಂತಿಕಾರಿ ಬದಲಾವಣೆಗಳನ್ನು




ತರಲು ಶ್ರಮಿಸಿದ ಮಹಾನ್ ವ್ಯಕ್ತಿ. ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ಪ್ರಸ್ತುತವಾಗಿವೆ. ಹಡಪದ ಅಪ್ಪಣ್ಣ ನವರ ಇತಿಹಾಸ ಕುರಿತು ಅನೇಕ ಸಾಹಿತಿಗಳು ಲೇಖಕರು ಡಾ.ಎಲ್ ಬಸವರಾಜ ಮತ್ತು ಡಾ. ಬಿ ಆರ್ ಅಣ್ಣೇಗೇರಿ ಅವರು ತಮ್ಮ ವಚನ ಸಾಹಿತ್ಯದಲ್ಲಿ ವಿಶ್ಲೇಷಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ. ಡಾ.ಬಿ ಆರ್ ಅಣ್ಣೇಗೇರಿ ಅವರು ಶರಣ ನಿಜಸುಖ ಹಡಪದ ಅಪ್ಪಣ್ಣನಂತಹ ಶರಣರ ಬಗೆಗಿನ ತಮ್ಮ ಅಧ್ಯಯನ ಗಳನ್ನು ಪ್ರಕಟಿಸಿದ್ದಾರೆ. ಈ ರೀತಿಯ ಇತಿಹಾಸವನ್ನು ಬಗ್ಗೆ ತಿಳಿಸಿದ ವಚನ ಸಾಹಿತಿಗಳಿಗೆ ಹಾಗೂ ಅಧ್ಯಯನ ಮಾಡಿ ಸಂಶೋಧನಾ ಪ್ರಬಂಧಗಳು ರಚಿಸಿದ ಲೇಖಕರಿಗೆ ಹೃತ್ಪೂರ್ವಕ ಧನ್ಯವಾದಗಳು ತಿಳಿಸಿದರು. ರಾಜ್ಯ ಹಡಪದ ಅಪ್ಪಣ್ಣ ಸಮಾಜದ- ಸಂಘಟನಾ ಕಾರ್ಯದರ್ಶಿ ಬಸವರಾಜ ಹಡಪದ ಹಳ್ಳಿ, ಕಲಬುರಗಿ ಮನೆಯ ಗೌರವಾಧ್ಯಕ್ಷರು ಬಸವರಾಜ ಹಡಪದ ಸುಗೂರ ಮತ್ತು ಕಲಬುರಗಿ ಜಿಲ್ಲೆಯ ಅಧ್ಯಕ್ಷ ಈರಣ್ಣ ಸಿ ಹಡಪದ ಸಣ್ಣೂರ, ಕಾರ್ಯಾಧ್ಯಕ್ಷ ಭಗವಂತ ಹಡಪದ ಕಿರಣಗಿ, ಕಲಬುರಗಿ ಜಿಲ್ಲೆಯ ಪ್ರಧಾನ ಕಾರ್ಯದರ್ಶಿ ರಮೇಶ್ ಹಡಪದ ನೀಲೂರ, ಕಲಬುರಗಿ ಜಿಲ್ಲಾ ಉಪಾಧ್ಯಕ್ಷ ರುದಮಣಿ , ಅಪ್ಪಣ್ಣ ಬಟಗೇರಾ, ಮಹಾಂತೇಶ ಇಸ್ಲಾಂಪೂರೆ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮಲ್ಲಿಕಾರ್ಜುನ ಬಿ ಹಡಪದ ಸುಗೂರ, ಆನಂದ ಖೇಳಗಿ, ಸಹ ಕಾರ್ಯದರ್ಶಿ ಮಹಾದೇವ ರಾವೂರ, ನಿಂಗಣ್ಣ ಯಾತನೂರ, ಸಂತೋಷ ಬಗದುರಿ, ಮಲ್ಲಿಕಾರ್ಜುನ ಹಡಪದ ಬನ್ನೂರ, ನಗರಾಧ್ಯಕ್ಷ ಮಲ್ಲಿಕಾರ್ಜುನ ಹಡಪದ ಸಾವಳಗಿ, ಕಲಬುರಗಿ ತಾಲೂಕು ಅಧ್ಯಕ್ಷ ಚಂದ್ರಶೇಖರ ತೊನಸನಹಳ್ಳಿ, ಕಾರ್ಯದರ್ಶಿ ವಿನೋದ ಅಂಬಲಗಾ, ಬೀದರ ಜಿಲ್ಲೆಯ ಹಡಪದ ಅಪ್ಪಣ್ಣ ಸಮಾಜದ ಹಿರಿಯ ಮುಖಂಡ ಶರಣಪ್ಪ ಚಂದನಹಳ್ಳಿ, ಬೀದರ ಜಿಲ್ಲಾಧ್ಯಕ್ಷ ದತ್ತಾತ್ರೇಯ ಹಡಪದ ಬಾಂದೇಕರ್, ಬಸವಕಲ್ಯಾಣ ತಾಲೂಕಾಧ್ಯಕ್ಷ ರಾಚಪ್ಪ ಮಂಠಾಳ, ಜೇವರ್ಗಿ ತಾಲೂಕಾಧ್ಯಕ್ಷ ತಿಪ್ಪಣ್ಣ ಹಡಪದ ನರಿಬೋಳ, ಬಸವರಾಜ ಹಡಪದ ಗೆದ್ದಲಮರಿ, ಹಣಮಂತ ಹಡಪದ ನಿಡಗುಂದಿ, ದಶರಥ ನಾವಿ, ನಾಗರಾಜ ಹಡಪದ ಸಾತನೂರ ಸೇರಿದಂತೆ ಸಮಾಜದ ಅನೇಕ ಮುಖಂಡರು ಈ ಇತಿಹಾಸದ ಬಗ್ಗೆ ರಚಿಸಿದ ಲೇಖಕರಿಗೆ ಅಭಿನಂದನೆಗಳು ತಿಳಿಸಿದರು.

# ದಿಲೀಪಕುಮಾರ್ ಬಗ್ದಲಕರಗೆ ಅತ್ಯುತ್ತಮ ಜನಪ್ರತಿನಿಧಿ ಪ್ರಶಸ್ತಿ ಪ್ರದಾನ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪಟ್ಟಣದ ಪುರಸಭೆಯ 3ಬಾರಿ ಅಧ್ಯಕ್ಷರಾಗಿ ಹಾಗೂ 7ಬಾರಿ ಸದಸ್ಯರಾಗಿ ಅತ್ಯುತ್ತಮವಾಗಿ ಸೇವೆ ಸಲ್ಲಿಸುತ್ತಿರುವ ಸರಳ ಸಜ್ಜನಿಕೆಗೆ ಹೆಸರುವಾಸಿ ಆಗಿರುವ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್ ಅವರಿಗೆ ಬೀದರ್ ತಾಲೂಕಿನ ಮರಕುಂದಾ ಗ್ರಾಮದಲ್ಲಿ ಪರಿಸರ ವಾಹಿನಿ ಬೀದರ್ ವತಿಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಇವರಿಗೆ 2025ನೇ ಸಾಲಿನ ಪರಿಸರೋತ್ಸವ ಅಂಗವಾಗಿ ನೀಡುವ ಆದರ್ಶ



ಜನಪ್ರತಿನಿಧಿ ಪ್ರಶಸ್ತಿಯನ್ನು ಶ್ರೀ ಶಿವಲಿಂಗೇಶ್ವರ ಸ್ವಾಮಿಗಳು ನೀಡಿ ಸನ್ಮಾನಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಯ ಜಿಲ್ಲಾಧ್ಯಕ್ಷ ಅಮೃತರಾವ ಚಿಮ್ಮಕೊಡ, ಉಪಾಧ್ಯಕ್ಷ ಉದಯಕುಮಾರ್ ವಾರದ, ಪರಿಸರವಾದಿ ಶೈಲೇಂದ್ರ ಕಾವಡಿ, ಇಒ ಮಾಣಿಕರಾವ ಪಾಟೀಲ್, ನಸೀರ್ ಖಾನ್, ಅಣ್ಣೇಪ ವರನಾಳ, ಬಾಬಾ ಆರ್. ಸಿ.ಸಿ., ಹುಸಾಮುದ್ದೀನ್ ಬಾಬಾ, ರಾಜಕುಮಾರ ಆರ್. ಹಡಪದ, ಚಾಲುಕ್ಯ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಾಮರಾವ್ ಹುಡೆದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಸವಕಲ್ಯಾಣದಲ್ಲಿ ಅ. 10 ರಿಂದ 12ರ ವರೆಗೆ ಕಲ್ಯಾಣ ಪರ್ವ

ಮಲ್ಲಮ್ಮ ನುಡಿ ವಾರ್ತೆ

ಚಿಟಗಪ್ಪ: ಅಕ್ಟೋಬರ್ ತಿಂಗಳ 10,11 ಮತ್ತು 12ರ ವರೆಗೆ ಬಸವಕಲ್ಯಾಣದ ಬಸವಧರ್ಮ ಪೀಠದ ಆವರಣದಲ್ಲಿ 24ನೇ ಕಲ್ಯಾಣ ಪರ್ವ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಪ್ರಚಾರ ಸಮಿತಿ ಅಧ್ಯಕ್ಷ, ಸಾಹಿತಿ ಸಂಗಮೇಶ ಎನ್ ಜವಾದಿ ತಿಳಿಸಿದರು. ಪಟ್ಟಣದ ರಾಷ್ಟ್ರೀಯ ಬಸವ ದಳದ ಕಾರ್ಯಾಲಯದಲ್ಲಿ ಗುರುವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಕಳೆದ ಇಪ್ಪತ್ತು ಮೂರು ವರ್ಷಗಳಿಂದ ಬಸವಕಲ್ಯಾಣದಲ್ಲಿ ಕಲ್ಯಾಣ ಪರ್ವ ಆಚರಿಸಿಕೊಂಡು ಬರುತ್ತಿದ್ದು ಈ ವರ್ಷ ಸಹ ಅರ್ಥಪೂರ್ಣವಾಗಿ ಅಷ್ಟೆ ಭಕ್ತಿಭಾವದಿಂದ ಆಚರಿಸಲಾಗುತ್ತಿದೆ. ಕರ್ನಾಟಕ, ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಸೇರಿದಂತೆ ದೇಶದ ಹಲವು ಹಲವು ರಾಜ್ಯ ಹಾಗೂ ಜಿಲ್ಲೆಗಳಿಂದ ಸುಮಾರು 1ಲಕ್ಷಕ್ಕೂ ಅಧಿಕ ಬಸವ ಭಕ್ತರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಹೊರಗಿನಿಂದ ಬರುವ ಭಕ್ತರಿಗೆ ವಸತಿ ಹಾಗೂ ಪ್ರಸಾದ ವ್ಯವಸ್ಥೆ ಇರುತ್ತದೆ. ಆದ್ದ-ರಿಂದ ಈ ಅರ್ಥಪೂರ್ಣ ಹಾಗೂ ಭಕ್ತಿಭಾವದಿಂದ ಕೂಡಿರುವ 24ನೇ ಕಲ್ಯಾಣ ಪರ್ವದಲ್ಲಿ ಬಸವಾನುಯಾಯಿಗಳು, ಬಸವಭಕ್ತರು,




ಬಸವನಿಷ್ಠರು, ಬಸವತತ್ವಪ್ರಚಾರಕರು ಅಧಿಕ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮದ ಶೋಭೆ ಹೆಚ್ಚಿಸಬೇಕೆಂದು ವಿನಂತಿಸಿಕೊಂಡರು. ಬಸವ ತತ್ವ ಪ್ರಚಾರಕಿ ಶರಣೆ ಇಂದುಮತಿ ಪಾರಂಪಳ್ಳಿ ಮಾತನಾಡಿ ಕೂಡಲ ಸಂಗಮ ಬಸವಧರ್ಮದ ಪೀಠಾಧ್ಯಕ್ಷೆ ಪೂಜ್ಯ ಗಂಗಾ ಮಾತಾಜಿಯವರ ಅಧ್ಯಕ್ಷತೆಯಲ್ಲಿ ಹಾಗೂ ಪೂಜ್ಯ ಸಿದ್ದರಾಮೇಶ್ವರ ಸ್ವಾಮೀಜಿಗಳ ನೇತೃತ್ವದಲ್ಲಿ ಜರುಗುವ 24ನೇ ಕಲ್ಯಾಣ ಪರ್ವ ಸಮಾವೇಶ ಅತ್ಯಂತ ಅರ್ಥಪೂರ್ಣವಾಗಿ ನಡೆಯಲಿದೆ. ವರ್ಷಕ್ಕೊಮ್ಮೆ ನಡೆಯುವ ಕಲ್ಯಾಣ ಪರ್ವ ಕಾರ್ಯಕ್ರಮದಲ್ಲಿ ಜಾತಿ, ಮತ ಪಂಥಗಳ ಭೇದವಿಲ್ಲದೆ ಸರ್ವರೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು. ಚಂದ್ರಶೇಖರ ತಂಗಾ ಮಾತನಾಡಿ ಮೂರು ದಿನಗಳ ಕಾಲ ನಡೆಯಲಿರುವ ಕಾರ್ಯಕ್ರಮದಲ್ಲಿ ಯೋಗ, ಇಷ್ಟಲಿಂಗ ಪೂಜೆ, ಪ್ರಾರ್ಥನೆ, ಶರಣರ ಸ್ಮರಣೆ, ಧರ್ಮಚಿಂತನೆ, ವಿಚಾರಗೋಷ್ಠಿ, ವಚನ ಸಂಗೀತ, ವಚನ ನೃತ್ಯ , ಪೀಠಾರೋಹಣ, ಪಥ ಸಂಚಲನ, ಪ್ರಶಸ್ತಿ ಪ್ರದಾನ ಸೇರಿದಂತೆ ಇತ್ಯಾದಿ ಕಾರ್ಯಕ್ರಮಗಳು ನೆರವೇರಲಿವೆ ಎಂದು ಹೇಳಿದರು. ರಾಷ್ಟ್ರೀಯ ಬಸವ ದಳದ ತಾಲೂಕಾಧ್ಯಕ್ಷ ರಾಜಶೇಖರ ದೇವಣಿ ಮಾತನಾಡಿ ಮೂರು ದಿನಗಳ ಕಾಲ ನಡೆಯುವ ಈ ಒಂದು ಐತಿಹಾಸಿಕ ಉತ್ಸವದಲ್ಲಿ ಸರ್ವರೂ ಪಾಲ್ಗೊಂಡು ಬಸವ ತತ್ವ ಸಿದ್ಧಾಂತಗಳನ್ನು ಪ್ರಚಾರ ಮಾಡಬೇಕೆಂದರು. ಸುದ್ದಿಗೋಷ್ಠಿಯಲ್ಲಿ ರಾಷ್ಟ್ರೀಯ ಬಸವದಳದ ಪದಾಧಿಕಾರಿಗಳು, ಬಸವಾನುಯಾಯಿಗಳು, ಗಣ್ಯರು ಉಪಸ್ಥಿತರಿದ್ದರು.

# ಘತ್ತರಗಿ ಭಾಗ್ಯವಂತಿಯ 13ನೇ ವರ್ಷದ ಪಾದಯಾತ್ರೆ.



ಮಲ್ಲಮ್ಮ ನುಡಿ ವಾರ್ತೆ

ಮಾರನಾಳ ತಾಂಡ : ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ಮಾರನಾಳ ತಾಂಡದಿಂದ ಶ್ರೀ ಘತ್ತರಗಿ ಭಾಗ್ಯವಂತಿಯವರೆಗೆ ಪಾದಯಾತ್ರೆ. ಪ್ರತಿ ವರ್ಷದಂತೆ ಈ ವರ್ಷಸೆರಿ 13ನೇ ವರ್ಷ ಪಾದಯಾತ್ರೆ ಇದಗಿದ್ದು ಈ ಪಾದಯಾತ್ರೆಯಲ್ಲಿ ಮಾರನಾಳ ತಾಂಡದ ಹಿರಿಯರು ಯುವಕರು ಸೇರಿ ಪಾದಯಾತ್ರೆ ಮಾಡುತ್ತಿದ್ದಾರೆ.

ಈ ಪಾದಯಾತ್ರೆಯು ಸರಿ-ಸುಮಾರು 120 ಕಿಲೋ ಮೀಟರ್ ನಷ್ಟು ದೂರವಿದ್ಧಿ ಆದರೂ ಸಹಾ ಮಳೆ, ಗಾಳಿ, ಚಳ್ಳಿ, ಅನ್ನದೆ ದೇವರ ಆರಾಧನೆ ಮಾಡುತ್ತ ಸುಮಾರು 3 ದಿನಗಳ ಕಾಲ ಪಯಣ ಬೆಳಸಿ ಆಮವಾಸೆ ದಿನದಂದು ಘತ್ತರಗಿ ಭಾಗ್ಯವಂತಿಯ ತಾಯಿಗೆ ಪೂಜಾ ಸಲ್ಲಿಸುತ್ತಾರೆ.

ತದನಂತರ ನಾರಾಯಣಪುರ ಹತ್ತಿರಾದ ದಕ್ಷಿಣ ಕಾಶಿ ಎಂದೇ ಹೆಸರು ವಾಸಿಯಾಗಿರುವ ಛಾಯಾ ಭಗವರಿಗೆ ಬಂದು ಸ್ಥಾನಮಾಡಿ ದೇವಿಯ ಪೂಜೆ ಸಲ್ಲಿಸಿ ಅಲ್ಲಿಂದ ನದಿಯ ನೀರು ತಂದು ಸ್ವಾಗಮದ ಮನೆಗೆ ಬಂದು 9 ದಿನಗಳ ಕಾಲಾ ನವರಾತ್ರಿಯ ದೀಪವನ್ನು ಹಚ್ಚುವ ಪರಂಪರೆಯನ್ನು ಪಾಲಿಸುತ್ತಾರೆ.

ಈ ಪಾದಯಾತ್ರೆಯಲ್ಲಿ ಸರಿ ಸುಮಾರು 80ಕಿಂತ ಹೆಚ್ಚು ಜನರು ಪಾದಯಾತ್ರೆಯಲ್ಲಿ ಪಾಲಿಭಾಗಿಸ್ತಾರಾಗಿದ್ದಾರೆ

ಇದೆಸಂದರ್ಭದಲ್ಲಿ ಪಾದಯಾತ್ರೆಯ ಹೋಗುವ ಮನೆಯ ಕುಟುಂಬಸ್ಥರು ಹಾಗೂ ಗುರು ಹಿರಿಯರು ಸೇರಿ ಅವರ ಪಾದಯಾತ್ರೆ ಸುಖಕರವಾಗಿ ಜರಗಲಿ ಎಂದು ತಾಯಿಯಲಿ ಬೇಡಿಕೊಂಡರು ..

# ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ಸಮೀಕ್ಷೆಯ ಎರಡನೇ ಹಂತದ ತರಬೇತಿ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಸೆ 18 ಇಲ್ಲಿನ ಸರಕಾರಿ ಪದವಿ ಪೂರ್ವ ಕಾಲೇಜು ಬಾಲಕರ ಪ್ರೌಢ ಶಾಲಾ ವಿಭಾಗದಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ಸಮೀಕ್ಷೆಯ ಎರಡನೇ ಹಂತದ ತರಬೇತಿಯಲ್ಲಿ ತಹಶೀಲ್ದಾರರಾದ ಡಾ.ದತ್ತಾತ್ರೆ ಗಾದಾ ಮಾತನಾಡಿ ಸರಕಾರದ ನಿರ್ದೇಶನದಂತೆ ನಾವೆಲ್ಲರು ಸಮೀಕ್ಷೆ ಅಚ್ಚುಕಟ್ಟಾಗಿ ನಿರ್ವಹಿಸಬೇಕಾಗಿದೆ. ಈಗಾಗಲೇ ಆಶಾ ಕಾರ್ಯಕರ್ತೆಯರನ್ನು ಮನೆ ಮನೆಗೆ ಭೇಟಿನೀಡಿ ಏನು ಪ್ರಶ್ನೆಗಳಿವೆ ಎಂಬುದನ್ನು ಮುಂಚಿತವಾಗಿ ತಿಳಿಸಲಾಗಿದೆ. ಸಮೀಕ್ಷೆದಾರರಿಗೆ ಬೇಗ ಕಾರ್ಯನಿರ್ವಹಿಸಲು ಅನುಕೂಲ ಆಗುತ್ತದೆ.

ಪರಿಶಿಷ್ಟ ಜಾತಿ ಒಳ ಮೀಸಲಾತಿ ಗಣತಿಯ ಮೊತ್ತ ಬಂದಿರುತ್ತದೆ ಕೆಲವೆ ದಿನಗಳಲ್ಲಿ ಹಣ ತಮ್ಮ ಖಾತೆಗೆ ಜಮಾ ಆಗುತ್ತದೆ. ಗಣತಿ ಸಮೀಕ್ಷೆಯಲ್ಲಿ ಆಗುವ ಸಮಸ್ಯೆಗಳಿಗೆ ಮಾಸ್ಟರ್ ಟ್ರೈನರ್ ಗಳನ್ನು ಸಂಪರ್ಕಿಸಿ ಎಂದರು.

ಈ ತರಬೇತಿಯಲ್ಲಿ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಗಿರಿಧರ ಧಾನೂರೆ ಮಾತನಾಡಿ ಗಣತಿ ಸಮೀಕ್ಷೆಯು ಹಬ್ಬ ದಿನಗಳಲ್ಲಿ ಮಾಡಲು ಸೂಚಿಸಿರುತ್ತಾರೆ. ಸರಕಾರಿ ನೌಕರರಾದ ನಾವು 24*7 ಕೆಲಸ ಮಾಡಲು ಸಿದ್ದರಾಗಿರಬೇಕಾಗಿದೆ ಎಂದರು. ಈ ಸಂದರ್ಭದಲ್ಲಿ ಶಿವಕುಮಾರ ಜಡಗೆ, ಸಂಜೀವಕುಮಾರ ನಡುಕರ, ಪ್ರವೀಣ ಸೂರ್ಯವಂಶಿ, ರಮೇಶ ಭಾತಂಬ್ರೆ, ವೀರಭದ್ರಪ್ಪ ಹಾಗೂ ಪೂರ್ವ ಮತ್ತು ಪಶ್ಚಿಮ ಸಮೂಹ ಸಂಪನ್ಮೂಲ ಕೇಂದ್ರದ ವಿವಿಧ ಶಾಲೆಗಳ ಗಣತಿ ಸಮೀಕ್ಷೆದಾರರು ಉಪಸ್ಥಿತರಿದ್ದರು.

# ಸಪ್ಟಂಬರ್ 22ರಿಂದ ಅಕ್ಟೋಬರ 2ರ ವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳವರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಸೆ 18

ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನ ಇಲ್ಲಿನ ಅಕ್ಕಮಹಾದೇವಿ ಮಹಿಳಾ ಮಹಾವಿದ್ಯಾಲಯದ ಆವರಣದಲ್ಲಿ ನಿರ್ಮಿಸಿರುವ ಮಾನವ ಧರ್ಮ ಮಂಟಪದಲ್ಲಿ ಸಪ್ಟಂಬರ್ 22ರಿಂದ ಅಕ್ಟೋಬರ್ 2ರ ವರೆಗೆ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗುವುದೆಂದು ದಸರಾ ಧರ್ಮ ಸಮ್ಮೇಳನದ ಹಾರಕೂಡ ಸಂಸ್ಥಾನ ಹಿರೇಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಮಾರ್ಗದರ್ಶಕರ ಹಾಗೂ ತಡೋಳ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಹೇಳಿದರು. ಇಲ್ಲಿನ ಅಕ್ಕಮಹಾದೇವಿ ಮಹಿಳಾ ಮಹಾವಿದ್ಯಾಲಯದ ಆವರಣದಲ್ಲಿ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ ಬ ರ ಂ ವ ಸಪ್ಟಂಬರ್ 22ರಂದು ಮಾಜಿ ಮುಖ್ಯ ಮಂತ್ರಿ ಹಾಗೂ ಬಿಜೆಪಿ ಹಿರಿಯ ಧುರೀಣರಾದ ಬಿ.ಎಸ್. ಯಡಿಯೂರಪ್ಪ ಸಮಾರಂಭವನ್ನು ಉದ್ಘಾಟಿಸುವರು. ಅರಣ್ಯ ಪರಿಸರ ಖಾತೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶರನ್ನವರಾತ್ರಿ ದಸರಾ ಮಹೋತ್ಸವ ಸಮಿತಿಯ ಅಧ್ಯಕ್ಷರಾದ ಈಶ್ವರ ಖಂಡ್ರೆ ಶ್ರೀ ರಂಭಾಪುರಿ ಜಗದ್ಗುರುಗಳ ಭಾವಚಿತ್ರ ಬಿಡುಗಡೆ ಮಾಡುವರು. ಸಮಿತಿಯ ಗೌರವಾಧ್ಯಕ್ಷರಾದ ಹಾರಕೂಡ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ಶಿವಾಚಾರ್ಯರು ನೇತೃತ್ವವಹಿಸಲಿದ್ದು ಅ.ಭಾ.ವೀ.ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಸಿಂದಗಿಯ ಡಾ. ಪ್ರಭುಸಾರಂಗದೇವ ಶಿವಾಚಾರ್ಯರು ಸಮ್ಮುಖ ವಹಿಸುವರು. ಪೌರಾಡಳಿತ-ಹಜ್ ಖಾತೆ ಸಚಿವ ರಹೀಮಖಾನ, ಹುಮನಾಬಾದ ಶಾಸಕ ಡಾ.ಸಿದ್ಧಲಿಮಗ ಪಾಟೀಲ, ಮಾಜಿ ಸಚಿವ ರಾಜಶೇಖರ ಪಾಟೀಲ ಹುಮನಾಬಾದ, ಮೀನುಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷೆ ಮಾಲಾ ಬಿ.ನಾರಾಯಣರಾವ್, ಸಮಿತಿಯ ಕಾರ್ಯಾಧ್ಯಕ್ಷ-ಶಾಸಕ ಶರಣು ಬಿ.ಸಲಗರ ಸೇರಿದಂತೆ ಹಲವಾರು ಗಣ್ಯರು ಪಾಲ್ಗೊಳ್ಳುವರು. 23ರಂದು ಮುಖ್ಯ ಅತಿಥಿಗಳಾಗಿ ಸಚಿವರಾದ ಪ್ರಿಯಾಂಕ ಖರ್ಗೆ, ಸಂಸದರಾದ ಸಾಗರ ಖಂಡ್ರೆ, ಶಿವಾಜಿ ಬಂಡೆಪ್ಪ ಕಾಳಗೆ, ಕೆಕೆಆರ್‌ಡಿಬಿ ಅಧ್ಯಕ್ಷ ಅಜಯಸಿಂಗ್ ಧರ್ಮಸಿಂಗ್, ಶಾಸಕ ಸಿದ್ಧಲಿಂಗ ಪಾಟೀಲ, ಡಾ॥ ಚಂದ್ರಶೇಖರ ಪಾಟೀಲ, ಮಾಜಿ ಸಚಿವ ಬಸವರಾಜ ಪಾಟೀಲ ಅಟ್ಟೂರು ಮೊದಲಾದವರು ಭಾಗವಹಿಸುವರು. 24ರಂದು ಕೊಲ್ಲಿಪಾಕಿ ಕ್ಷೇತ್ರದರ್ಶನ ಕೃತಿಯನ್ನು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಬಿಡುಗಡೆಗೊಳಿಸುವರು. ಶಾಸಕರಾದ ಡಾ.ಅವಿನಾಶ ಜಾಧವ, ಬಸವರಾಜ ಮತ್ತಿಮೂಡ, ವಿ.ಪ. ಮಾಜಿ ಸಭಾಪತಿ ರಘುನಾಥ ಮಲ್ಕಾಪುರೆ ಪ್ರಕಾಶ ಖಂಡ್ರೆ, ದತ್ತಾತ್ರೆಯ ಪಾಟೀಲ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳುವರು. 25ರಂದು ಸಚಿವ ಶರಣಬಸಪ್ಪಗೌಡ ದರ್ಶನಾಪುರ, ಬಿಜೆಪಿ ರಾಜ್ಯಾಧ್ಯಕ್ಷ-ಶಾಸಕ ಬಿ.ವೈ.ವಿಜಯೇಂದ್ರ, ಶಾಸಕರಾದ ಅಲ್ಲಮಪ್ರಭು ಪಾಟೀಲ, ಅಭಿಮನ್ಯು ಪವಾರ, ವಿ.ಪ.ಸದಸ್ಯ ಭೀಮರಾವ ಪಾಟೀಲ, ಮಾಜಿ ಶಾಸಕರಾದ ರಾಜೇಂದ್ರ ವರ್ಮಾ, ಗುಂಡಪ್ಪ ವಕೀಲ ಭಾಗವಹಿಸುವರು.

26ರಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಮಾಜಿ ಮುಖ್ಯ ಮಂತ್ರಿ-ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ವಿಜಯಾನಂದ ಕಾಶಪ್ಪನವರ, ಬಿ.ಆರ್.ಪಾಟೀಲ, ಜಿ.ಎಸ್.ಪಾಟೀಲ, ಸಿ.ಸಿ.ಪಾಟೀಲ, ಮಾಜಿ ಸಂಸದ ಬಸವರಾಜ ಪಾಟೀಲ, ಅಶೋಕ ಖೇಣಿ ಭಾಗವಹಿಸುವರು.

ಸಪ್ಟಂಬರ್ 27ರಂದು ರಂಭಾಪುರಿ ಬೆಳಗು ಪತ್ರಿಕೆಯನ್ನು ಕೇಂದ್ರ ಸಚಿವ ನಿತಿನ್ ಗಡ್ಕರಿ ಬಿಡುಗಡೆ ಮಾಡುವರು. ಮಾಜಿ ಮುಖ್ಯಮಂತ್ರಿ-ಸಂಸದ ಜಗದೀಶ ಶೆಟ್ಟರ್, ಅ.ಭಾ.ವೀ.ಲಿಂ.ಮಹಾಸಭಾ ಅಧ್ಯಕ್ಷ ಶಂಕರ ಬಿದರಿ, ಮಹಿಳಾ ಘಟಕದ ಅಧ್ಯಕ್ಷೆ ವೀಣಾ ಕಾಶಪ್ಪನವರ, ಬಂಡೆಪ್ಪಾ ಖಾಶಂಪುರ, ರಾಜಕುಮಾರ ತೆಲ್ಕೂರ ಪಾಲ್ಗೊಳ್ಳುವರು. 28ರಂದು ಕೇಂದ್ರ ಸಚಿವ ವಿ.ಸೋಮಣ್ಣ, ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ ಶಿಂಧೆ, ಸಚಿವ ಡಾ॥ ಶರಣುಪ್ರಕಾಶ ಪಾಟೀಲ, ಸಂಸದ ಬಿ.ವೈ.ರಾಘವೇಂದ್ರ, ಶಾಸಕರಾದ ಎಂ.ವಾಯ್.ಪಾಟೀಲ, ಸಂಭಾಜಿರಾವ ಪಾಟೀಲ, ಜಗದೀಶ ಗುಡಗುಂಟಿ ಭಾಗವಹಿಸವರು. 29ರಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ರಾಜ್ಯ ಸಚಿವೆ ಲಕ್ಷ್ಮಿ ಹೆಬ್ಬಾಳಕರ, ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ, ಶಾಸಕರಾದ ಲಕ್ಷ್ಮಣ ಸವದಿ, ಹರೀಶ ಪೂಂಜ್ಯಾ, ರಾಜೇಶ ನಾಯಕ, ಮಾಜಿ ಸಂಸದ ಡಾ.ಉಮೇಶ ಜಾಧವ ಪಾಲ್ಗೊಳ್ಳುವರು. 30ರಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಸಚಿವ ಮಧು ಬಂಗಾರಪ್ಪ, ಮಾಜಿ ಸಚಿವ ಮುರಗೇಶ ನಿರಾಣಿ, ಸುಭಾಷ ಕಲ್ಲೂರ, ಸುಭಾಷ ಸೇರಿದಂತೆ ಅನೇಕರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸುನಿಲ್ ಪಾಟೀಲ, ಸುರೇಶ ಸ್ವಾಮಿ, ಚಂದ್ರಶೇಖರ ಪಾಟೀಲ, ಸಂದೀಪ ಪಾಟೀಲ, ಪ್ರಭು ಕಾಡದೆ, ದಯಾನಂದ ಶೀಲವಂತ, ಸೂರ್ಯಕಾಂತ ಮಠ, ವೀರಣ್ಣ ಶೀಲವಂತ, ರಮೇಶ ರಾಜೋಳೆ, ಗೋವಿಂದ ರೆಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಸೆ.18: ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದ ಫಲವಾಗಿ ಭಾರತದೇಶಕ್ಕೆ 1947 ಅಗಸ್ಟ್ 15ರಂದು ಸುಮಾರು 250 ಕ್ಕೂ ಹೆಚ್ಚು ವರ್ಷಗಳ ಕಾಲದಿಂದ ಬ್ರಿಟಿಷರ್ ದಾಸ್ಯದಲ್ಲಿದ್ದ ಭಾರತದೇಶಕ್ಕೆ ಸ್ವಾತಂತ್ರ್ಯ ಲಭಿಸಿದರೆ, ಹೈದರಾಬಾದ್ ಪ್ರಾಂತ್ಯಕ್ಕೆ ಸೇರಿದ ಬೀದರ್, ಕಲಬುರಗಿ (ಗುಲಬರ್ಗಾ), ಯಾದಗಿರ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯ ನಗರ 7 ಜಿಲ್ಲೆಗಳನ್ನೊಳಗೊಂಡ ಆಗಿನ ಹೈದರಾಬಾದ್ ಕರ್ನಾಟಕ ಈಗಿನ ಕಲ್ಯಾಣ ಕರ್ನಾಟಕ ಮಾತ್ರ ಸ್ವತಂತ್ರವಾಗಿರಲಿಲ, ಒಂದು ವರ್ಷ ತಡವಾಗಿ, ಅಂದರೆ 1948 ಸೆಪ್ಟೆಂಬರ್ 17 ರಂದು ಪಟೇಲರ ರಾಜಕೀಯ ಮುತ್ಸದ್ದಿತನ ಮತ್ತು ಚಾಣಾಕ್ಷತನದಿಂದ ಬಹುಜನರ ಆಶಯದಂತೆ ಈ ಪ್ರಾಂತ್ಯವನ್ನು ಭಾರತದಲ್ಲಿ ವಿಲೀನಗೊಳಿಸಲು ಕಾರ್ಯತಂತ್ರ ರೂಪಿಸಿದ ಪ್ರಯುಕ್ತ ನಿಝಾಮನನ್ನು ಶರಣಾಗುವಂತೆ ಮಾಡಿ ಹೈದರಾಬಾದ್ ಪ್ರಾಂತ್ಯವನ್ನು ವಿಮೋಚನೆಯಾಗುವಂತೆ ಕಾರ್ಯತಂತ್ರವನ್ನು ರೂಪಿಸಿದರು ಎಂದು ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ.ಪಾಟೀಲ ಹೇಳಿದರು.

ಅವರು ಬುಧವಾರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆಯಡಿಯಲ್ಲಿ ಬರುವ ತೋಟಗಾರಿಕೆ ಮಹಾವಿದ್ಯಾಲಯ ಬೀದರನಲ್ಲಿ 77 ನೇ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಲ್ಯಾಣ ಕರ್ನಾಟಕದ ಮೊದಲಿನ ಸ್ಥಿತಿಗತಿಯ ಬಗ್ಗೆ ಹಾಗೂ ಇನ್ನು ಹೆಚ್ಚು ಅಭಿವೃದ್ಧಿ ಹೊಂದಲು ಕೈಗೊಳ್ಳಬಹುದಾದ ಯೋಜನೆಗಳ ಬಗ್ಗೆ ವಿಸ್ತೃತವಾಗಿ ವಿವರಿಸಿ, ಎಲ್ಲ ಮಹನೀಯರು ಗಳಿಸಿಕೊಟ್ಟ ಸ್ವಾತಂತ್ರವನ್ನು ಉಳಿಸಿಕೊಂಡು ಹೋಗುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿರುತ್ತದೆ. ಸ್ವಾತಂತ್ರ ದಿನವೆಂಬುದು ಪ್ರತಿಯೊಬ್ಬ ಭಾರತೀಯರ ಹೃದಯಲ್ಲಿ ಚಿರಸ್ಥಾಯಿಯಾಗಿರಬೇಕೆಂದ ು, ನಮ್ಮದೇಶವು ಶ್ರೀಮಂತ ಸಂಸ್ಕೃತಿ, ವೈವಿಧ್ಯತೆಯಲ್ಲಿ ಏಕತೆ ಮತ್ತು ಎಲ್ಲಾ ಧರ್ಮದವರು ಸೌಹಾರ್ದತೆಯಿಂದ ಇದ್ದು, ಸಮಸ್ತನಾಡಿನ ಶ್ರೇಯೋಭಿವೃದ್ಧಿಗೆ ಪ್ರಾಮಾಣಿಕ ಮತ್ತು ನಿಸ್ವಾರ್ಥದಿಂದ ಕೈ ಜೋಡಿಸೋಣವೆಂದರು.

ಈ ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕ ಡಾ. ಮುಹಮ್ಮದ ಫಾರೂಖ, ಸಹಾಯಕ ಪ್ರಾಧ್ಯಾಪಕ ಡಾ. ವಿಜಯಮಹಾಂತೇಶ, ರಾಷ್ಟ್ರೀಯ ಸೇವಾ ಯೋಜನಾ ಅಧಿಕಾರಿ ಡಾ. ವಿರೇಂದ್ರ ಪ್ರತಾಪಸಿಂಹ, ಸಹಾಯಕ ಪ್ರಾಧ್ಯಾಪಕರು, ಮಹಾವಿದ್ಯಾಲಯದ ಇನ್ನಿತರ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅತ್ಯುತ್ತಮ ಪರಿಸರ ಸ್ನೇಹಿ ಗಣೇಶ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್:- ತಾಲೂಕಿನ ಮರಕುಂದಾ ಗ್ರಾಮದ ಚಾಲುಕ್ಯ ಶಿಕ್ಷಣ ಸಂಸ್ಥೆ, ಪರಿಸರ ವಾಹಿನಿ ಬೀದರ್ ಇವರು ಲಿಂಗೈಕ್ಯ ವೇ. ಗದಗಯ್ಯಾ ಕಾವಡಿಮಠ ಇವರ 12ನೇ ಪುಣ್ಯಸ್ಮರಣೆ ಹಮ್ಮಿಕೊಂಡಿದ್ದ ಪರಿಸರೋತ್ಸವ ಪ್ರಶಸ್ತಿ ಅಂಗವಾಗಿ ಹುಮನಾಬಾದ ಅಡತ್ ಬಜರ್ ಗಣೇಶ್ ಸಮಿತಿಯವರಿಗೆ ಅತ್ಯುತ್ತಮ ಪರಿಸರ ಸ್ನೇಹಿ ಗಣೇಶ್ ಪ್ರಶಸ್ತಿ ನೀಡಿ ಪೂಜ್ಯ ಶಿವಲಿಂಗೇಶ್ವರ ಸ್ವಾಮಿಗಳು ಖೇಳಗಿ ಸನ್ಮಾನಿಸಿ ಆಶೀರ್ವದಿಸಿದರು. ಗ್ಯಾರಂಟಿ ಯೋಜನೆಯ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡ, ಜಿಲ್ಲಾ ಉಪಾಧ್ಯಕ್ಷ ಉದಯಕುಮಾರ್ ವಾರದ, ಚಿಟಗುಪ್ಪ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್, ಉಪಾಧ್ಯಕ್ಷ ನಸೀರ್ ಖಾನ್, ಇಒ ಮಾಣಿಕರಾವ ಪಾಟೀಲ್, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಪರಿಸರವಾದಿ ಶೈಲೇಂದ್ರ ಕಾವಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಫಲಾನುಭವಿಗಳ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.18-ಕಲಬುರಗಿ ಮಹಾನಗರ ಪಾಲಿಕೆಯ ಶೇ.24.10 ಎಸ್.ಎಫ್.ಸಿ.ಕ್ರಿಯಾ ಯೋಜನೆಯಡಿ ಅಂಗವಿಕಲರಿಗೆ/ ಪೋಲಿಯೋ ರೋಗಕ್ಕೆ ಒಳಪಟ್ಟವರಿಗೆ ಕೃತಕ ಪಾದ ಇತರೆ ಭೇದಿತ ಅವಯವಗಳ ಜೋಡಣೆಗೆ ಸಂಬಂಧಿಸಿದಂತೆ ಅರ್ಹ ಫಲಾನುಭವಿಗಳ ತಾತ್ಕಾಲಿಕ ಅರ್ಹ ಆಯ್ಕೆಪಟ್ಟಿಯನ್ನು ಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಈಗಾಗಲೇ ಪ್ರಕಟಿಸಲಾಗಿದೆ ಎಂದು ಮಹಾನಗರಪಾಲಿಕೆ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ. ಈ ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಸೆಪ್ಟೆಂಬರ್ 26 ರೊಳಗಾಗಿ ಪೂರಕ ದಾಖಲಾತಿಗಳೊಂದಿಗೆ ಕಲಬುರಗಿ ಮಹಾನಗರಪಾಲಿಕೆ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

# ಆದರ್ಶ ದಂಪತಿ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:-ತಾಲೂಕಿನ ಹಳ್ಳಿಖೇಡ (ಕೆ) ಗ್ರಾಮದ ಸಮಾಜ ಕಾರ್ಯಕರ್ತ ಗ್ಯಾ-ರೆಂಟಿ ಯೋಜನೆಯ ಜಿಲ್ಲಾ ಉಪಾಧ್ಯಕ್ಷ ಉದಯಕುಮಾರ್ ವಾರದ ಶರಣಮ್ಮ ದಂಪತಿಗಳಿಗೆ ಆದರ್ಶ ದಂಪತಿಗಳ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಖೇಳಗಿ ಶಿವಲಿಂಗೇಶ್ವರ ಸ್ವಾಮಿಗಳು ಗ್ಯಾರಂಟಿ ಯೋಜನೆಯ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡ, ಇಒ ಮಾಣಿಕರಾವ ಪಾಟೀಲ್, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಪರಿಸರವಾದಿ ಶೈಲೇಂದ್ರ ಕಾವಡಿ, ಪತ್ರಕರ್ತ ರಾಜಕುಮಾರ ಆರ್. ಹಡಪದ, ಶಂಕರ್ ಚಾಮಾ, ಬೀರಪ್ಪ, ಚಾಲುಕ್ಯ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಾಮರಾವ ಹುಡೆದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅತಿವೃಷ್ಟಿ ಬೆಳೆ ಹಾನಿ ರೈತರಿಗೆ ವಿಮೆ ಅಥವಾ ಪರಿಹಾರ ಬಂದಿಲ್ಲ:ಗುರುನಾಥ ವಟಗೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.18:ಅತಿವೃಷ್ಟಿಬೆಳೆ ಹಾನಿ ರೈತರ ಖಾತೆಗೆ ವಿಮೆ ಅಥವಾ ಪರಿಹಾರವಾಗಿ ಇಲ್ಲಿವರೆಗೂ ಒಂದು ನಯಾ ಪೈಸೆ ಬಂದಿಲ್ಲ ಎಂದು ಮುಧೋಳ(ಬಿ) ಪಿ.ಕೆ.ಪಿ.ಎಸ್ ಅಧ್ಯಕ್ಷರಾದ ಗುರುನಾಥ ವಟಗೆ ಹೇಳಿದರು.

ತಾಲೂಕಿನ ಮುಧೋಳ(ಬಿ) ಗ್ರಾಮದಲ್ಲಿ ಗುರುವಾರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ ಮುಧೋಳ(ಬಿ) ವತಿಯಿಂದ ಆಯೋಜನೆ ಮಾಡಿದ 49ನೇ ವಾರ್ಷಿಕ ಮಹಾಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರೈತರಿಗೆ ಇನ್ಸೂರೆನ್ಸ್ ಕಟ್ಟವಂತೆ ಜಿಲ್ಲಾಧಿಕಾರಿ ತಾಲೂಕ ಅಧಿಕಾರಿಗಳು ಸಲಹೆ ಮೇರೆಗೆ ಸಾಕಷ್ಟು ರೈತರು ವೀಮೆ ಕಟ್ಟಿದ್ದಾರೆ. ತಾಲೂಕಿನಲ್ಲಿ ಅತಿವೃಷ್ಟಿಯಾಗಿ ರೈತರು ಕಂಗಾಲ ಆಗಿದ್ದಾರೆ, ಇಂತಹ ಕಷ್ಟಸಮಯದಲ್ಲಿ ರೈತರಿಗೆ ಇಲ್ಲಿಯವರಿಗೆ ಯಾವುದೇ ವೀಮೇ ಆಗಲಿ ಪರಿಹಾರವಾಗಲಿ ಬಂದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂಬಂಧ ಅಧಿಕಾರಿಗಳು ನಮ್ಮಗೆ ಸರಿಯಾಗಿ ಸ್ವಂದನೆ ಕೂಡದೆ ಇರುವುದು ಬಹಳ ಬೇಸರ ಸಂಗತಿಯಾಗಿದೆ. ಸಂಬಂಧ ಪಟ್ಟ ಅಧಿಕಾರಗಳು ರೈತ ನೋವನ್ನು ಅರ್ಥೈಸಿ ಕೊಂಡು ಆದಷ್ಟುಬೇಗ ರೈತರಿಗೆ ಪರಿಹಾರ ವೀಮೆ ಹಣ ಸಿಗುವಂತೆ ಮಾಡಬೇಕಾಗಿ ಒತ್ತಾಯಿಸಿದರು.

ಮುಧೋಳ(ಬಿ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ ಮುಧೋಳ(ಬಿ) 1740 ರೈತರ ಸಂಘ ರೈತರ ಪರವಾಗಿ ಉತ್ತಮ ಕಾರ್ಯ ಮಾಡುತ್ತಿದೆ ಈ ವರ್ಷ ಸಂಘದ ಒಟ್ಟು ಲಾಭ 7,40,274 ರೂಪಾಯಿ ಆಗಿದೆ ಎಂದು ಸಭೆಗೆ ತಿಳಿಸಿದರು.ಕಾಮನ ಸರ್ವಿಸ್ ಸೆಂಟರ್ (ಸಿ.ಎಸ್.ಸಿ) ಮೂಲಕ ನಮ್ಮ ಕಚೇರಿಯಲ್ಲಿ ಎಫ್.ಐ.ಡಿ, ಪ್ಯಾನ್ ಕಾರ್ಡ್,ಪಾನಿ,ಹೊಲಡ್ಡಿಂಗ್, ಇ.ಸಿ. ಹೆಲ್ತ್ ಇನ್ಸೂರೆನ್ಸ್,ಪೆನಸೇನ್ ಫೈಲ ಹೀಗೆ ಅನೇಕ ಇಂಟರನೆಟ ಸೇವೆ ದೊರೆಯುತ್ತವೆ.

ರೈತರಿಗಾಗಿ ಅನೇಕ ಸಾಲ ಸೌಲಭ್ಯ ದೊರೆಯುತ್ತದೆ ರೈತರು ಇದರ ಲಾಭ ಪಡೆದು ಕೊಳ್ಳಬೆಕಂದು ಮಾಹಿತಿ ನೀಡಿದರು.

ಪ್ರಗತಿ ಪರ ರೈತ ಹೌವಗಿರಾವ ವಟಗೆ ಮಾತನಾಡಿ, ರಾಸಾಯನಿಕ ಗೊಬ್ಬರ ಹೆಚ್ಚು ಬಳಸದೆ, ತಾವು ಸ್ವಂತ ಜೈವಿಕ ಗೊಬ್ಬರ ತಯಾರಿಸಿ ಹೊಲಕ್ಕೆ ಹಾಕಿದ್ದಾರೆ ಹೆಚ್ಚಿನ ಬೆಳೆ ಮತ್ತು ಮಣ್ಣಿನ ಫಲವತತೆ ಹೆಚ್ಚಿಸಬಹುದು, ಬಹು ಕೃಷಿ ಅಥವಾ ತೋಟಗರಿಕೆ ಮೂಲಕ ಹೆಚ್ಚಿನ ಆದಾಯ ಬರುವ ಬೆಳೆ ಬೆಳೆದು ಯಶಸ್ವಿಯಾಗಬೇಕೆಂದು ಹೇಳಿದರು.

ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ದತ್ತಾತ್ರೇಯ ಪೂಜಾರಿ ಮಾತನಾಡಿ, ಪಂಚಾಯತನಲ್ಲಿ ರೈತರಿಗೆ ದನದ ಕೊಟ್ಟಿಗೆ, ಶೇಡ, ಬಾವಿ ಹೀಗೆ ಅನೇಕ ಸವಲತ್ತು ಸಿಗುತ್ತವೆ ಇದರ ಲಾಭ ಪಡೆದು ಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಉಪಾಧ್ಯಕ್ಷರು ವಿಠಲರಾವ ಬೋರಗಾವೆ,ರಾಜಕುಮಾರಬಿಚ್ಚುಕುಂದೆ, ಶಿವಾಜಿರಾವ ಬಿರಾದಾರ, ಪಂಡರಿ ಶರಿಕಾರ, ವಿಶ್ವನಾಥ ಹಲ್ಲಾಳೆ, ರಾಜೇಂದ್ರ ಜಾಧವ, ಬಾಬುರಾವ ರಕ್ಷಾಳೆ, ಶ್ರೀಮತಿ ಸಂಗೀತ ಗುಡ್ಡಾ, ಸುನೀತಾ ಹಳಕಾಯಿ, ನಾಗಯ್ಯ ಸ್ವಾಮಿ, ಕಲಿಮೋದ್ದಿನ ಶೇಖ, ಬಸವರಾಜ ಸ್ವಾಮಿ ಮತ್ತು ಗ್ರಾಮ ಪಂಚಾಯತ ಅಧ್ಯಕ್ಷರಾದ ಧನರಾಜ ವಡೆಯಾರ, ಉಪಾಧ್ಯಕ್ಷರು ನಿಕಿತಾ ಹಳಕಾಯಿ,ಸದಸ್ಯರಾದ ಸೋಮನಾಥ ಸ್ವಾಮಿ, ಸುನಿಲ ಹಲಬರ್ಗೆ, ಸಿದ್ದಮ್ಮ ಸಂಜು, ಜೈಶ್ರೀ ಸೋಮನಾಥ, ಧನರಾಜ ಶಿವಪ್ಪ, ಸಾಲಿಯಾ ಲಾಹ್ಮದ, ಗಜಾನಂದ ವಟಗೆ, ರಾಜಕುಮಾರ ಡಬೆ, ಶಾಲೂಕಾ ಪ್ರವೀಣ, ತುಳಸಿರಾಮ ನಾತು, ಅರುಣ ರಾಜಕುಮಾರ ಬೆಂಬ್ರಾ, ಮಂಗಲಾ ಜ್ಞಾನೇಶ್ವರ, ಚಂದ್ರಕಾಂತ ನಿವರ್ತಿ ಲಿಂಗದಳ್ಳಿ, ಮೀನಾಬಾಯಿ ಜ್ಞಾನೋಬಾ ಹಾಗೂ ಮುಧೋಳ (ಬಿ). ಹಸಿಖೇರಾ, ಗೌಡಗಾಂವ, ಬೆಂಬ್ರಾ, ನಿಂಗದಳ್ಳಿ ಗ್ರಾಮದ ರೈತರು ಸೇರಿದರು

# ಶಿವನಗರ ಅಂಗನವಾಡಿ ಕೇಂದ್ರ್ರದಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.18–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಲಬುರಗಿ ನಗರ ಯೋಜನೆ ವ್ಯಾಪ್ತಿಯ ಶಹಾಬಜಾರ–ಬಿ ಹಾಗೂ ಖಾನಾಪುರ–ಬಿ ವಲಯದ ಸಂಯುಕ್ತಾಶ್ರಯದಲ್ಲಿ ಶಹಾಬಜಾರ–ಬಿ ವಲಯದ ಶಿವನಗರ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾದ ರಾಷ್ಟ್ರೀಯ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಬುಧವಾರ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು ಉದ್ಘಾಟಿಸಿದರು.

ನಂತರ ಅವರು ಮಾತನಾಡಿ, ಪೋಷಣ ಅಭಿಯಾನದ ಮಹತ್ವ ತಿಳಿಸಿದಲ್ಲದೇ ಅಪೌಷ್ಠಿಕತೆ ಹೋಗಲಾಡಿಸಲು ಉತ್ತಮ ಗುಣಮಟ್ಟದ ಆಹಾರ ಸೇವಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಮಹಿಳಾ ಶಿವಶರಣಪ್ಪ ಪೂಜಾರಿ ಅವರು ಮಾತನಾಡಿ, ಹಸಿರು ತರಕಾರಿ, ಮೊಟ್ಟೆ, ಬೆಳೆ ಕಾಳು ಹಾಗೂ ಪೌಷ್ಠಿಕಯುತ್ತ ಆಹಾರ ಸೇವಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಕಲಬುರಗಿ ನಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿವಶರಣಪ್ಪ ಬುಶೆಟ್ಟಿ ಅವರು ಮಕ್ಕಳ ಸ್ವಚ್ಚತೆ ಹಾಗೂ ಎಲ್ಲಾ ತರಕಾರಿ ಮತ್ತು ಕಾಳನ್ನು ತಿನ್ನಬೇಕು ಎಂದರು.

ಇದೇ ಸಂದರ್ಭದಲ್ಲಿ ಸಿಮಂತ ಕಾರ್ಯಕ್ರಮ, ಅನ್ನಪಾಶನ, ಅಕ್ಷರಭ್ಯಾಸ, ತಾಯಿ ಹೆಸರಿನಲ್ಲಿ ಸಸಿ ನೆಡುವ, ಮಕ್ಕಳ ವೇಷಭೂಷಣ ಸೇರಿದಂತೆ ವಿವಿಧ ಕಾರ್ಯಕ್ರಮ ಜರುಗಿತು.

ಹಿರಿಯ ಮೇಲ್ವಿಚಾರಕಿ ಅಶ್ವಿನಿ ಬದ್ರಶೆಟ್ಟಿ ಸ್ವಾಗತಿಸಿದರು. ವಲಯ ಮೇಲ್ವಿಚಾರಕಿ ವಿಲಾಸಮತಿ ಎಸ್. ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಹಿರಿಯ ಮೇಲ್ವಿಚಾರಕಿ ಗೀತಾ ಚವ್ಹಾಣ ವಂದಿಸಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಸದಸ್ಯ ಸಚಿನ ಕಡಗಂಚಿ, ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಕಲಬುರಗಿ ನಗರದ ಯೋಜನೆಯ ಎಲ್ಲಾ ಮೇಲ್ವಿಚಾರಕರು ಹಾಗೂ ಶಹಾಬಾದ–ಬಿ ಮತ್ತು ಖಾನಾಪುರ–ಬಿ ವಲಯದ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

# ಹಿಂದೂ ಸಮಾಜಕ್ಕೆ ಬೆಂಕಿ ಹಚ್ಚುವ ಜಾತಿ ಜನಗಣತಿ ಕೈಬಿಡಿ: ಬಿ.ವೈ. ವಿ ಆಗ್ರಹ



ಕಲಬುರಗಿ,ಸೆ.18: ಯಾವಾಗ ತಮ್ಮ ಖುರ್ಚಿಗೆ ಸಮಸ್ಯೆಯಾಗುತ್ತದೆಯೋ ಆ ಸಮಯದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸಮಾಜದಲ್ಲಿ ಬೆಂಕಿ ಹಚ್ಚುವ ಕೆಲಸ ಮಾಡುತ್ತಾರೆ. ಈ ಹಿಂದೆ ವೀರಶೈವ ಲಿಂಗಾಯತ ಸಮಾಜಕ್ಕೆ ಬೆಂಕಿ ಹಚ್ಚುವ ಕೆಲಸವನ್ನು ಜಾತಿ ಜನಗಣತಿಯ ಮೂಲಕ ಮಾಡಿದ್ದರು. ಈಗ ಮತ್ತೆ ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆಯ ಹೆಸರಿನಲ್ಲಿ ಹಿಂದೂ ಸಮಾಜಕ್ಕೆ ಬೆಂಕಿ ಹಚ್ಚುವಂತಹ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಆಕ್ರೋಶ ವ್ಯಕ್ತಪಡಿಸಿದರು.

ನಗರದಲ್ಲಿ ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹಾಗೆ ನೋಡಿದರೆ ರಾಜ್ಯ ಸರ್ಕಾರಕ್ಕೆ ಜಾತಿ ಜನಗಣತಿ ಮಾಡುವ ಅಧಿಕಾರವಿಲ್ಲ. ಆದಾಗ್ಯೂ, ಸಾಮಾಜಿಕ, ಶೈಕ್ಷಣಿಕ ಹೆಸರಿನಲ್ಲಿ ಸಮೀಕ್ಷೆ ಕೈಗೊಳ್ಳುತ್ತಿದ್ದಾರೆ. ಆ ಮೂಲಕ ತಮ್ಮ ಅಧಿಕಾರ ಭದ್ರಪಡಿಸಿಕೊಳ್ಳುತ್ತಿದ್ದಾರೆ ಎಂದು ದೂರಿದರು.

ಈ ಹಿಂದೆಯೂ ಸಹ ಜಾತಿ ಜನಗಣತಿಯ ಮೂಲಕ ವೀರಶೈವ ಲಿಂಗಾಯತರನ್ನು ವಿಭಜಿಸುವಂತಹ ಪ್ರಯತ್ನ ಮಾಡಲಾಯಿತು. ಅದು ಯಶಸ್ವಿಯಾಗಲಿಲ್ಲ. ಈಗ ಮತ್ತೆ ಹಿಂದುಳಿದವರ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ಹೆಸರಿನಲ್ಲಿ ಜಾತಿ ಜನಗಣತಿಯನ್ನು ಮಾಡಲಾಗುತ್ತಿದೆ. ಅದರಲ್ಲಿಯೂ ಹಿಂದೂ ಸಮಾಜವನ್ನು ಒಡೆಯಲು ಕ್ರಿಶ್ಚಿಯನ್ ಮತಾಂತರದ ಉಪ ಜಾತಿಗಳನ್ನು ನಮೂದಿಸಲಾಗುತ್ತಿದೆ. ಇದರಿಂದ ಎಲ್ಲ ಜನರೂ ಸಹ ಅಸಮಾಧಾನಗೊಂಡು, ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಆದ್ದರಿಂದ ಜಾತಿ ಜನಗಣತಿಗೆ ಅಧಿಕಾರವಿಲ್ಲದೇ ಇದ್ದರೂ ಮಾಡುತ್ತಿರುವುದು ಸರಿಯಲ್ಲ. ಕೂಡಲೇ ಸಮೀಕ್ಷೆಯನ್ನು ಕೈಬಿಡಬೇಕು ಎಂದು ಅವರು ಒತ್ತಾಯಿಸಿದರು.

ರಾಜ್ಯದಲ್ಲಿ, ಅದರಲ್ಲಿಯೂ ಕಲ್ಯಾಣ ಕರ್ನಾಟಕದಲ್ಲಿ ವ್ಯಾಪಕ ಅತಿವೃಷ್ಟಿಯಾಗಿದೆ. ಇದರಿಂದ ಅಪಾರ ಪ್ರಮಾಣದಲ್ಲಿ ತೊಗರಿ, ಹತ್ತಿ, ಉದ್ದು ಮುಂತಾದ ಬೆಳೆಗಳನ್ನು ಕೈಗೊಂಡಿದ್ದಾರೆ. ಇಂತಹ ಸಂದರ್ಭದಲ್ಲಿ ಕೂಡಲೇ ರಾಜ್ಯ ಸರ್ಕಾರವು ಪರಿಹಾರವನ್ನು ನೀಡಬೇಕು ಎಂದು ಆಗ್ರಹಿಸಿದ ಬಿ.ವೈ. ವಿಜಯೇಂದ್ರ ಅವರು, ಗ್ಯಾರಂಟಿಗಳ ಯೋಜನೆಯಿಂದಾಗಿ ರಾಜ್ಯದಲ್ಲಿ

ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ತಮ್ಮ ವೈಫಲ್ಯವನ್ನು ಮುಚ್ಚಿಕೊಳ್ಳಲು ಮುಖ್ಯಮಂತ್ರಿಗಳು ಕೇಂದ್ರದ ಕಡೆಗೆ ಬೊಟ್ಟು ಮಾಡಿ ತೋರಿಸುತ್ತಾರೆ ಎಂದು ಹರಿಹಾಯ್ದರು.

ಈ ಹಿಂದೆ ತಂದೆ ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಅತಿವೃಷ್ಟಿಯಾದಾಗ ದುಪ್ಪಟ್ಟು ಪರಿಹಾರವನ್ನು ನೀಡಿದರು. ಅದೇ ಮಾದರಿಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಕೊಡಬೇಕು ಎಂದು ಅವರು ಒತ್ತಾಯಿಸಿದರು.

# ಕಲ್ಯಾಣ ಕರ್ನಾಟಕಕ್ಕೆ ಪಟೇಲರ ಕೊಡುಗೆ ಅಪಾರ : ಗುಣವಂತ ಮಾಶೆಟ್ಟೆ

ಔರಾದ(ಬಾ) :ಸೆ.18: ಪಟ್ಟಣದ ನಾಲಂದಾ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ನಾಲಂದಾ ಪ್ರೌಢ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಹೋರಾಟಗಾರರ ಭಾವಚಿತ್ರಗಳಿಗೆ ಪೂಜೆ ನೆರವೇರಿಸುವುದರೊಂದಿಗೆ ಸರಳವಾಗಿ ಆಚರಿಸಿದರು.

ಹೈದರಾಬಾದ್ ಕರ್ನಾಟಕ ರಾಜ್ಯದ ಬೀದರ್, ಗುಲ್ಬರ್ಗಾ ಮತ್ತು ರಾಯಚೂರು ಈಶಾನ್ಯ ಜಿಲ್ಲೆಗಳ ದೊಡ್ಡ ಭಾಗಗಳನ್ನು ಒಳಗೊಂಡಿತ್ತು, ಭಾರತದ ವಿಭಜನೆ ಮತ್ತು ಹೈದರಾಬಾದ್ ರಾಜ್ಯದಲ್ಲಿನ ದಂಗೆಗಳ ನಂತರ 1948 ರಲ್ಲಿ ಭಾರತವು ಹೈದರಾಬಾದ್ ಅನ್ನು ಸ್ವಾಧೀನಪಡಿಸಿಕೊಂಡದ್ದಕ್ಕೆ ಆಚರಿಸಲಾಗುತ್ತದೆಂದು, ಇದು ಕರ್ನಾಟಕ ರಾಜ್ಯದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಆಚರಿಸಲಾಗುವ ವಾರ್ಷಿಕ ಹಬ್ಬವಾಗಿತೆಂದು ಅಭಿಪ್ರಾಯ ವ್ಯಕ್ತಪಡಿಸಿದರು. ಹೈದರಾಬಾದ್ ಕರ್ನಾಟಕ ರಾಜ್ಯ ಕಾಂಗ್ರೆಸ್ ಪಕ್ಷ ಹಾಗೂ ಬಹುತೇಕ ಶಿಕ್ಷಣ ಸಂಸ್ಥೆಗಳೆಲ್ಲವೂ ಸ್ವಾತಂತ್ರ್ಯ ಹೋರಾಟಕ್ಕಾಗಿ ಜನರನ್ನು ಜಾಗೃತಗೊಳಿಸುವಂತಹ ಪ್ರಮುಖ ಪಾತ್ರವನ್ನು ವಹಿಸಿವೆ ಎಂದು ತಿಳಿಸುತ್ತಾ, ಹೈ.ಕ ಭಾಗ–ಕ್ಕೆ ಪಟೇಲರ ಸೇವೆ ಅನನ್ಯ. ಈ ಪ್ರದೇಶಗಳೆಲ್ಲಾ ಸ್ವಾತಂತ್ರ್ಯವಾಗಲು 1948 ರಲ್ಲಿ, ಹೈದರಾಬಾದ್ ರಾಜ್ಯವನ್ನು ಭಾರತದಲ್ಲಿ ಅಧಿಕೃತವಾಗಿ ವಿಲೀನಗೊಳಿಸಿದಾಗ, ಅದರ ಕೆಲವು ಭಾಗಗಳನ್ನು ಕರ್ನಾಟಕ ರಾಜ್ಯ–ಕ್ಕೆ ಸೇರಿಸಲಾಯಿತು. 2019 ರಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶವನ್ನು ಘನ ಸರ್ಕಾರವು ಅಧಿಕೃತವಾಗಿ ಕಲ್ಯಾಣ – ಕರ್ನಾಟಕವೆಂದು ಮರುನಾಮಕರಣ ಮಾಡಲಾಯಿತು ಎಂದು ಉಪನ್ಯಾಸಕ ಗುಣವಂತ ಮಾಶೆಟ್ಟೆ ದಿನಾಚರಣೆಯ ಇತಿಹಾಸವನ್ನು ಕುರಿತು ವಿವರಿಸಿದರು.

ಸಹಶಿಕ್ಷಕ ಮಲ್ಲಿಕಾರ್ಜುನ.ವ್ಹಿ. ಕೋಟೆ ಮಾತನಾಡಿ ಸರ್ದಾರ ವಲ್ಲಭಭಾಯಿ ಪಟೇಲರ ನಿರಂತರ ಹೋರಾಟದ ಫಲವಾಗಿ ನಿಜಾಮನ ದುರಾಡಳಿತದಿಂದ ನಮ್ಮ ಕಲ್ಯಾಣ ಕರ್ನಾಟಕ ಭಾಗ ವಿಮುಕ್ತಿಗೊಂಡು ಅಖಂಡ ಭಾರತದ ಒಕ್ಕೂಟಕ್ಕೆ ಸೇರಿದೆ. ನಿಜಾಮನು ತನ್ನ ಆಡಳಿತವನ್ನು ಬಲವಂತದಿಂದ ಉರುಳಿಸುವವರೆಗೂ ಭಾರತಕ್ಕೆ ಸೇರಲು ನಿರಾಕರಿಸಿದನು. ನಿಜಾಮರ ವಿರುದ್ಧದ 'ಪೊಲೀಸ್ ಕ್ರಮ'ದ ನಂತರ, ಹೈದರಾಬಾದ್ ಪ್ರಾಂತ್ಯ ಮತ್ತು ಅದರ ನಾಗರಿಕರು 1948 ರ ಸೆಪ್ಟೆಂಬರ್ 17 ರಂದು ಸ್ವತಂತ್ರವಾದದ್ದು ವಿಶೇಷವೆಂದು ಹೇಳಿದರು.

ಪ್ರಾಂಶುಪಾಲರಾದ ಡಾ. ಮನ್ಮಥ ಡೋಳೆ ಹಾಗೂ ಪ್ರೌಢ ಶಾಲೆಯ ಮುಖ್ಯಗುರು ಜಗನ್ನಾಥ. ಎಸ್.ಬಿರಾದಾರ ಉಪಸ್ಥಿತರಿದ್ದು ಧ್ವಜಾರೋಹಣ ನೆರವೇರಿಸಿದರು. ಸಹಶಿಕ್ಷಕರಾದ ದಿಲೀಪಕುಮಾರ.ಎನ್. ಮೇತ್ರೆ, ಪರಮೇಶ್ವರ.ಬಿ.ಬಿರಾದಾರ, ಸಿದ್ಧಾರ್ಥ.ಜೆ.ಕಾಂಬಳೆ, ಅಸ್ಪಾಕ್ ಮಿಯ್ಯಾ.ಎಸ್.ಬೇಗ್ ಹಾಗೂ ಸಹಶಿಕ್ಷಕಿಯರಾದ ಪ್ರೀಯಾ. ಎಮ್.ಬಿರಾದಾರ, ಜ್ಯೋತಿ.ಡಿ.ಘೂಳೆ, ಮುಂಡೆ ಜ್ಞಾನೇಶ್ವರಿ.ಎಸ್ ಮತ್ತು ಕಾಲೇಜಿನ ಸರ್ವ ಉಪನ್ಯಾಸಕ ವೃಂದದವರೂ ಸೇರಿದಂತೆ ಬೋಧ–ಕೇತರ ಸಿಬ್ಬಂಧಿ ವರ್ಗದವರಿದ್ದರು. ಮಕ್ಕಳು ಹಾಜರಿದ್ದರು.

# ಕೆಂಭಾವಿ ಪಟ್ಟಣದಲ್ಲಿ ಕಬ್ಬಡ್ಡಿ ಸ್ಪರ್ಧೆಗೆ ಚಾಲನೆ ನೀಡಿದ ಪುರಸಭೆ ಅಧ್ಯಕ್ಷ ರಹಿಮಾನ್ ಪಟೇಲ್



ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ, ಸೆ. 18 ದಸರಾ ಹಬ್ಬದ ಪ್ರಯುಕ್ತ 2025ನೇ ಸಾಲಿನ 5ನೇ ವರ್ಷದ ದಸರಾ ಉತ್ಸವವನ್ನು ಕೆಂಭಾವಿ ಪಟ್ಟಣದಲ್ಲಿ ಉತ್ಸವ ಸಮಿತಿ ಭರ್ಜರಿಯಾಗಿ ಆಯೋಜಿಸಿದೆ. ವಿವಿಧ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಹಬ್ಬವನ್ನು ಸಡಗರದಿಂದ ಆಚರಿಸಲಾಗುತ್ತಿದ '.ಸ್ಪರ್ಧೆಗಳ ವಿವರ ಹೀಗಿವೆ:ಕಬಡ್ಡಿ ಸ್ಪರ್ಧೆ ಯುವಕರಿಗಾಗಿ ದಿನಾಂಕ: 18–09–2025 (ಗುರುವಾರ) ಸ್ಥಳ: ಪುರಸಭೆ ಆವರಣ, ಕೆಂಭಾವಿ ಪ್ರಥಮ ಬಹುಮಾನ: 10,000 ದ್ವಿತೀಯ ಬಹುಮಾನ:5,000 ಈ ಕಬಡ್ಡಿ ಪಂದ್ಯಾವಳಿಗೆ ಪುರಸಭೆ ಅಧ್ಯಕ್ಷ ರಹೀಮಾನ ಪಟೇಲ್ ಯಲಗೋಡ ಅವರು ಚಾಲನೆ ನೀಡಿದರು. ಸಮಿತಿಯ ಅಧ್ಯಕ್ಷ ಮಹಿಪಾಲರೆಡ್ಡಿ ಡಿಗ್ಗಾವಿ, ಗೌರವ ಅಧ್ಯಕ್ಷ ಮುದಿಗೌಡ ಮಾಲಿ ಪಾಟೀಲ್, ಕಾಂಗ್ರೆಸ್ ಮುಖಂಡ ಆದಿತ್ಯ ಪಾಟೀಲ, ಡಿಸಿ ಪಾಟೀಲ, ಪವನ ಕುಲಕರ್ಣಿ, ಗುಂಡಭಟ್ ಜೋಷಿ, ರಂಗಪ್ಪವಡ್ಡರ, ಸೂಗೂರಯ್ಯ ಇಂಡಿ, ಪುರಸಭೆ ಸದಸ್ಯರು ಮತ್ತು ಕ್ರೀಡಾಪಟುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಚೀಲ ಎತ್ತುವ ಸ್ಪರ್ಧೆ ಯುವಕರಿಗೆ (ಪುರಸಭೆ ವ್ಯಾಪ್ತಿಗೆ ಮಾತ್ರ) ದಿನಾಂಕ: 19–09–2025 (ಶುಕ್ರವಾರ) ಪ್ರಥಮ ಬಹುಮಾನ: ಬೆಳ್ಳಿ ಖಡ್ಗ ದ್ವಿತೀಯ ಬಹುಮಾನ: 2,500 ಸ್ಥಳ: ಪುರಸಭೆ ಆವರಣ, ಬೆಳಿಗ್ಗೆ 10 ಗಂಟೆಗೆ ರಂಗೋಲಿ ಸ್ಪರ್ಧೆ ಮಹಿಳೆಯರಿಗೆ ವಿಶೇಷ ದಿನಾಂಕ: 20–09–2025

(ಶನಿವಾರ) ಸ್ಥಳ: ಶ್ರೀ ಮಹಾ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪ ಪ್ರಥಮ ಬಹುಮಾನ: ಹೋಲಿಗ ಯಂತ್ರ ದ್ವಿತೀಯ ಬಹುಮಾನ: ಮಿಕ್ಸರ್ ಗ್ರ್ಯಾಂಡರ್

ತೃತೀಯ ಬಹುಮಾನ: ಕುಕ್ಕರ್

ಕೆಂಭಾವಿ ಪಟ್ಟಣದ ಸಾರ್ವಜನಿಕರು, ಶಿಕ್ಷಕರು ಹಾಗೂ ಕ್ರೀಡಾಪಟುಗಳಿಗೆ ದಸರಾ ಹಬ್ಬದ ಹಾರ್ದಿಕ ಶುಭಾಶಯಗಳನ್ನು ದಸರಾ ಉತ್ಸವ ಸಮಿತಿಯ ಗೌರವ ಅಧ್ಯಕ್ಷರು, ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಎಲ್ಲಾ ಸದಸ್ಯರು ತಿಳಿಸಿದ್ದಾರೆ.


# ಕಲೆ ಮತ್ತು ವಾಸ್ತುಶಿಲ್ಪಕ್ಕೆ ವಿಶ್ವಕರ್ಮರ ಕೊಡುಗೆ ಅಪಾರ: ಅಮ್ಜದ್ ಪಟೇಲ್

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಸೆ.18: ಇಡಿ ವಿಶ್ವವನ್ನೆ ಸೃಷ್ಟಿ ಮಾಡಿದ್ದು ಈಶ್ವರ ಆದರೆ ದೇವಲೊಕದಲ್ಲಿ ಸ್ವರ್ಗವನ್ನು ಸೃಷ್ಟಿ ಮಾಡಿದ್ದು ವಿಶ್ವಕರ್ಮ. ಹಾಗಾಗಿ ಪುರಾಣ ಕಾಲದಿಂದಲು ಕಲೆ ಮತ್ತು ವಾಸ್ತುಶಿಲ್ಪಕ್ಕೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ ಎಂದು ಕೊಪ್ಪಳ ನಗರ ಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹೇಳಿದರು.

ಅವರು ಗುರುವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಿಂದೂ ಪುರಾಣಗಳಲ್ಲಿ ಭಗವಾನ್ ವಿಶ್ವಕರ್ಮನನ್ನು ಸ್ವರ್ಗ ಮತ್ತು ಭೂಮಿಯನ್ನು ಸೃಷ್ಟಿಸಿದ ದೈವಿಕ ವಾಸ್ತುಶಿಲ್ಪಿ ಎಂದು ಪೂಜಿಸಲಾಗುತ್ತದೆ. ದೇವರುಗಳ ಅರಮನೆಗಳು, ವಿವಿಧ ದೈವಿಕ ಆಯುಧಗಳು ಮತ್ತು ಪ್ರಾಚೀನ ಗ್ರಂಥಗಳಲ್ಲಿ ಉಲ್ಲೇಖಿಸಲಾದ ಅನೇಕ ಮಹತ್ವದ ವಾಸ್ತುಶಿಲ್ಪದ ಅದ್ಭುತಗಳನ್ನು ವಿನ್ಯಾಸಗೊಳಿಸಿದ ಮತ್ತು ನಿರ್ಮಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಅವರ ದ್ವಾರಕಾ ಮತ್ತು ಹಸ್ತಿನಾಪುರದ ಪೌರಾಣಿಕ ನಗರಗಳು ಹಾಗೂ ದೇವರುಗಳ ಪೌರಾಣಿಕ ಹಾರುವ ರಥಗಳು ವಿಶ್ವಕರ್ಮರ ಸೃಷ್ಟಿಗಳಾಗಿವೆ ಎಂದು ಹೇಳಿದರು.



ಇಡೀ ಜಗತ್ತಿನಲ್ಲಿ ಎಲ್ಲೆ ಹೋದರು ನಮ್ಮ ಕಣ್ಣಿಗೆ ಕಾಣುವ ವಾಸ್ತುಶಿಲ್ಪ ಕಲೆ ಮತ್ತು ಕೆತ್ತನೆ ಕಾರ್ಯಗಳ ಹಿಂದೆ ವಿಶ್ವಕರ್ಮರನ್ನು ಕಾಣಬಹುದು. ಒಂದು ಕಲ್ಲನ್ನು ಮೃದು ಮಾಡಿ ಅದಕ್ಕೆ ಒಂದು ರೂಪ ನೀಡುವವರು ವಿಶ್ವಕರ್ಮರು ಅಂತಹ ಅನೇಕ ಕೆತ್ತನೆಗಳನ್ನು ನಾವು ಭಾರತದಾದ್ಯಂತ ಕಾಣಬಹುದಾಗಿದೆ. ಅದೇ ರೀತಿಯಲ್ಲಿ ಸಮಾಜದಲ್ಲಿನ ಪ್ರತಿಯೊಬ್ಬರ ಮನಸ್ಸನ್ನು ಕೆತ್ತಿ, ಮೃದು ಮಾಡಿ ಪ್ರೀತಿ ವಿಶ್ವಾಸಗಳಿಸುವ ಕಾರ್ಯ ಮಾಡುವ ಸಮಾಜ ಅಂದರೆ ಅದು ನಮ್ಮ ವಿಶ್ವಕರ್ಮ ಸಮಾಜ ಎಂದರೆ ತಪ್ಪಾಗಲಾರದು ಎಂದು ಹೇಳಿದರು.

ಕೊಪ್ಪಳದ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ಅವರು ಮಾತನಾಡಿ ನಾವು ಇಲ್ಲಿ ಕೂತು ಮಾತನಾಡುತ್ತಿದ್ದೇವೆ ಎಂದರೆ ವಿಶ್ವಕರ್ಮರ ಪಾತ್ರ ಬಹಳಷ್ಟು ಅಗಾಧ ವಾಗಿದೆ. ಇ ಜಗತ್ತು ಸುಂದರವಾಗಿ ಕಾಣಲು, ನಾವು ಯಾವುದೇ ಕಟ್ಟಡದ ವಾಸ್ತುಶಿಲ್ಪ ವನ್ನು ನೋಡಿದಾಗ ಅದು ನಮ್ಮ ಕಣ್ಮನ ಸೆಳೆಯುತ್ತದೆ. ಅದಕ್ಕೆ ವಿಶ್ವಕರ್ಮರ ಕೊಡುಗೆ ಸಾಧನೆ ಯನ್ನು ನಾವೆಲ್ಲರೂ ಮನಗಾಣಬೇಕು ಎಂದರು.

ಕುಷ್ಟಗಿ ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಟರಾಜ ಸೋನಾರ್ ಅವರು ಶ್ರೀ ವಿಶ್ವಕರ್ಮರ ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡಿ, ದೇವತೆಗಳಲ್ಲೆ ಪೂಜ್ಯನಾದ ಬ್ರಹ್ಮನ ಮರಿ ಮಗ ಬ್ರಹ್ಮಾತ್ಮನಾದ ವಾಸ್ತು ದೇವನ ಮಗನೆ ವಿಶ್ವಕರ್ಮ ಎಂದು ಅನೇಕ ಪೂರಾಣ, ಶಾಸ್ತ್ರಗಳು ಹೇಳುತ್ತವೆ. ಅಂತಹ ವಿಶ್ವಕರ್ಮನ ವಂಶಕ್ಕೆ ಸೇರಿದವರು ನಾವುಗಳು ಪುಣ್ಯವಂತರು.

ಕೊಪ್ಪಳದ ಶ್ರೀ ಸಿರಸಪ್ಪಯ್ಯನ ಮಠದ ಸಿರಸಪ್ಪಯ್ಯ ಸ್ವಾಮಿಗಳು ಆರ್ಶಿವಚನವ ನೀಡಿದರು.ಈ ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ರೆಡ್ಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ವಿಶ್ವಕರ್ಮ ಸಮಾಜದ ಮುಖಂಡರಾದ ನಾಗೇಶ ಕುಮಾರ್ ಕಂಸಾಳೆ, ದೇವೇಂದ್ರಪ್ಪ ಬಡಿಗೇರ, ಕಾಳಮ್ಮ ಪತ್ತಾರ ಸೇರಿದಂತೆ ಹಲವಾರು ಮುಖಂಡರು ಪಾಲ್ಗೊಂಡಿದ್ದರು.

# ಕಾರಾಗೃಹದ ಬಂದಿಗಳಿಗೆ ವಿಶೇಷ ಆರೋಗ್ಯ ತಪಾಸಣಾ ಶಿಬಿರ



ಕಲಬುರಗಿ,ಸೆ.18–ಕಲಬುರಗಿ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೇಷನ್ ಸೊಸೈಟಿ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟು ಘಟಕ,, ಸ್ವಾಮಿ ವಿವೇಕಾನಂದ ಯುತ್ ಮೂಮೆಂಟ್ ಸಂಸ್ಥೆ ಹಾಗೂ ಕಲಬುರಗಿ ಕೇಂದ್ರ ಕಾರಾಗೃಹ ಇವುಗಳ ಸಹಯೋಗದೊಂದಿಗೆ ಕಾರಾಗೃಹದ ಬಂದಿಗಳಿಗೆ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಗುರುವಾರ ವಿಶೇಷ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು. ಈ ವಿಶೇಷ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ, ಕಲಬುರಗಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ॥ ಚಂದ್ರಶೇಖರ್ ನರಬೋಳ ಅವರು, ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಬಂದಿಗಳ ಸಂಖ್ಯೆ ಹೆಚ್ಚಿನ ಪ್ರಮಾಣ ಇರುವುದರಿಂದ ಅವರಿಗೆ ಕ್ಷಯರೋಗ ಲಕ್ಷಣ ಕುರಿತು ತಿಳಿ ಹೇಳಿ ಸೂಕ್ತ ತಪಾಸಣೆ ಮಾಡಿಸಿಕೊಂಡು ಚಿಕಿತ್ಸೆ ಪಡೆದುಕೊಳ್ಳಬಹುದಾಗಿದೆ. ಏಕೆಂದರೆ ಮುಂಚಿತವಾಗಿ ತಪಾಸಣೆ ಮಾಡಿಸಿಕೊಳ್ಳುವುದರಿಂದ ಹಲವು ರೋಗಗಳನ್ನು ತಡೆಗಟ್ಟಬಹುದು. ಎಲ್ಲಾ ಕಾರಾಗೃಹದ ಬಂದಿಗಳು ಈ ಆರೋಗ್ಯ ತಪಾಸಣೆ ಕಾರ್ಯಕ್ರಮದ ಲಾಭ ಪಡೆದುಕೊಳ್ಳಬೇಕೆಂದು ಹೇಳಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಈ ಸಂಸ್ಥೆಯ ಮುಖ್ಯಸ್ಥರಾದ ಡಾ. ಅನಿತಾ ಆರ್. ಅವರು, ಪ್ರತಿಯೊಬ್ಬರು ಶಾರೀರಕ, ಮಾನಸಿಕ ಹಾಗೂ ದೈಹಿಕವಾಗಿ ಸದೃಡರಾಗಿ ಇರಬೇಕಾದರೆ ಉತ್ತಮ ಆರೋಗ್ಯವನ್ನು ಹೊಂದಬೇಕು. ಎಲ್ಲರೂ ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ವಿವಿಧ ಕಾಯಿಲೆಗಳು ಬರದ ರೀತಿಯಲ್ಲಿ ಮುಂಜಾಗ್ರತೆ ವಹಿಸಬೇಕು. ಈ ಸಂಸ್ಥೆಯಿಂದ ಪ್ರತಿ ಮಾಹೆ ಬಂದಿಗಳ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ಶಿಬಿರಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು. ಈ ಶಿಬಿರದಲ್ಲಿ ಮೊದಲನೇ ದಿನ 80 ಕೈದಿಗಳಿಗೆ ಆರೋಗ್ಯ ತಪಾಸಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ॥ ರವಿಂದ್ರ ಬನ್ನೇರಿ, ಜಿಲ್ಲಾ ಮೇಲ್ವಿಚಾರಕ ಮಲ್ಲಿಕಾರ್ಜುನ ಬಿರಾದಾರ, ಎಂ.ಇ.ಓ. ರಂಗನಾಥ್, ಜಿಲ್ಲಾ ಸಂಯೋಜಕ ಸಂತೋಷ, ಪ್ರಯೋಗಾಲಯ ತಜ್ಞ ಅಲ್ಲಾವುದ್ದೀನ್, ಸಹಾಯಕ ಆಡಳಿತಾಧಿಕಾರಿ ಭೀಮಾಶಂಕರ್ ಡಾಂಗೆ ಹಾಗೂ ಕಾರಾಗೃಹದ ಅಧಿಕಾರಿ/ಸಿಬ್ಬಂದಿಗಳು ಭಾಗವಹಿಸಿದ್ದರು.

### ಶಾಸಕರ ಅಭಿವೃದ್ಧಿ ಸಹಿಸದೆ ಮಾನಸಿಕ ಬೌದ್ಧಿಕ ದಿವಳಿಯಾದ ವಿರೋಧಿ ಬಣ.

# ನಮ್ಮ ಭಾಗದಲ್ಲಿ ನಾನು, ಅವನು ಎನ್ನುವುದು ಸಣ್ಣ ವಿಷಯ: ಶಾಸಕರ ಪರ ಜೆಡಿಎಸ್ ಸಮರ್ಥನೆ.



**ಮಲ್ಲಮ್ಮ ನುಡಿ ವಾರ್ತೆ**

ಗುರುಮಠಕಲ್: ಸೆ.18 ಪಟ್ಟಣದ ಶಾಸಕರ ಜನ ಸಂಪರ್ಕ ಕೇಂದ್ರದಲ್ಲಿ ಪತ್ರಿಕಾ ಗೋಷ್ಠಿ ನಡೆಸಿ ಮಾತನಾಡಿದ ಜೆಡಿಎಸ್ ಪಕ್ಷದ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ನಾಗರತ್ನ ಅನಪೂರ್ ರವರು ಇದೇ ತಿಂಗಳ ಸೆಪ್ಟೆಂಬರ್ 7 ರಂದು ಪ್ರಜಾಸೌದ ಅಡಿಗಲ್ಲು ಸಮಾರಂಭದಲ್ಲಿ ಶಿಷ್ಟಾಚಾರ ಉಲ್ಲಂಘನೆ, ಅಗೌರವ ಆಗಿದೆ ಎಂದು ಕಾಂಗ್ರೆಸ್ ಪಕ್ಷದ ವತಿಯಿಂದ ಪ್ರತಿಭಟನೆ ಮಾಡಿದ್ದು, ಇದು ಕೇವಲ ವೈಯಕ್ತಿಕ ವಣ ಪ್ರತಿಷ್ಠೆಗಾಗಿ ರಾಜ್ಯ ನಾಯಕರ ಮೆಚ್ಚುಗೆಗಾಗಿ ಮಾಡುತ್ತಿರುವುದು ಸರಿಯಲ್ಲ ಕೇವಲ ಒಂದೇ ಪದ ನಾನಾ, ಅವನಾ ಎನ್ನುವುದು ನಮ್ಮ ಭಾಗದಲ್ಲಿ ಸರ್ವೆ ಸಾಮಾನ್ಯ ಎಂದು ಸಮರ್ಥಿಸಿಕೊಂಡರು. ಜೆಡಿಎಸ್ ಮುಖಂಡರಾದ ಭೀಮಶಪ್ಪ ಗುಡಿಸೆ ಮಾತನಾಡಿ, ಶಾಸಕರನ್ನು ಉದ್ದೇಶಿಸಿ ಪ್ರತಿಭಟನೆಯಲ್ಲಿ ತುಂಬಾ ಹಗುರವಾಗಿ ಮಾತನಾಡಿರುವದು ಸರಿಯಲ್ಲ, ಇನ್ನೂ ಅನುದಾನ ಯಾರು ಸಹ ಮನೆಯಿಂದ ತಂದು ಮಾಡುವದಿಲ್ಲ, ನೀವು ಸಹ ಅಧಿಕಾರದಲ್ಲಿದ್ದಾಗ ನಿಮ್ಮ ಮನೆಯಿಂದ ದುಡ್ಡು ತಂದಿರುವದಿಲ್ಲ, ಮಾಡುವದಾದರೆ ಅಭಿವೃದ್ಧಿಗಾಗಿ ಹೊರಟ ಮಾಡಿ ಎಂದು ಕಾಂಗ್ರೆಸ್ ನಾಯಕರಿಗೆ ಸವಾಲ್ ಹಾಕಿದರು.

ತದನಂತರ ಮಾತನಾಡಿದ ಜಿಲ್ಲಾಧ್ಯಕ್ಷ ಸುಭಾಷ್ ಕಟಕಟಿ, ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರಾದ ಭೀಮಣ್ಣ ಸಾಲಿ, ಬಸಿರೆಡ್ಡಿ ಅನಪುರ, ಸಾಯಿಬಣ್ಣ ಬೋರಬಂಡ ವಿವೇಚನೆಯಿಲ್ಲದೆ ಸುಳ್ಳು ಆರೋಪ ಮಾಡುವದನ್ನು ಬಿಡಬೇಕು. ನಮ್ಮ ನಾಯಕರಾದ ಶರಣಗೌಡ ಕಂದಕೂರು ಕುರಿತಾಗಿ ಬಸಿರೆಡ್ಡಿ ಅನಪೂರ್ ಅವರು ಸುಖ ಸುಮ್ಮನೆ ಆರೋಪಗಳನ್ನು ಮಾಡುವ ಮೊದಲು ತಾವು ನಕಲಿ ದಾಖಲೆ ನೀಡಿ ಬೋರವೆಲ್ ಕೊರೆಸಿರುವದಾಗಿ ಮಾಡಿರುವ ಹಗರಣ ಕುರಿತಾಗಿ ಪ್ರಸ್ತವನೆ ಮಾಡಿದರು. ಪ್ರಜಾಸೌಧ ಕಾರ್ಯಕ್ರಮದಲ್ಲಿ ಗೌರವ ನೀಡಿದರು ಸಹ ಅದನ್ನು ತಪ್ಪಾಗಿ ಅರ್ಥೈಸಿ ಬೇಕಂತಲೇ ಶಾಸಕರ ಜನಪ್ರೀಯತೆ ಸಹಿಸದೆ ಸೋಲಾರ್ ಹೈಮಾಸ್ಟ್ ಸೇರಿದಂತೆ ವಿವಿಧ ಆರೋಪ ಮಾಡುತ್ತಿರುವದು ಸರಿಯಲ್ಲ, ಆಧಾರ್ ಕಾರ್ಡ್ ನಲ್ಲಿ ವಿಳಾಸ ಬದಲಿಸಿದರೆ, ಹುಟ್ಟೂರು ಬದಲಾಗಲ್ಲ ಎಂದು ಮುಖಂಡರು ವಾಗ್ದಾಳಿ ಮಾಡಿದರು. ಪತ್ರಿಕಾ ಗೋಷ್ಠಿಯಲ್ಲಿ ಪುರಸಭೆ ಅಧ್ಯಕ್ಷೆ ಜಯಶ್ರೀ ಪಾಟೀಲ್, ಪ್ರಕಾಶ ನೀರೆಟಿ, ಈಶ್ವರ ರಾಠೋಡ, ಕಿಷ್ಟರೆಡ್ಡಿ ಪೊಲೀಸ್ ಪಾಟೀಲ, ನರಸಪ್ಪ ಕವಡೆ, ಕೃಷ್ಣ ರೆಡ್ಡಿ, ಮಲ್ಲನಗೌಡ ಕೌಳೂರ, ನರ್ಮದಾ, ಲಾಲಪ್ಪ ತಲಾರಿ ಇತರರು ಇದ್ದರು.

> ಶಾಸಕರ ಬೆಂಬಲಕ್ಕೆ ಸದಾ ಸಿದ್ಧ ಯಾವುದೇ ಕಾರಣಕ್ಕೂ ವಿರೋಧಿ ಬಣ ಪ್ರತಿಭಟನೆ ನೆಪದಲ್ಲಿ ಮನ ಬಂದಂತೆ ಮಾತಾನಾಡಿದರೆ ನಡೆಯುವದಿಲ್ಲ ನಾವು ಉತ್ತರ ಕೊಡಬೇಕಾಗುತ್ತದೆ
> – ಬಸಣ್ಣ ದೇವರಳ್ಳಿ.

> ವೈಯಕ್ತಿಕ ಪ್ರತಿಷ್ಠೆ ಮತ್ತು ನಾಯಕರ ಮೆಚ್ಚುಗೆಗೆ ಮಾಡಿದ ಪ್ರತಿಭಟನೆ, ತೊಂದರೆಯಾದಾಗ ಮಾತ್ರ ಕುಲ ನೆನೆಪಪಾಗುವದು ಬೇರೆ ಸಮಯದಲ್ಲಿ ಯಾಕೆ ಬರಲ್ಲ
> – ನಾಗರತ್ನ ಅನಪೂರ್.

> ಕಂದಕೂರು ಘನತೆ ಗೌರವ ಸಹಿಸದೆ ಮಾನಸಿಕ ಬೌದ್ಧಿಕ ದಿವಳಿಯಾಗಿದೆ ಕಾಂಗ್ರೆಸ್
> – ತಾಯಪ್ಪ ಬದ್ದೆಪಲ್ಲಿ.



ಗುರುಮಠಕಲ್ ಹತ್ತಿರದ ಎಂ.ಟಿ.ಪಲ್ಲಿ ಗ್ರಾಮದಲ್ಲಿ ಬುಧವಾರ ರಾತ್ರಿ ಭಿತ್ತಿ ಪತ್ರ ಹಂಚಿ ಜಾಗೃತಿ ಮೂಡಿಸಿದ ಎ.ಆರ್.ಎಫ್.ಒ. ಸಂಗಮೇಶ ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ.

## ಎಲ್ಲ ದಾನಕ್ಕಿಂತ ರಕ್ತದಾನ ಶ್ರೇಷ್ಠ–ಮಹೇಶರಡ್ಡಿ



**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ: ಎಲ್ಲ ದಾನಕ್ಕಿಂತ ಶ್ರೇಷ್ಠವಾದದ್ದು ರಕ್ತದಾನವಾಗಿದೆ ಎಂದು ಬಿಜೆಪಿ ಯುವ ನಾಯಕ ಮಹೇಶರಡ್ಡಿ ಮುದ್ನಾಳ್ ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮ ದಿನ ಹಾಗೂ ಮಾಜಿ ಶಾಸಕ ದಿ.ವೆಂಕಟರಡ್ಡಿ ಮುದ್ನಾಳ್ ಅವರ ಪ್ರಥಮ ಪುಣ್ಯಸ್ಮರಣೆ ನಿಮಿತ್ತ ಆಯೋಜಿಸಿದ್ದ ರಕ್ತದಾನ ಶಿಬಿರದಲ್ಲಿ ಮಾತನಾಡಿ, ರಕ್ತದಾನ ಮಾಡುವುದರಿಂದ ಮನುಷ್ಯನ ದೈಹಿಕ ಶಕ್ತಿ ಹೆಚ್ಚಾಗುತ್ತದೆ. ಅಲ್ಲದೆ, ಹೃದಯ ಸಂಬಂಧಿ ಖಾಯಿಲೆಗಳು ಬರುವುದಿಲ್ಲ ಎಂದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವಿಶ್ವ ನಾಯಕರಾಗಿದ್ದಾರೆ. ಜಾಕತಿಕ ಮಟ್ಟದಲ್ಲಿ ಭಾರತ ಇಂದು ಬಹುದೊಡ್ಡ ಶಕ್ತಿಯಾಗಿ ಬೆಳೆಯುತ್ತಿದೆ. ತಂದೆಯವರ ಪ್ರಥಮ ಪುಣ್ಯಸ್ಮರಣೆ ನಿಮಿತ್ತ ಸುಮಾರು 90 ಕ್ಕೂ ಹೆಚ್ಚು ಯುವಕರು ಸ್ವಯಂ ಪ್ರೇರಣೆಯಿಂದ ರಕ್ತ ನೀಡಿದ್ದು ಶ್ಲಾಘನೀಯ ಸಂಗತಿ ಎಂದು ಬಣ್ಣಿಸಿದರು. ಈ ಸಂರ್ಭದಲ್ಲಿ ನಗರಸಭೆ ಮಾಜಿ ಅಧ್ಯಕ್ಷ ವಿಲಾಸ ಪಾಟೀಲ್, ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ್ ಕಾಡಂನೊರ, ಶಂಕರ ಸಾಹ ಕರಣಿಗಿ, ಮಲ್ಲು ಸ್ವಾಮಿ ಗುಡಿಮಠ, ಹಣಮರಡ್ಡಿ, ದೇವುಗೌಡ ಪಾಟೀಲ್, ಬಸ್ಸುಗೌಡ ನಾಯ್ಕಲ್, ಸುಗುಚಾಮ, ಗೋವಿಂದಪ್ಪ ಖಾನಾಪುರ, ಬಿಜೆಪಿ ಜಿಲ್ಲಾ ಕರ್ಯಾಲಯ ಕರ್ಯರ್ತಿ ಚನ್ನವೀರಯ್ಯಸ್ವಾಮಿ, ವಿವೇಕಾನಂದರ ಸುಭಾಷ ದೇರ್ದುಗ, ಮಲ್ಲಿನಾಥ ಸಾಹು ಆಂದೋಲ, ಸಾಬು ಬಗಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು

## ಯುವನಿಧಿ ಯೋಜನೆಯ ಫಲಾನುಭವಿಗಳು ಕೌಶಲ್ಯಕರ್ ಪೋರ್ಟಲ್‌ನಲ್ಲಿ ಕಡ್ಡಾಯ ನೋಂದಾಯಿಸಬೇಕು: ಪಾಮಯ್ಯ ಮುರಾರಿ ಸಲಹೆ



**ಮಲ್ಲಮ್ಮ ನುಡಿ ವಾರ್ತೆ**

ರಾಯಚೂರು ಸೆಪ್ಟೆಂಬರ್ 15: ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಯಲ್ಲೊಂದಾದ ಯುವನಿಧಿ ಯೋಜನೆಯ ಫಲಾನುಭವಿಗಳು ಕೌಶಲ್ಯ ಮತ್ತು ಉದ್ಯಮಶೀಲತೆ ತರಬೇತಿ ಪಡೆಯಲು ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳುವ ಜಾಗೃತಿ ಕಾರ್ಯಗಾರವು ಸೆಪ್ಟೆಂಬರ್ 15ರಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು.

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿ, ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯಡಿ ಹೆಚ್ಚು ಹೆಚ್ಚು ವಿದ್ಯಾರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಮತ್ತು ಯುವನಿಧಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ವಿನ್ಯಾಸಗೊಳಿಸಲಾದ ಮಾರುಕಟ್ಟೆ ಕೌಶಲ್ಯಗಳ ಸಜ್ಜುಗೊಳಿಸಲು ಉಚಿತ ಕೋರ್ಸ್ ಮತ್ತು ತರಬೇತಿ ಕಾರ್ಯಕ್ರಮಗಳನ್ನು ಪಡೆಯಲು ಕೌಶಲ್ಯಕರ್ ಪೋರ್ಟಲ್‌ನಲ್ಲಿ ಕಡ್ಡಾಯ ನೋಂದಾಯಿಸಬೇಕು. ಒಂದು ವೇಳೆ ತರಬೇತಿ ಪಡೆಯಲು ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳದೆ ಇದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನಿರುದ್ಯೋಗ ಭತ್ಯೆಯನ್ನು ಸ್ಥಗಿತಗೊಳಿಸಲಾಗುವುದು ಎಂದು ಅವರು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಶಿವಾನಂದ ಕೆಳಗಿನಮನಿ ಅವರು ಮಾತನಾಡಿ, ತಾವು ವಿದ್ಯಾರ್ಥಿಯಾಗಿದ್ದಾಗ ಪದವಿ ಮುಗಿಸಿದ ನಂತರ ತಮಗೆ ಕೈಯಲ್ಲಿ ಬಿಡಿಗಾಸು ಇರುತ್ತಿರಲಿಲ್ಲ ಹಾಗೂ ಕನಿಷ್ಠ ಪ್ರಮಾಣದ ಅನುಕೂಲತೆಗಳು ಇರಲಿಲ್ಲ. ಈಗಿನ ಬದಲಾದ ಪರಿಸ್ಥಿತಿಯಲ್ಲಿ ಸರ್ಕಾರವು ಜಾರಿ ಮಾಡಿದ ಯುವನಿಧಿಯಂತಹ ಯೋಜನೆಗಳ ಸದುಪಯೋಗ ಪಡೆಯಬೇಕು. ಸರ್ಕಾರದ ವಿವಿಧ ಯೋಜನೆಗಳ ಅನುಕೂಲತೆಯು ಸಮಾಜದ ಕಟ್ಟಕಡೆಯ ಪ್ರತಿ ಫಲಾನುಭವಿಗೂ ಸಿಗುವಂತೆ ಮಾಡಲು ಇಂತಹ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿದ ಅಧಿಕಾರಿಗಳ ಶ್ರಮ ಪ್ರಶಂಸಾರ್ಹವಾಗಿದೆ. ಅರ್ಹ ಎಲ್ಲಾ ಅಭ್ಯರ್ಥಿಗಳು ಈ ಯುವನಿಧಿ ಯೋಜನೆಯ ಲಾಭ ಪಡೆದುಕೊಳ್ಳಬೇಕು ಎಂದು ಸಲಹೆ ಮಾಡಿದರು. ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಿ.ಯು.ಹುಡೇದ್ ಅವರು ಪ್ರಾಸ್ತಾವಿಕ ಮಾತನಾಡಿ, ರಾಯಚೂರು ಜಿಲ್ಲೆಯು ಯುವನಿಧಿ ನೋಂದಣಿಯಲ್ಲಿ ರಾಜ್ಯದಲ್ಲಿಯೇ 3ನೇ ಸ್ಥಾನದಲ್ಲಿದೆ. ನೋಂದಣೆ ಮಾಡಿಕೊಂಡ ಫಲಾನುಭವಿಗಳು ಹಾಗೂ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಫಲಾನುಭವಿಗಳು ಯುವನಿಧಿ ಪ್ಲಸ್ ಯೋಜನೆ ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡು ಸರ್ಕಾರದ ವಿವಿಧ ಇಲಾಖೆಗಳಾದ ಸರ್ಕಾರಿ ಉದ್ಯೋಗ ಮತ್ತು ಕೈಗಾರಿಕಾ ತರಬೇತಿ ಇಲಾಖೆ, ಜಿಟಿಟಿಸಿ, ಕ್ಯಾಷ್ಯುಟೇಕ್ ಮತ್ತು ಸಿಡಾಕ್ ಇನ್ನಿತರ ಸರ್ಕಾರಿ ಸಂಸ್ಥೆಗಳಿಂದ ಉಚಿತವಾಗಿ ವಿವಧ ತರಬೇತಿಗಳನ್ನು ಪಡೆಯಬಹುದಾಗಿದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಯುವನಿಧಿ ಪ್ಲಸ್ ಕೌಶಲ್ಯಕರ್ ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು. ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಅವರಿಂದ ಸ್ಕಿಲ್ ಇಂಡಿಯಾ ಸ್ಪರ್ಧೆ 2025ಗೆ ವಿಶೇಷ ಕೌಶಲ್ಯಗಳನ್ನು ಹೊಂದಿರುವ ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಸೆ.30 ಕೊನೆಯದಿನವಾಗಿದ್ದು, ಈ ಸ್ಪರ್ಧೆಯಲ್ಲಿ ಭಾಗವಹಿಸಲು ಸಲಹೆ ಮಾಡಿದರು. ಸಮಾರಂಭದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಹನುಮಂತ ಜಾಲಿಬೆಂಚಿ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಡಾ.ಕೆ.ವೆಂಕಟೇಶ್, ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಉದ್ಯೋಗ ಅಧಿಕಾರಿ ನವೀನ್ ಕುಮಾರ ಸಂಗೇಪಾಗ್ ಮತ್ತು ವಿಶ್ವವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಸಿಬ್ಬಂದಿ ಹಾಜರಿದ್ದರು. ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ್ ಎಸ್.ಪಾಟೀಲ್ ವಂದಿಸಿದರು.

# ಒಣಪ್ರತಿಷ್ಠೆ ಮತ್ತು ಸ್ವಾರ್ಥಕ್ಕಾಗಿ ಕೆಲವರು ಮಾಡಿಸಿದ್ದಾರೆ ಜಿಲ್ಲಾಧ್ಯಕ್ಷರು, ವಿವಿಧ ಸಮಾಜದ ಮುಖಂಡರ ಗಂಭೀರ ಆರೋಪ.

### ಶಾಸಕ ಕಂದುಕೂರು ವಿರುದ್ಧ ಕಾಂಗ್ರೆಸ್ ಪ್ರತಿಭಟನೆಗೆ ಜೆಡಿಎಸ್ ಗರಂ.



**ಮಲ್ಲಮ್ಮ ನುಡಿ ವಾರ್ತೆ**

ಗುರುಮಠಕಲ್ : ಶಾಸಕ ಶರಣಗೌಡ ಕಂದಕೂರು ಅವರ ವಿರುದ್ಧ ಇತ್ತೀಚಿಗೆ ಕಾಂಗ್ರೆಸ್ ಪಕ್ಷದವರು ಮಾಡಿದ ಪ್ರತಿಭಟನೆ ಕೆಲವರ ಸ್ವಾರ್ಥಕ್ಕಾಗಿ ಇತ್ತು ವಿನಾಃ ಕ್ಷೇತ್ರದ ಅಭಿವೃದ್ಧಿಗಾಗಿ ಅಲ್ಲ ಎಂದು ಜೆಡಿಎಸ್ ಪಕ್ಷದ ಅನೇಕರು ಟೀಕಿಸಿದ್ದಾರೆ.

ಇಲ್ಲಿನ ಶಾಸಕರ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಷಚಂದ್ರ ಕಟಕಟಿ, ಜಿಲ್ಲಾ ಘಟಕದ ಮಹಿಳಾ ಘಟಕದ ಅಧ್ಯಕ್ಷೆ ನಾಗರತ್ನ ಅನಪುರ, ಹಿರಿಯ ಮುಖಂಡರಾದ ಭೀಮಶಪ್ಪ ಗೂಡಸೆ, ಬಸಣ್ಣಾ ದೇವರಹಳ್ಳಿ, ತಾಯಪ್ಪ ಬದ್ದೆಪಲ್ಲಿ ಅವರು, ಶಾಸಕರು ಮಾಡುತ್ತಿರುವ ಕ್ಷೇತ್ರದ ಅಭಿವೃದ್ಧಿ ಕೆಲಸಗಳು ಮತ್ತು ಅವರ ಜನಪ್ರೀಯತೇ ಸಹಿಸಲು ಆಗದೇ ಹತಾಶರಾಗಿ ಪ್ರತಿಭಟನೆ ಮಾಡಿದ್ದಾರೆ.

ಪ್ರಜಾಸೌಧ ಕಟ್ಟಡದ ಶಂಕುಸ್ಥಾಪನೆ ವೇಳೆ, ಶಾಸಕ ನಾನಾ, ಅವನಾ ಎಂದು ಎಂಎಲ್ ಎ ಶರಣಗೌಡ ಅವರು, ಉತ್ತರ ಕರ್ನಾಟಕದ ಆಡು ಭಾಷೆಯಲ್ಲಿ ಮಾತಾಡಿದ್ದೇ ವಿನಾಃ ಕಾರಣ ದೊಡ್ಡದ್ದು ಮಾಡಿ ಗಲಾಟೆ ಮುಂದಾದಾಗ ಶಾಸಕರೇ ವೇದಿಕೆಯಲ್ಲಿ ಅದನ್ನು ಶಾಂತಗೊಳಿಸಿ, ಮಾಜಿ ಸಚಿವ ಬಾಬುರಾವ ಚಿಂಚನಸೂರ ಅವರಿಗೆ ಗೌರವ ನೀಡಿದ್ದಾರೆ.ಈ ಸತ್ಯವನ್ನು ಮರೆಮಾಚಿದ ಕಾಂಗ್ರೆಸ್ ನ ಕೆಲವರು, ಪಕ್ಷದ ನಾಯಕ–ರಿಂದ ಶಬ್ಬಾಸಗಿರಿ ಪಡೆಯಲು ಪ್ರತಿಭಟನೆ ಮಾಡಿಸಿದ್ದಾರೆಂದು ಅವರು ದೂರಿದ್ದಾರೆ.

ಒಣಪ್ರತಿಷ್ಠೆಗಾಗಿ ಹೀಗೆಲ್ಲ ಓರ್ವ ಜನಪ್ರತಿನಿಧಿಯನ್ನು ಅವಮಾನಿಸುವ ಕೆಲಸ ಮಾಡುವುದು ಮುಂದುವರೆದರೇ ನಾವು ಕೈಕಟ್ಟಿ ಕುಳಿತುಕೊಳ್ಳಲ್ಲ ಎಂದ ಅವರುಗಳು, ಕಾಂಗ್ರೆಸ್ ನ ಪ್ರತಿಭಟನೆ ಖಂಡಿಸಿ ಗುರುಮಠಕಲ್ ಮತಕ್ಷೇತ್ರದಲ್ಲಿ ನಾವು ಬೃಹತ್ ಹೋರಾಟಕ್ಕೆ ಮುಂದಾಗುವುದನ್ನು ಅರಿತ ನಮ್ಮ ಶಾಸಕ ಶರಣಗೌಡ ಅವರೇ ಬೇಡ ಎಂದಿದ್ದಾರೆ. ಅವರು ಮಾಡಿದ್ದಾರೆಂದು ನಾವು ಮಾಡಿದರೇ ಅವರಿಗೂ – ನಮಗೂ ಏನು ವ್ಯತ್ಯಾಸ ಉಳಿಯುದಿಲ್ಲ ಎಂಬ ಸಲಹೆ ನೀಡಿದ ಹಿನ್ನಲೆಯಲ್ಲಿ ಈ ರೀತಿಯಿಂದ ಉತ್ತರ ಕೊಡುತ್ತಿದ್ದೆವೆ ಎಂದು ಸ್ಪಷ್ಟಪಡಿಸಿದರು. ಶಾಸಕರ ಮೇಲೆ ಕಾಂಗ್ರೆಸ್ ನ ಕೆಲವರು ಮಾಡಿರುವ ಆರೋಪಗಳಲ್ಲಿ ಯಾವುದೇ ಹುರುಳಿಲ್ಲ. ಸಾಯಿಬಣ್ಣಾ ಬೋರಬಂಡಾ, ತಮ್ಮ ಸ್ವಾರ್ಥಕ್ಕಾಗಿ ಶಾಸಕರ ವಿರುದ್ಧ ಕೆಲಸ ಮಾಡುತ್ತಿದ್ದಾರೆ ಎಂದು ಜಿಲ್ಲಾ ಜೆಡಿಎಸ್ ವಕ್ತಾರ ಮಲ್ಲಣ್ಣಗೌಡ ಹಳಿಮನಿ ಆರೋಪಿಸಿದ್ದಾರೆ.

ಪುರಸಭೆ ಅಧ್ಯಕ್ಷೆ ಜಯಶ್ರೀ ಆರ್.ಪಾಟೀಲ್, ಜೆಡಿಎಸ್ ತಾಲುಕು ಅಧ್ಯಕ್ಷ ಪ್ರಕಾಶ ನೀರಟ್ಟಿ ಕೃಷ್ಣಾರೆಡ್ಡಿ ಪೊಲೀಸ್ ಪಾಟೀಲ್, ನರಸಪ್ಪ ಕವಡೆ, ತಾಪಂ ಮಾಜಿ ಅಧ್ಯಕ್ಷ ಈಶ್ವರ ನಾಯಕ್ ಚಿಂತನಳ್ಳಿ ತಾಂಡಾ, ಶರಣು ಆವಂಟಿ, ನರ್ಮದಾ ಅವಂಗಪುರ್, ಲಾಲಪ್ಪ ತಲಾರಿ ಸೇರಿದಂತೆಯೇ ಇತರರಿದ್ದರು.

### ಬಸರಡ್ಡಿ ಜನ್ಮ ಜಾಲಾಡಿದ ಕಟಕಟಿ.

ಶಾಸಕ ಶರಣಗೌಡ ಕಂದಕೂರು ಅವರ ಬಗ್ಗೆ ಮಾತನಾಡುವ ಯಾವುದೇ ನೈತಿಕ ಹಕ್ಕು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರೆಡ್ಡಿ ಅನಪುರ ಸೇರಿದಂತೆಯೇ ಗುರಮಠಕಲ್ ನ ಕಾಂಗ್ರೆಸ್ ನ ಯಾವ ನಾಯಕರಿಗಿಲ್ಲ ಎಂದಿರುವ ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಷಚಂದ್ರ ಕಟಕಟೆ, ಕಾಂಗ್ರೆಸ್ ಅಧ್ಯಕ್ಷರೇ ನೀವು ಏನು ಇದ್ದಿರಿ, ಯಾರಿಂದ ಮುಂದೆ ಬಂದಿದ್ದಿರಿ, ಈಗ ಏನು ಮಾಡುತ್ತಿದ್ದಿರಿ ಎಂಬುವುದು ಎಲ್ಲರಿಗೂ ಗೊತ್ತಿದೆ. ನಿಮ್ಮಂತೆಯೇ ನಕಲಿ ಬೋರವೆಲ್ ಬಿಲ್ ಎತ್ತಿಲ್ಲ, ನಮ್ಮ ಶಾಸಕರ ಮನೆಯಲ್ಲಿ ಯಾರು ಗುತ್ತಿಗೆದಾರರಲಿಲ್ಲ, ಬೋರವೆಲ್ ಪಾಯಿಂಟ್ ಹಾಕುವವರೂ ಇಲ್ಲ. ಎಲ್ಲ ಅವ್ಯವಹಾರಗಳು ಮಾಡಿ ಕಂಡಲ್ಲಿ ಆಸ್ತಿ ಮಾಡುತ್ತಿರುವ ನೀವು ನಮ್ಮ ಶಾಸಕರ ಬಗ್ಗೆ ಇಲ್ಲ,ಸಲ್ಲದ ಆರೋಪ ಮಾಡುವ ಯಾವ ನೈತಿಕತೆ ಹೊಂದಿದ್ದಿರಿ ಎಂದು ಜರಿದರು.

ಐವತ್ತು ವರ್ಷಗಳ ಕಾಲ ನಿಮ್ಮ ನಾಯಕರು ಈ ಗುರುಮಠಕಲ್ ಕ್ಷೇತ್ರವನ್ನೂ ಆಳಿದರಲ್ಲ, ಅವರುಗಳು ಎಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಕಳೆದ ಎಂಟು ವರ್ಷಗಳಲ್ಲಿ ಕಂದಕೂರು ಕುಟುಂಬ ಮಾಡುತ್ತಿರುವ ಅಭಿವೃದ್ಧಿ ಕೆಲಸಗಳು ಸಹಿಸಿಕೊಳ್ಳಲು ಆಗದೇ ಹೀಗೆ ಸುಮ್ಮನ್ನೆ ಪ್ರತಿಭಟನೆ ಮಾಡಿದರೇ ಜನ ನಂಬಲ್ಲ ಎಂದಿದ್ದಾರೆ. 1972 ರಿಂದ 2023ರ ವರೆಗೂ

ಸ್ಥಳಿಯವಾಗಿ ಒಬ್ಬರಿಗೂ ಟಿಕೆಟ್ ನೀಡಿಲ್ಲ ಮತ್ತು ಪಡೆದಿಲ್ಲ. ತಾಕತ್ತು ಇದ್ದರೇ ಸ್ಥಳಿಯರು ಟಿಕೆಟ್ ಪಡೆದು ಗೆದ್ದು ಬರಲಿ ಎಂದಿರುವ ಕಟಕಟಿ, ಅಭಿವೃದ್ಧಿ ವಿಷಯಕ್ಕೆ ಚರ್ಚೆಗೆ ಸದಾ ಸಿದ್ಧವೆಂದು ಸವಾಲ್ ಹಾಕಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಮಾರ್ಗದರ್ಶನದಲ್ಲಿ ನಡೆಯುತ್ತೆವೆ ಎನ್ನುವ ಮಾತು ಆಡುವ ನೀವುಗಳು ಅತ್ಯಂತ ಕೀಳು ಭಾಷೆಯನ್ನೇ ಪ್ರಯೋಗ ಮಾಡುವ ಕುರಿತೇ ಖರ್ಗೆ ಅವರು ತಮಗೆಲ್ಲ ಮಾರ್ಗದರ್ಶನ ಮಾಡಿದ್ದಾರೆಯೇ ಎಂದು ಪ್ರಶ್ನಿಸಿದರು.

ಅಂದಿನ ಪ್ರತಿಭಟನೆ ಕೆಲ ಸ್ವಾರ್ಥಿಗಳ ಲಾಭಕ್ಕಾಗಿಯೇ ನಡೆದಿದೆ. ಅವರಿಗೆ ನಾವು ಪ್ರತಿಭಟನೆ ಮೂಲಕವೇ ಉತ್ತರ ಕೊಡಲು ಸಿದ್ದರಾಗಿದ್ದೆವು. ಆದರೇ ದೊಡ್ಡಗುಣದ ನಮ್ಮ ಶಾಸಕರ ಮಾತಿಗೆ ಬೆಲೆ ನೀಡಿ ಹಿಂದೆ ಸರಿದಿದ್ದೆವೆ. ಮುಂದೇ ಹೀಗೆ ಆದರೇ ಸುಮ್ಮನೇ ಇರುವುದಿಲ್ಲ ಎಂದು ಎಚ್ಚರಿಸಿ, ಮಾತಿನುದ್ದಕ್ಕೂ ಬಸರೆಡ್ಡಿ ಅವರನ್ನು ಜಾಲಾಡಿದರು.

### ಒಣಪ್ರತಿಷ್ಠೆಗಾಗಿ ಕಾಂಗ್ರೆಸ್ ನಿಂದ ಪ್ರತಿಭಟನೆ : ನಾಗರತ್ನ ಆರೋಪ.

ಒಂದು ಪಕ್ಷಕ್ಕೆ ಸಮಾಜ ಒತ್ತಿ ಇಡುವುದು ಬೇಡ, ಸಮಾಜವೇ ಬೇರೇ, ಪಕ್ಷನೇ ಬೇರೆ ಎಂದಿರುವ ಜಿಲ್ಲಾ ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ ನಾಗರತ್ನ ಅನಪುರ, ಈ ಹಿಂದೇ ಬಸವಕಲ್ಯಾಣದಲ್ಲಿ ಕೋಲಿ ಸಮಾಜದ ಮಾಲಾ ಬಿ.ನಾರಾಯಣರಾವ ಚುನಾವಣೆಗೆ ಸ್ಪರ್ಧಿಸಿದಾಗ ಮಾಜಿ ಸಚಿವ ಬಾಬುರಾವ ಚಿಂಚನಸೂರ ಅವರು ಬಿಜೆಪಿ ಪರ ಕೆಲಸ ಮಾಡಿದ್ದರು, ಆಗ ಸಮಾಜದ ಆ ಮಹಿಳೆ ಬಗ್ಗೆ ಅರಿವು ಆಗಲಿಲ್ಲವೇ ಎಂದು ಪ್ರಶ್ನಿಸಿದರು.

ಯರಗೋಳದ ಮಾರ್ತಾಂಡ ಮನೆಗಾರನ ಮೇಲೆ ಹಲ್ಲೆ ನಡೆದಾಗ ಶರಣಗೌಡ ಕಂದಕೂರು ಅವರೇ ಬೀದಿಗಿಳಿದು ಹೋರಾಟ ಮಾಡಿ ನ್ಯಾಯ ಒದಗಿಸಿಕೊಟ್ಟರು, ಆಗ ಸಮಾಜದವರು ಎಲ್ಲಿದ್ದರು ಎಂದು ಮರು ಪ್ರಶ್ನೆ ಹಾಕಿದ್ದಾರೆ. "ನಾನಾ, ಅವನಾ" ಎಂಬ ಪದದಲ್ಲಿ ಅಸಂಬದ್ಧತೆ ಎಲ್ಲಿದೆ, ಇದು ಸಹಜವಾಗಿ ಆಡುವ ಶಬ್ದ. ಮಾಡಲು ಏನು ಕೆಲಸವಿಲ್ಲದವರು ಪ್ರತಿಭಟನೆ ಮಾಡಿಸಿದ್ದಾರೆ. ಇದು ಸರಿಯಲ್ಲ. ಹೀಗೆ ಮುಂದುವರೆದರೇ ನಾವು ಬೀದಿಗಿಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು.

### ರಾಯಚೂರು, ದೇವದುರ್ಗ ಸರ್ಕಾರಿ ಕೈಗಾರಿಕಾ

## ತರಬೇತಿ ಸಂಸ್ಥೆಗಳಲ್ಲಿ ವಿವಿಧ ವೃತ್ತಿಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ರಾಯಚೂರು ಸೆಪ್ಟೆಂಬರ್ 18: ರಾಯಚೂರು ಹಾಗೂ ದೇವದುರ್ಗ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ವಿವಿಧ ವೃತ್ತಿಗಳಿಗೆ 2025–26ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಆಸಕ್ತ ವಿದ್ಯಾರ್ಥಿಗಳು, ಅಂಕಪಟ್ಟಿ, ಇತ್ತೀಚಿನ 2 ಭಾವಚಿತ್ರ, ಜಾತಿ ಹಾಗೂ ಆದಾಯ ಪ್ರಮಾಣ, 371 ಜೆ ಪ್ರಮಾಣ ಪತ್ರ, ಗ್ರಾಮೀಣ ಮತ್ತು ವ್ಯಾಸಂಗ ಪ್ರಮಾಣ ಪತ್ರಗಳೊಂದಿಗೆ ನೇರವಾಗಿ ಸಂಸ್ಥೆಯಲ್ಲಿ ಅರ್ಜಿಯನ್ನು ಸೆಪ್ಟೆಂಬರ್ 30ರೊಳಗಾಗಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಾಯಚೂರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಮೊಬೈಲ್ ಸಂಖ್ಯೆ: 9036684778, 9449185499, ದೇವದುರ್ಗ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಮೊಬೈಲ್ ಸಂಖ್ಯೆ: 9740671796, 7676126770, 9731494209, 9113519543ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಹಾಗೂ ದೇವದುರ್ಗ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬೀದರ, – ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ಮೆಟ್ರಿಕ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ(ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ/ಪ,ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಯ ಪೊಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ–1, ಎಸ್.ಸಿ & ಎಸ್.ಟಿ ರೂ. 2.50 ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಮತ್ತು ಇತರೆ ರೂ. 1.00 ಲಕ್ಷ ನಿಗದಿಪಡಿಸಲಾಗಿದೆ.

ವಿದ್ಯಾರ್ಥಿಗಳು https://shp.karnataka.gov.in/bcwd ನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ದಿನಾಂಕ: 04–10–2025 ಕೊನೆಯ ದಿನಾಂಕವಾಗಿರುತ್ತದೆ.

ತಾಲ್ಲೂಕಾ ವಾರು ವಿದ್ಯಾರ್ಥಿ ನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಇರಬೇಕಾದ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline @gmail.comಗೆ, ಇ–ಮೇಲ್ ಮುಖಾಂತರ ಅಥವಾ ಸಹಾಯವಾಣಿ ಸಂ–ಖ್ಯೆ: 8050770004 ಮತ್ತು 8050770005, ಅಥವಾ ಜಿಲ್ಲಾ/ತಾಲ್ಲೂಕಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೀದರ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಅಜ್ಞಾನದ ಕತ್ತಲಿನಿಂದ ಜ್ಞಾನದ ಬೆಳಕು ನೀಡುವವರೇ ಗುರುಗಳು
## ಶ್ರೀ ಪ.ಪೂ ಶಿವರಾಮಕೃಷ್ಣನಂದ ಭಾರತಿ ಮಹಾಸ್ವಾಮಿಗಳು

**ಮಲ್ಲಮ್ಮ ನುಡಿ ವಾರ್ತೆ**




ಕೊಪ್ಪಳ: ಅಜ್ಞಾನದ ಕತ್ತಲಿನಿಂದ ಜ್ಞಾನದ ಬೆಳಕು ನೀಡುವವರೇ ಗುರುಗಳು. ನಮ್ಮ ಭವಿಷ್ಯವನು ರೂಪಿಸಿದ ಗುರುಗಳಿಗೆ ಒಂದು ಕಡೆಸೇರಿಸಬೇಕುಗೌರವಸಮರ್ಪಿಸಬೇಕು ವಂದನೆಗಳನ್ನುಸಲ್ಲಿಸಬೇಕು ಎನ್ನುವ ಭಾವ ಅತ್ಯಂತ ಸರಳ ಸಜ್ಜನಿಕೆಯ ಸಾತ್ವಿಕ ಜನರಲ್ಲಿ ಮಾತ್ರ ಬರಲು ಸಾಧ್ಯ ಎಂದು ಶ್ರೀ ಪ.ಪೂ ಶಿವರಾಮಕೃಷ್ಣನಂದ ಭಾರತಿ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ಸಮೀಪದ ಭಾಗ್ಯನಗರ ಪಟ್ಟಣದ ಶ್ರೀನಿವಾಸ ಕಲ್ಯಾಣ ಮಂಟಪದಲ್ಲಿ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವ್ಯಾಸಂಗ ಮಾಡಿದ 1987-88 ರಿಂದ 1997- 98 ನೇ ಸಾಲಿನ 1 ರಿಂದ 10 ನೇ ತರಗತಿಯ ವಿದ್ಯಾರ್ಥಿಗಳಿಂದಆಯೋಜಿಸಿದ್ದಸ್ನೇಹ ಸಮ್ಮಿಲನ ಹಾಗೂ ಗುರುವಂದನಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

'ನಾವು ಇಂದು ಏನಾದರೂ ಗಳಿಸಿದ್ದರೆ ಅದೆಲ್ಲವೂ ಈ ಸಮಾಜದಿಂದಗಳಿಸಿದ್ದೇವೆ. ಹಾಗಾಗಿ ಈ ಸಮಾಜದಿಂದ ಪಡೆದದ್ದನ್ನು ನಾವು ಮತ್ತೆ ಸಮಾಜಕ್ಕೆ ವಾಪಸ್ ನೀಡಬೇಕಾಗುತ್ತದೆ. ಆ ಮೂಲಕ ಅಕ್ಷರ ಕಲಿಸಿದ ಗುರುಗಳು, ಜನ್ಮ ಕೊಟ್ಟ ಹೆತ್ತವರು, ಆಡಿ ಬೆಳೆದ ಭೂಮಿಯಋಣವನ್ನುತೀರಿಸಲೇಬೇಕು. ಸುಮಾರು 30 ವರ್ಷ ನಂತರವೂ ವಿದ್ಯೆ ಕಲಿಸಿದ ಗುರುವಿನ ಮಹತ್ವ ಅರಿತು, ಅವರಿಗೆವಂದಿಸುವ ಕಾರ್ಯ ಮಾದರಿಯಾಗಿದೆ. ಉಜ್ವಲ ಜೀವನ ನಿರ್ಮಿಸಬೇಕಾದರೆಗುರುವಿನಉತ್ತಮ ಮಾರ್ಗದರ್ಶನ ಅತ್ಯವಶ್ಯಕವಾಗಿದೆ' ಎಂದರು.

ನಿವೃತ್ತ ಹಿರಿಯ ಶಿಕ್ಷಕ ನಿಂಗಪ್ಪ ಮಾತನಾಡಿ,

ಉದ್ಯೋಗ ಇನ್ನಿತರೆ ಕಾರಣಗಳಿಗಾಗಿ ಹುಟ್ಟಿದ ಊರು ಬಿಟ್ಟು ಬೇರೆಲ್ಲೋ ನೆಲೆಸಿದವರು ತಮ್ಮ ದಿನನಿತ್ಯದ ಒತ್ತಡ ಜೀವನದಲ್ಲಿ ಹುಟ್ಟಿದ ಊರು, ಹೆತ್ತವರು, ಅಕ್ಷರ ಕಲಿಸಿದ ಗುರುಗಳನ್ನುನೆನೆಸಿಕೊಳ್ಳಲಾಗದಸ್ಥಿತಿಗೆ ತಲುಪಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಹಿರಿಯ ವಿದ್ಯಾರ್ಥಿಗಳೆಲ್ಲರನ್ನೂ ಒಟ್ಟುಗೂಡಿಸುವ, ತಮ್ಮ ಹಳೆಯ ದಿನಗಳನ್ನುಮೆಲಕು ಹಾಕುವಂತಹ ಸುಂದರ ಕ್ಷಣಗಳಿಗೆ ಈ ಕಾರ್ಯಕ್ರಮ ಸಾಕ್ಷಿಯಾಗಿದೆ' ಎಂದರು.

ಹಳೇ ವಿದ್ಯಾರ್ಥಿಗಳ ಶಿಕ್ಷಕಿ ಶಾರದಾ ಮಾತನಾಡಿ, ನಮ್ಮ ವೃತ್ತಿ ಜೀವನದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡುವುದೊಂದೇ ನಮಗೆ ಗುರಿಯಾಗಿತ್ತು. ಯಾವ ಮಕ್ಕಳು ಕಲಿಕೆಯಲ್ಲಿ ಮುಂದಿದ್ದಾರೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಹೇಗೆ ಪ್ರಗತಿ ಹೊಂದಿಸಬೇಕು. ಅವರಲ್ಲಿರುವ ಕೌಶಲ್ಯಗಳನ್ನು ಮುಖ್ಯವಾಹಿನಿಗೆ ಹೇಗೆ ತರಬೇಕು. ಶಾಲೆಯಲ್ಲಿ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸಬೇಕು ಎನ್ನುವುದೊಂದೆ ಆಸೆಯಾಗಿರುತ್ತದೆ. ಭವಿಷ್ಯ ರೂಪಿಸಿಕೊಂಡು ಕೆಲವರು ಉತ್ತಮ ಸತ್ಪ್ರಜೆಗಳಾಗುತ್ತಾರೆ. ಕೆಲವರು ಕೃಷಿಕರು, ವಕೀಲರು, ವ್ಯವಹಾರಿಕರು, ಉಪಾದ್ಯಾಯರು, ಸರಕಾರಿ ಇಲಾಖೆಯಲ್ಲಿ ನೌಕರರು ಹೀಗೆ ಹಲವಾರು ಕ್ಷೇತ್ರದಲ್ಲಿ ಸೇರಿಹೋಗಿರುತ್ತಾರೆ. ಅವರನ್ನೆಲ್ಲರನ್ನು ಒಗ್ಗೂಡಿಸಿಕೊಂಡು ನಿಮ್ಮ ಶಾಲಾ ದಿನಗಳನ್ನುಮೆಲುಕು ಹಾಕುವಂತಹ ಸುಂದರ ವೇದಿಕೆಯನ್ನು ಸೃಜಿಸಿ ಗುರುಗಳಿಗೆ ಗೌರವಿಸುತ್ತಿರುವುದು ನಿಜಕ್ಕೂ ಪೂರ್ವಜನ್ಮದ ಪುಣ್ಯವೆಂದು ಭಾವಿಸುತ್ತೇವೆ. ಶಿಷ್ಯರು ಎಷ್ಟೇ ದೊಡ್ಡವರಾದರೂ ನಮಗೆ ಅವರು ಮಕ್ಕಳಂತೆಯೇ ಭ್ರಾಸವಾಗುತ್ತದೆ. ಅದೇ ಗುರುಶಿಷ್ಯರ ಸಂಬಂಧ ಈ ಸಂಬಂಧ ಹೀಗೆ ಇರಲಿ, ಪ್ರತಿಯೊಬ್ಬರು ಸಮಾಜದಲ್ಲಿ ಉತ್ತಮ ಕೆಲಸಗಳನ್ನು ಮಾಡಬೇಕು. ಭವಿಷ್ಯದಲ್ಲಿ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವಂತಾಗಬೇಕು ಎಂದು ಹೇಳಿದರು.

ಹಳೆಯ ವಿದ್ಯಾರ್ಥಿಗಳು 30 ವರ್ಷಗಳ ಹಿಂದಿನ ನೆನಪನ್ನು ಮೆಲುಕು ಹಾಕಿದರು. ಇದೇ ವೇಳೆ ನಿವೃತ್ತ ಶಿಕ್ಷಕರನ್ನು ಸತ್ಕರಿಸಿ ಗೌರವಿಸಲಾಯಿತು. ನಿವೃತ್ತ ಶಿಕ್ಷಕರು, ಹಳೆಯ ವಿದ್ಯಾರ್ಥಿಗಳು ಇದ್ದರು.

### ವ್ಯವಸ್ಥಿತ ಕಸ ಸಂಗ್ರಹಕ್ಕೆ ಕ್ಯೂಆರ್ ಕೋಡ್;ಬಳ್ಳಾರಿಯಲ್ಲಿ ಹೊಸ ಪ್ರಯೋಗ

# ಗ್ರಾಮಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ: ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಕರೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.18-ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಸೆ.17 ರಿಂದ ಅ.02 ರವರೆಗೆ ಸರ್ಕಾರದ ನಿರ್ದೇಶನದಂತೆ ಸ್ವಚ್ಛತಾ ಹೀ ಸೇವಾ ಸ್ವಚ್ಛತೆ-ಯೇ ಸೇವೆ ಅಭಿಯಾನವನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಿಲ್ಲಾ ಪಂಚಾಯತ್ ಬಳ್ಳಾರಿ, ತಾಲ್ಲೂಕು ಪಂಚಾಯತ್ ಬಳ್ಳಾರಿ ಹಾಗೂ ಗ್ರಾಮ ಪಂಚಾಯತ್ ಕಪ್ಪಗಲ್ಲು ಮತ್ತು ಮೋಕ ಸಹಭಾಗಿತ್ವದಲ್ಲಿ ಕಪ್ಪಗಲ್ಲು ಮತ್ತು ಮೋಕ ಗ್ರಾಮಗಳಲ್ಲಿ ಸ್ವಚ್ಛತೆ ಕೈಗೊಳ್ಳುವ ಮೂಲಕ ಗುರುವಾರ ಚಾಲನೆ ನೀಡಲಾಯಿತು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೈರ್ ಅವರು ಅಭಿಯಾನದಲ್ಲಿ ಭಾಗವಹಿಸಿ ಮಾತನಾಡಿ, ಸ್ವಚ್ಛತಾ ಕಾರ್ಯವು ತುಂಬಾ ಮಹತ್ತರ ಕಾರ್ಯವಾಗಿದ್ದು, ಗ್ರಾಮಗಳಲ್ಲಿ ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

ವೈಯಕ್ತಿಕ ಸ್ವಚ್ಛತೆ, ಗ್ರಾಮದ ಸ್ವಚ್ಛತೆ, ತ್ಯಾಜ್ಯ ನಿರ್ವಹಣೆ, ಜಲಮೂಲಗಳ ಸುತ್ತ ಸ್ವಚ್ಛತೆ ಕಾಯ್ದುಕೊಳ್ಳುವಿಕೆ ಕುರಿತು ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು ಸಹ ಕೈಜೋಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ ಶಿವಪೂರೆ ಅವರು ಮಾತನಾಡಿ, ಸಾರ್ವಜನಿಕರು ಸ್ವಚ್ಛತೆ ಮತ್ತು ಶುಚಿತ್ವದ ಬಗ್ಗೆ ಅರಿವು ಹೊಂದಬೇಕು. ಇದರಿಂದ ಯಾವುದೇ ರೋಗ-ರುಜಿನಗಳು ಹತ್ತಿರ ಸುಳಿಯುವುದಿಲ್ಲ ಎಂದರು.

*ಕಸ ಕ್ಯೂಆರ್ ಕೋಡ್:*

ಗ್ರಾಮೀಣ ಪ್ರದೇಶದಲ್ಲಿ ಘನ ತ್ಯಾಜ್ಯ ನಿರ್ವಹಣೆ ಕುರಿತು ಪ್ರತಿ ನಿತ್ಯ ಮನೆಯ ಹಂತದಲ್ಲಿ ಕಸ ಸಂಗ್ರಹಣೆ ಮತ್ತು ಇದನ್ನು ಜಿಲ್ಲಾ ಹಂತದಲ್ಲಿ ಪರಿಶೀಲನೆ ನಡೆಸಲು ಪ್ರಾಯೋಗಿಕವಾಗಿ ಮೋಕ ಮತ್ತು ಕಪ್ಪಗಲ್ಲು ಗ್ರಾಮ ಪಂಚಾಯತಿಗಳಲ್ಲಿ ಕಸ ಕ್ಯೂಆರ್ ಕೋಡ್ ಆಪ್ ಬಿಡುಗಡೆಗೊಳಿಸಲಾಯಿತು.

ಸಮರ್ಪಕ ತ್ಯಾಜ್ಯ ವಿಲೇವಾರಿ ಮಾಡಲು ಕಸ ಕ್ಯೂಆರ್ ಕೋಡ್ ಅಳವಡಿಸಲು ಜಿಪಂ ಚಿಂತನೆ ನಡೆಸಿದ್ದು, ಈಗಾಗಲೇ ಯೋಜನೆ ರೂಪಿಸಲಾಗಿದೆ. ಪ್ರಾಯೋಗಿಕವಾಗಿ ಮೋಕ ಮತ್ತು ಕಪ್ಪಗಲ್ಲು ಗ್ರಾಮಗಳಲ್ಲಿ ಜಾರಿಗೊಳಿಸಲಾಗಿದೆ.

ಈ ಕ್ಯೂಆರ್ ಕೋಡ್ ಅನ್ನು ಪ್ರತಿ ನಿತ್ಯ ಸ್ಕ್ಯಾನ್ ಮಾಡಿದಾಗ ವಾಡ್ವಾರು ವಾಹನ ಮತ್ತು ಸಿಬ್ಬಂದಿಗಳು ಕಾರ್ಯ ನಿರ್ವಹಿಸುವ ಕುರಿತು ಪರಿಶೀಲನೆ ನಡೆಸಲು ಅನುಕೂಲವಾಗಲಿದೆ. ಪ್ರಾಯೋಗಿಕ ಹಂತದ ಈ ಗ್ರಾಮ ಪಂಚಾಯತಿಗಳಲ್ಲಿ ಯಶಸ್ವಿಯಾದಲ್ಲಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಸ ಕ್ಯೂಆರ್ ಕೋಡ್ ಗಳನ್ನು ಅಳವಡಿಸಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಅವರು ತಿಳಿಸಿದರು.

ಇದೇ ವೇಳೆ ಕಸ ಕ್ಯೂಆರ್ ಕೋಡ್ ಆಪ್ ಮತ್ತು ಸ್ವಚ್ಛತಾ ಕಾರ್ಯದ ಕುರಿತ ಮಾಹಿತಿ ಭಿತ್ತಿಪತ್ರ ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ತಾಲ್ಲೂಕು ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ ಬಾರಿಕರ್ ಸೇರಿದಂತೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು ಹಾಗೂ ಇತರರು ಹಾಜರಿದ್ದರು.

# ಕೊಪ್ಪಳದಲ್ಲಿ ಕರ್ನಾಟಕ ರತ್ನ ಡಾ.ವಿಷ್ಣುವರ್ಧನ್ ಜನ್ಮದಿನಾಚರಣೆಯ ಸಂಭ್ರಮ...



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಕರ್ನಾಟಕ ರತ್ನ ಡಾ.ವಿಷ್ಣುವರ್ಧನ್ ಅವರ 75 ನೇ ಜನುಮ ದಿನಾಚರಣೆ ಅಂಗವಾಗಿ ಡಾ.ವಿಷ್ಣು ಸೇನಾ ಸಮಿತಿ ಕೊಪ್ಪಳ ಘಟಕದಿಂದ ನಿನ್ನೆಬೆಳಿಗ್ಗೆ ಕೊಪ್ಪಳದ ಕೇಂದ್ರಿಯ ಬಸ್ ನಿಲ್ದಾಣದ ಎದುರುಗಡೆ ಸೃವ ಪದಾಧಿಕಾರಿಗಳು ಮತ್ತು ಅಭಿಮಾನಿಗಳೆಲ್ಲರೂ ಸೇರಿ ವಿಷ್ಣುದಾದ ಅವರ ಜನುಮ ದಿನವನ್ನು ಸಿಹಿ ಹಂಚಿ ಸಂಭ್ರಮದಿಂದ ಆಚರಿಸಿದರು.

ಇದೆ ಸಂದರ್ಭದಲ್ಲಿ ಕರ್ನಾಟಕ ಸರ್ಕಾರ ಡಾ. ವಿಷ್ಣುವರ್ಧನ್ ಅವರ ಸಿನೆಮಾ ಕ್ಷೇತ್ರದ ಸಾಧನೆಗಾಗಿ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿಯನ್ನು ಘೋಷಣೆ ಮಾಡಿದ್ದು ಅಭಿಮಾನಿಗಳಿಗೆಲ್ಲಾ ಸಂತಸ ತಂದಿದೆ, ನಟ ಸುದೀಪ್ ಮತ್ತು ಡಾ.ವಿಷ್ಣುಸೇನಾ ಸಮಿತಿಯ ರಾಜ್ಯಧ್ಯಕ್ಷರಾದ ವಿಷ್ಣುವೀರಕಪುತ್ರ ಶ್ರೀನಿವಾಸ್. ಅಶೋಕ್ ಖೇಣಿ ಅವರ ನೇತೃತ್ವದಲ್ಲಿ ಡಾ. ವಿಷ್ಣುವರ್ದನ ಸ್ಮಾರಕ ನಿರ್ಮಾಣದ ನೀಲಿ ನಕ್ಷೆ ಸಿದ್ದಗೊಂಡಿದ್ದುಅನಾವರಣಗೊಳಿಸಲಿದ್ದಾರೆ. ಡಾ. ವಿಷ್ಣುವರ್ಧನ್ ಅಭಿಮಾನಿಗಳು ನಾಡಿನಾದ್ಯಂತ ಜನುಮದಿನದ ಆಚರಣೆಯನ್ನುಹಬ್ಬದಸಂಭ್ರಮದಂತೆ ಆಚರಿಸಿದ್ದಾರೆ. ಇದೇ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ವಿಷ್ಣು ಸೇನಾ ಜಿಲ್ಲಾಧ್ಯಕ್ಷರಾದ ವೀರನಗೌಡ ನೆರೆಗಲ್. ಜಿಲ್ಲಾ ಉಪಾಧ್ಯಕ್ಷರಾದ ಲಿಂಗರಾಜ್ ಬಿಳೇಬಾವಿ. ಜಿಲ್ಲಾ ಗೌರವ ಅಧ್ಯಕ್ಷರಾದ ಭೀಮನಗೌಡ ಹಿರೇಗೌಡ್ರುಜಬ್ಬಲಗುಡ್ಡ.ದೇವರಾಜ್ ಕೋಳೂರು. ಸಂತೋಷ ಬಾರ-ಕೇರ. ವಿಜಯ ಕುಮಾರ್ ಕೊಪ್ಪಳ. ಶಾಂತಪ್ಪ ಕೊಪ್ಪಳ. ರೇವಪ್ಪ ಓಜನಹಳ್ಳಿ. ಸುದೀಪ್ ಕೊಪ್ಪಳ. ಕಿರಣ್ ಗೊಂಡಬಾಳ. ಅಲ್ಲಾಬಕ್ಷ ಮತ್ತೂರು ಮತ್ತು ಡಾ.ವಿಷ್ಣುವರ್ಧನ್ ಅಭಿಮಾನಿಗಳೆಲ್ಲರೂ ಉಪಸ್ಥಿತರಿದ್ದರು.

### ಕಂಪ್ಲಿ: ಪಶುಸಂಗೋಪನೆ, ಮೀನುಗಾರಿಕೆ

# ತರಬೇತಿ ಕಾರ್ಯಕ್ರಮಕ್ಕೆ ನೋಂದಾಯಿಸಲು ಅವಕಾಶ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.18-ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಕಂಪ್ಲಿಯ ಸಹಾಯಕ ನಿರ್ದೇಶಕರ ಕಚೇರಿ ವತಿಯಿಂದ ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯ ರೈತರು ಮತ್ತು ಮಹಿಳಾ ರೈತರಿಗೆ ಪಶುಸಂಗೋಪನೆ ಹಾಗೂ ಮೀನುಗಾರಿಕೆ ಕುರಿತು ಸೆ.22 ರಿಂದ ಸೆ.27 ರವರೆಗೆ ಆರು ದಿನಗಳ ವಿಶೇಷ ಸಾಂಸ್ಥಿಕ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಅರ್ಹರು ನೋಂದಾಯಿಸಿಕೊಳ್ಳಬಹುದು.

ತರಬೇತಿಗೆ ಭಾಗವಹಿಸುವ ರೈತರಿಗೆ ಉಚಿತ ಊಟ ಹಾಗೂ ವಸತಿ ವ್ಯವಸ್ಥೆ ಇದ್ದು, ಆಸಕ್ತಿಯುಳ್ಳ ರೈತರು ಸೆ.21 ರೊಳಗಾಗಿ ಜಮೀನಿನ ಎಫ್.ಐ.ಡಿ ಸಂಖ್ಯೆ ಅಥವಾ ಆಧಾರ್ ಸಂಖ್ಯೆಯೊಂದಿಗೆ ನೋಂದಣಿ ಮಾಡಿಕೊಳ್ಳಬಹುದು.

ಹೆಸರನ್ನು ನೊಂದಾಯಿಸಿಕೊಳ್ಳಲು ಇಚ್ಛಿಸುವವರು ಕೃಷಿ ಅಧಿಕಾರಿಗಳಾದ ಯೇಸುಬಾಬು-ಮೊ.6360645255,ಮತ್ತು ನವ್ಯಾನಾ.ಚೂರಿ-ಮೊ.6360139316 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಕಂಪ್ಲಿಯ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.20 ರಂದು ವಿದ್ಯುತ್ ಗ್ರಾಹಕರ ಕುಂದು-ಕೊರತೆ ಮತ್ತು ಜಾಗೃತಿ ಸಭೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.18-ಬಳ್ಳಾರಿ ನಗರ ಜೆಸ್ಕಾಂ ಉಪ-ವಿಭಾಗ 1 ಮತ್ತು 2 ರ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದು-ಕೊರತೆ ಸಭೆ ಮತ್ತು ಎಸ್‌ಒಪಿ ಬಗ್ಗೆ ಜಾಗೃತಿ ಸಭೆಯನ್ನು ಸೆ.20 ರಂದು ಮಧ್ಯಾಹ್ನ 3.30 ಗಂಟೆಗೆ ನಗರ ಉಪ-ವಿಭಾಗ ವಲಯ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಭೆಗೆ ಹಾಜರಾಗಬಹುದು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರವೇ ಜಿಲ್ಲಾ ಪದಾಧಿಕಾರಿಗಳ ಆಯ್ಕೆ,ಸಂಘಟನೆಯನ್ನು ಬಲಿಷ್ಠಗೊಳಿಸಲು ಕರೆ




**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ : ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ಟಿ.ಎ ನಾರಾಯಣಗೌಡರ ಸೂಚನೆ ಮೇರೆಗೆ ಜಿಲ್ಲಾದ್ಯಂತ ಸಂಘಟನೆಯನ್ನು ಬಲಪಡಿಸಬೇಕು ಎಂದು ಕರವೇ ಜಿಲ್ಲಾಧ್ಯಕ್ಷ ಬಿ.ಗಿರೀಶಾನಂದ ಜ್ಞಾನಸುಂದರ ತಿಳಿಸಿದರು.

ಅವರು ಗುರುವಾರದಂದು ನಗರದ ಪ್ರವಾಸಿ ಮಂದಿರದಲ್ಲಿ ಕರವೇ ಜಿಲ್ಲಾ ಪದಾಧಿಕಾರಿಗಳ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸಂಘಟನೆಯ ಬಲವರ್ಧನೆ, ಮುಂದಿನ ಕಾರ್ಯಕ್ರಮಗಳು, ಹೋರಾಟದ ಚಟುವಟಿಕೆಗಳು ಮತ್ತು ಸಾರ್ವಜನಿಕ ಸಂಪರ್ಕ ತಂತ್ರಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು. ಸಭೆಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಬಸನಗೌಡ ಪೋ.ಪಾಟೀಲ ಹಾಗೂ ಜಿಲ್ಲೆಯ ಪ್ರಮುಖರು ಪಾಲ್ಗೊಂಡು ತಮ್ಮ ಅಮುಲ್ಯ ಸಲಹೆಗಳನ್ನು ನೀಡಿದರು. ಸಂಘಟನೆಯ ಶಕ್ತಿ ಹೆಚ್ಚಿಸಲು ನಿರ್ಧಾರಗಳನ್ನು ಕೈಗೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಗ್ರಾಮ ಘಟಕಗಳ ಸಂಘಟನಾ ಬಲ ಹೆಚ್ಚಿಸಲು ಕಾರ್ಯತಂತ್ರ ರೂಪಿಸಲಾಯಿತು.

ಸಭೆಯಲ್ಲಿ ಈ ಕೆಳಗಿನವರನ್ನು ಜಿಲ್ಲಾ ಪದಾಧಿಕಾರಿಗಳನ್ನಾಗಿ ಆಯ್ಕೆಗೊಳಿಸಲಾಯಿತು.

ಗೌರವಾಧ್ಯಕ್ಷರಾಗಿ ಶರಣಪ್ಪ ಚಂದನಕಟ್ಟಿ, ಪ್ರಧಾನ ಕಾರ್ಯದರ್ಶಿಯಾಗಿ ನಿಂಗಪ್ಪ ಮೂಗಿನ್, ಉಪಾಧ್ಯಕ್ಷರುಗಳಾಗಿ ಶಿವನಗೌಡ ಪಾಟೀಲ ಹಲಗೇರಿ, ಕಳಕಪ್ಪ ಹೂಗಾರ, ಸುರೇಶಗೌಡ ಪಾಟೀಲ, ಅನಿಲ ಬಿಜ್ಜಳ, ಸಹ ಕಾರ್ಯದರ್ಶಿಗಳಾಗಿ ಚಂದ್ರಶೇಖರ ಶೆಟ್ಟಿ, ಸಂಗಮೇಶ ಕಂದಕೂರ, ಸಂಘಟನಾ ಕಾರ್ಯದರ್ಶಿಗಳಾಗಿ ನೂರಪಾಶಾ ಕವಲೂರು, ಸಂಚಾಲಕರನ್ನಾಗಿ ಸಂಗಮೇಶ ಗುರಿಕಾರ, ಶರಣಯ್ಯ ಹಳೆಮನಿ, ಕಾನೂನು ಸಲಹೆಗಾರರನ್ನಾಗಿ ಖ್ಯಾತ ವಕೀಲರಾದ ವೈ ಜಯರಾಜ, ಕಾರ್ಯಕಾರಣಿ ಸದಸ್ಯರುಗಳಾಗಿ ಸಂಜಯ ಖಟವಟೆ, ಮಂಜುನಾಥಗೌಡ ಆನೆಗುಂದಿ, ಶರಣು ಮದಲಗಟ್ಟಿ, ಬಸವರಾಜ ದಳವಾಯಿ, ಪರಸಪ್ಪ ಅಳ್ಳಳ್ಳಿ, ಡಾ.ನಾಗರಾಜ ಚಳಗೇರಿ, ಎಮ್.ಡಿ ರಫಿ, ಬಸವರಾಜ ಮಾಂತಗೊಂಡ ಇವರುಗಳು ನೇಮಕ ಮಾಡಲಾಗಿದೆ ಎಂದು ಹೇಳಿದರು. ಈ ಸಂಧರ್ಭದಲ್ಲಿ ತಾಲೂಕು ಮತ್ತು ಜಿಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಅಲೆಮಾರಿ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ರಾಯಚೂರು ಸೆಪ್ಟೆಂಬರ್ 18: ಸಮಾಜ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸಮುದಾಯದ ಜನರಿಗೆ ಸೇವೆಗಳನ್ನು ಒದಗಿಸುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಗೆ ಸೆಪ್ಟೆಂಬರ್ 25ರವರೆಗೆ ಅವಧಿ ವಿಸ್ತರಿಸಲಾಗಿದೆ.

ನಿಗಮದಿಂದ ಸ್ವಯಂ ಉದ್ಯೋಗ-ನೇರ ಸಾಲ ಯೋಜನೆ, ಮೈಕ್ರೋ ಕ್ರೆಡಿಟ್ ಹಣಕಾಸು, ಸ್ವಯಂ ಉದ್ಯೋಗ, ಸ್ವಾವಲಂಬಿ ಸಾರಥಿ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಭೂ ಖರೀದಿ ಯೋಜನೆಗೆ ಸೇವಾ ಸಿಂಧು ಪೋರ್ಟಲ್ ನಲ್ಲಿ ಸೆ.25ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. 2023-24 ಹಾಗೂ 2024-25 ಹಾಗೂ 2025-26ನೇ ಸಾಲಿನ ಅರ್ಜಿಗಳನ್ನು ಪರಿಗಣಿಸಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳ ಆಯ್ಕೆ ನಡೆಸುವುದು, ಆಯ್ಕೆಯಾದ ಫಲಾನುಭವಿಗಳ ಜಾತಿ, ಯೋಜನೆ ಮತ್ತು ಪೂರ್ಣ ವಿಳಾಸದೊಂದಿಗೆ ಪಟ್ಟಿ ಸಿದ್ದಪಡಿಸಿ ಆಯ್ಕೆ ಮಾಡಿರುವ ಫಲಾನುಭವಿಗಳನ್ನು ಮತ್ತೊಮ್ಮೆ ಆಯ್ಕೆ ಮಾಡಲು ಸಾಧ್ಯವಿರುವುದಿಲ್ಲ. ಸೌಲಭ್ಯ ವಂಚಿತರಿಗೆ ಮೊದಲ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿಯನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹಿರಾತಿಗಾಗಿ ಇಂದೇ ಸಂಪರ್ಕಿಸಿ:
9449732000

# ಅರ್ಥಪೂರ್ಣವಾಗಿ ವಿಶ್ವ ಕರ್ಮ ಜಯಂತಿ ಆಚರಣೆ

**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ:ಸೆ:18-ಜಿಲ್ಲಾಪಂಚಾಯತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ವಿಶ್ವ ನಾಥ ರೆಡ್ಡಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಭಗವಾನ್ ವಿಶ್ವಕರ್ಮ ಜಯಂತಿಯನ್ನು ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ, ಪೂಜ್ಯಕುಮಾರ ಮಹಾಸ್ವಾಮಿಗಳು ಮತ್ತು ಜಿಲ್ಲಾಧ್ಯಕ್ಷ ಮಹೇಶ ವಿಶ್ವಕರ್ಮ ಮುಂತಾದವರು ಉದ್ಘಾಟಿಸಿದರು. ವಿಶ್ವಕ್ಕೆ ಸುಂದರ ರೂಪ ಕೊಟ್ಟವರು ವಿಶ್ವಕರ್ಮರು ವಿಶ್ವಕ್ಕೆ ಒಂದು ಸುಂದರ ರೂಪವನ್ನು ಕೊಟ್ಟಂತಹ ಕೀರ್ತಿ ವಿಶ್ವ ಕರ್ಮ ಸಮಾಜಕ್ಕೆ ಸಲ್ಲುತ್ತದೆ. ಯಾವುದೇ ಒಂದು ವಸ್ತುವಿಗೆ ಆಕೃತಿ ಹಾಗೂ ರೂಪವನ್ನು ನೀಡುವಂತಹ ಕೆಲಸದಲ್ಲಿ ಈ ಸಮಾಜದವರ ಕೊಡುಗೆ ಅಪಾರವಾಗಿದೆ ಎಂದು

ಯಾದಗಿರಿಯ ಆನೆಗುಂದಿ ಸರಸ್ವತಿ ಪೀಠಾಧಿಪತಿ ಕುಮಾರ ಮಹಾಸ್ವಾಮಿಗಳು ಹೇಳಿದರು.

ಸಾಹಿತಿ ವೆಂಕಟೇಶ ಕಲಕಂಬ ಉಪನ್ಯಾಸ ನೀಡಿ ಅಮರ ಶಿಲ್ಪಿ ಜಕಣಾಚಾರಿ ನೇತೃತ್ವದಲ್ಲಿ ಜೀವ ತುಂಬಿರುವ ವಿಶ್ವವಿಖ್ಯಾತ ಬೇಲೂರು ಮತ್ತು ಹಳೇಬೀಡಿಗೆ 900 ವರ್ಷ ತುಂಬುವ ಕಾಲ ಸನಿಹವಾಗಿದೆ. ವಿಶ್ವವೇ ಇತ್ತ ನೋಡುವಂತೆ ವಿಶ್ವಕರ್ಮ ಸಮಾಜದವರು ಶಿಲ್ಪಗಳನ್ನು ಕೆತ್ತಿದ್ದಾರೆ. ಪ್ರಪಂಚ ಸುಂದರವಾಗಿ ಕಾಣುತ್ತಿದೆ ಎಂದರೆ ಅದಕ್ಕೆ ವಿಶ್ವಕರ್ಮರ ಕೊಡುಗೆ ಸಾಕಷ್ಟಿದೆ. ಬೇಲೂರು, ಹಳೇಬೀಡು, ಬಾದಾಮಿ, ಪಟ್ಟದಕಲ್ಲು ಸೇರಿದಂತೆ ಇತರ ದೇವಸ್ಥಾನಗಳ ಕೆತ್ತನೆಯಲ್ಲಿ ವಿಶ್ವಕರ್ಮ ಜನಾಂಗದ ಸೇವೆ ಸ್ಮರಣೀಯ. ವಾಸ್ತುಶಿಲ್ಪ ಕಲೆಯಲ್ಲಿ ಭಾರತ ಪ್ರಸಿದ್ಧಿ ಗಳಿಸಿದ್ದು ಈ ಸಮುದಾಯದಿಂದಲೇ ಎಂಬುದನ್ನು ಎಲ್ಲರೂ ಅರಿಯಬೇಕು ಎಂದು ಹೇಳಿದರು. ಶಿಕ್ಷಣದಿಂದ ಬದಲಾವಣೆ ಕಂಡುಕೊಳ್ಳಲು ಸಾಧ್ಯವಾಗಿದ್ದು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು" ಎಂದು ಹೇಳಿದರು. ವಿಶ್ವಕರ್ಮ ಜಿಲ್ಲಾಧ್ಯಕ್ಷ ಮಹೇಶ ವಿಶ್ವಕರ್ಮ ಮಾತನಾಡಿ ಚಿನ್ನ, ಬೆಳ್ಳಿ, ಮರಗೆಲಸ, ಕಬ್ಬಿಣದ ಕೆಲಸ, ಶಿಲ್ಪಕಲೆ ಸೇರಿದಂತೆ ಪಂಚ ಲೋಹಗಳ ಕಸುಬುಗಳನ್ನು ಮಾಡುವ ಮೂಲಕ ವಿಶ್ವಕರ್ಮ ಸಮುದಾಯ ಸಮಾಜಕ್ಕೆ ಅಪಾರ ಕೊಡುಗೆ ನೀಡಿದೆ. 'ಶಿವ, ವಿಷ್ಣು, ಇಂದ್ರ ಮುಂತಾದ ದೇವರಿಗೆ ಅಸ್ತ್ರ ಹಾಗೂ ರಥಗಳನ್ನು ಮಾಡಿಕೊಟ್ಟ ವಿಶ್ವಕರ್ಮ ಅವರ ಕೌಶಲ, ತಾಳ್ಮೆ ಇಂದಿನ ಯುವ ಜನರಿಗೆ ಮಾದರಿಯಾಗಬೇಕು. ವಿಶ್ವಕರ್ಮ ಸಮುದಾಯದವರು ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸಿ, ಶೈಕ್ಷಣಿಕವಾಗಿ ಮುಂದೆ ತರಬೇಕು. ಜನಾಂಗದ ಶೈಕ್ಷಣಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಸಮುದಾಯದ ಮುಖಂಡರು ಶ್ರಮಿಸಬೇಕು' ಎಂದು ಹೇಳಿದರು.



ಪಂಚ ಲೋಹಗಳನ್ನು ಬಳಸಿ ಬಗೆಬಗೆಯ ಸಾಧನ-,ಸಲಕರಣೆಗಳು, ಮೂರ್ತಿಗಳನ್ನು ಸಿದ್ಧಪಡಿಸುವ ಕರಕುಶಲತೆ ಹೊಂದಿರುವ ವಿಶ್ವಕರ್ಮ ಸಮುದಾಯದವರ ಕೈಯಲ್ಲಿ ಕಲ್ಲುಗಳು ಕೂಡ ಶಿಲೆಯಾಗಿ ಅರಳುತ್ತವೆ. ಜಾತಿ, ಧರ್ಮದ ತಾರತಮ್ಯವಿಲ್ಲದೆ ಎಲ್ಲ ಜನಾಂಗದವರನ್ನು ಸಮಾನವಾಗಿ ಕಂಡ ವಿಶ್ವಕರ್ಮ ಅವರಿಗೆ ಇಡೀ ವಿಶ್ವವೇ ಋಣಿಯಾಗಿದೆ' ಎಂದು ಅಭಿಪ್ರಾಯಪಟ್ಟರು. ವಿಶ್ವಕರ್ಮ ಸಮುದಾಯ ಕಲೆ, ಸಂಗೀತ ಕ್ಷೇತ್ರ, ಸಮಾಜಕ್ಕೆ ಅಪಾರ ಕೊಡುಗೆ ನೀಡಿದೆ. ವಜ್ರ, ಬಂಗಾರ, ಬೆಳ್ಳಿ ವ್ಯಾಪಾರವಲ್ಲದೆ, ರಾಜಕೀಯ ಕ್ಷೇತ್ರದಲ್ಲಿ ಕೂಡ ತನ್ನದೇ ಆದ ಛಾಪು ಮೂಡಿಸಿದೆ. ವಿವಿಧ ದೇವರ ಮೂರ್ತಿಗಳಿಗೆ ಒಂದು ರೂಪು ನೀಡುವ ಮೂಲಕ ಉತ್ತಮ ಸಮಾಜ ಕಲ್ಪಿಸಿದ ಕೀರ್ತಿ ಈ ಸಮುದಾಯಕ್ಕೆ ಸಲ್ಲುತ್ತದೆ' ಎಂದರು. ವಿಶ್ವದ 7 ಅದ್ಭುತಗಳಲ್ಲಿ ಒಂದಾದ ತಾಜ್ ಮಹಲ್ ನಿರ್ಮಾಣದಲ್ಲೂ ಸಮಾಜದವರ ಕೊಡುಗೆ ಇದೆ. ಸಮಾಜದವರು ಎಲೆಮರೆಕಾಯಿಯಂತೆ ಇದ್ದು, ವಸ್ತುವಿಗೆ ವಿಶ್ವರೂಪವನ್ನು ನೀಡುತ್ತಾರೆ. ಇಂತಹ ಸಮಾಜ ಆರ್ಥಿಕವಾಗಿ, ಶೈಕ್ಷ ಣಿಕವಾಗಿ ಹಾಗೂ ರಾಜಕೀಯವಾಗಿ ಅಭಿವೃದ್ಧಿ ಹೊಂದಬೇಕಾಗಿದೆ. ಸಮಾಜದಲ್ಲಿ ತಾಂತ್ರಿಕವಾಗಿ ಆವಿಷ್ಕಾರಗಳು ನಡೆಯುತ್ತಿದ್ದರೂ ವಿಶ್ವ ಕರ್ಮ ಸಮಾಜದವರು ಶಿಲೆಗೆ ನೀಡುವಂತಹ ರೂಪಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದು ಹೇಳಿದರು. ನಾಡಿನ ಇತಿಹಾಸವನ್ನು ಕಟ್ಟಿ ಕೊಡುವಲ್ಲಿ ಪ್ರಾಚೀನ ಸ್ಮಾರಕಗಳು ಮತ್ತು ದೇವಾಲಯಗಳು ಪ್ರಮುಖ ಪಾತ್ರ ವಹಿಸುತ್ತವೆ. ಅಂತಹ ಸ್ಮಾರಕ ಮತ್ತು ದೇವಾಲಯಗಳನ್ನು ನಿರ್ಮಿಸಿರುವ ನಮ್ಮ ಪೂರ್ವಿಕರ ಶ್ರಮ ಮತ್ತು ಸೃಜನಾತ್ಮಕ ಕಲೆ ಇಂದಿನ ಯುವ ಪೀಳಿಗೆಗೆ ಮಾದರಿ. ಶಿಲ್ಪಕಲೆಗೆ ವಿಶ್ವಕರ್ಮ ಸಮುದಾಯದ ಕೊಡುಗೆ ಅಪಾರ'. ವಿಶ್ವಕರ್ಮ ಸಮುದಾಯವು ಹಿಂದಿನ ಕಾಲದಿಂದಲೂ ಐದು ಕಸುಬುಗಳನ್ನು ತಮ್ಮ ವೃತ್ತಿಯನ್ನಾಗಿ ಮಾಡಿಕೊಂಡಿವೆ. ಈ ವೃತ್ತಿಗಳು ಮನುಷ್ಯನಿಗೆ ಮೂಲಸೌಕರ್ಯ ಒದಗಿಸಿ ಕೊಡುವ ವೃತ್ತಿಯಾಗಿವೆ. ಪುರಾಣಗಳ ಪ್ರಕಾರ, ವಿಶ್ವಕರ್ಮರು ಪ್ರಪಂಚವನ್ನು ಸೃಷ್ಠಿಸಿದವರು. ರಾಮಾಯಾಣದಲ್ಲಿ ಬರುವ ಶ್ರೀಲಂಕಾ ಹಾಗೂ ಮಹಾಭಾರತದ ಇಂದ್ರಪ್ರಸ್ಥ ಪ್ರದೇಶಗಳಲ್ಲಿ ಭವ್ಯ ಅರಮನೆಯನ್ನು ವಿಶ್ವಕರ್ಮರು ನಿರ್ಮಿಸಿದ್ದರು ಎಂಬುದನ್ನು ನಾವು ಕಾಣಬಹುದು' ಎಂದರು. 'ರಾಜ್ಯ ಸರ್ಕಾರವು ವಿಶ್ವಕರ್ಮರ ಕೊಡುಗೆಯನ್ನು ಪರಿಗಣಿಸಿ 2016ರಲ್ಲಿ ವಿಶ್ವಕರ್ಮ ಜಯಂತಿ ಆಚರಣೆಯನ್ನು ಜಾರಿಗೆ ತಂದಿತು. ಇಂದಿನ ಆಧುನಿಕ ಎಂಜಿನಿಯರುಗಳು ಅಸಾಧ್ಯವೆನ್ನುವ ಅನೇಕ ರೀತಿಯ ಕಲೆಯನ್ನು ಬಹಳ ಹಿಂದೆಯೇ ನಮ್ಮ ವಿಶ್ವಕರ್ಮರು ವಿಶ್ವಕ್ಕೆ ಪರಿಚಯಿಸಿದರು. ವಿಶ್ವ ಸಂಸ್ಥೆಯ ವಿಶ್ವ ಪಾರಂಪರಿಕ ಪಟ್ಟಿಗೆ ಸೇರಿರುವ ಅನೇಕ ಕಲ್ಲಿನ ಕೆತ್ತನೆಗಳು ಇಂದಿಗೂ ಪ್ರಪಂಚದ ಅತ್ಯುತ್ತಮ ಕಲೆಗೆ ನಿದರ್ಶನಗಳಾಗಿವೆ' ಎಂದು ಹೇಳಿದರು. ಈ ಸಂದರ್ಭದಲ್ಲಿ 2024-25ನೇ ಸಾಲಿನ ಎಸ್.ಎಸ್.ಎಲ್.ಸಿ.ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳಿಗೆ ಮತ್ತು ಸಮುದಾಯದ ಸಾಧಕರಿಗೆ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ, ಜಿಲ್ಲಾಧ್ಯಕ್ಷ ಮಹೇಶ ವಿಶ್ವಕರ್ಮ, ಅಶೋಕ ಚಂಡ್ರಕಿ. ರಮೇಶ ವಿಶ್ವಕರ್ಮ ಹತ್ತಿಕುಣಿ, ನಿಂಗಣ್ಣ ವಿಶ್ವಕರ್ಮ ಸಾಲೋಟಗಿ ಉಪಸ್ಥಿತರಿದ್ದರು. ಸಿಂಚನಾ ಮಾಮಣಿ ಮತ್ತು ಸಾಧ್ವಿ ಪ್ರಾರ್ಥಿಸಿದರು. ಶರಣಬಸಪ್ಪ ವಠಾರ ತಂಡದವರು ನಾಡಗೀತೆ ಹಾಡಿದರು. ಮಹೇಶ ಪತ್ತಾರ ದೋರನಹಳ್ಳಿ ನಿರೂಪಿಸಿ ವಂದಿಸಿದರು.

# ಕುರಿಗಾಹಿಗಳ ಕಾಯ್ದೆ ಜಾರಿ–ಹೋರಾಟಕ್ಕೆ ಸಿಕ್ಕ ಜಯ: ಹೆಗಡೆ




**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.18–ಸಾಂಪ್ರದಾಯಕ ಅಲೆಮಾರಿ ಕುರಿಗಾಹಿಗಳ ಅಧಿನಿಯಮ–2025ನ್ನು ಸರಕಾರ ಜಾರಿಗೆಗೊಳಿಸಿರುವುದು ಕುರಿಗಾಹಿ ಸಮುದಾಯದ ದಶಕಗಳ ಹೋರಾಟಕ್ಕೆ ನ್ಯಾಯ ಸಿಕ್ಕಂತಾಗಿದೆ ಎಂದು ಸಾಂಪ್ರದಾಯಿಕ ಕುರಿಗಾಹಿಗಳ ಹಿತರಕ್ಷಣಾ ಹೋರಾಟ ಸಮಿತಿ ಮುಖಂಡ ಯಲ್ಲಪ್ಪ ಹೆಗಡೆ ಹೇಳಿದರು.

ನಗರದಲ್ಲಿ ಗುರುವಾರ ಪತ್ರಿಕಾಗೋಷ್ಟಿಯಲ್ಲಿ ಮಾತನಾಡಿದ ಅವರು, ಸಾಂಪ್ರದಾಯಕ ಅಲೆಮಾರಿ ಕುರಿಗಾಹಿಗಳ ಕಾಯಿದೆ ಜಾರಿಯಿಂದ ಕುರಿಗಾಹಿಗಳಿಗೆ ಕಾನೂನುಬದ್ಧ ಭದ್ರತೆ ದೊರೆಯಲಿದೆ. ಸಾಂಪ್ರದಾಯಕ ಸಂಚಾರಿ ಜೀವನ ಶೈಲಿ, ವೃಕ್ತಿ ಮತ್ತು ಹಕ್ಕುಗಳಿಗೆ ಸರಕಾರ ಮಾನ್ಯತೆ ನೀಡಿರುವುದು ಕುರಿಗಾಹಿ ವೃತ್ತಿ ಸಮುದಾಯದ ಭವಿಷ್ಯವನ್ನು ಬಲಪಡಿಸುತ್ತದೆ ಎಂದರು.

ಹೋರಾಟಕ್ಕೆ ಮಾರ್ಗದರ್ಶನ ನೀಡಿದ ತಿಂಥಣಿಬ್ರಿಡ್ಜ್ ಕನಕ ಗುರುಪೀಠದ ಸಿದ್ದರಾಮಾನಂದಪುರಿ ಸ್ವಾಮೀಜಿ ಅವರಿಗೂ, ಕಾನೂನು ಜಾರಿಗೊಳಿಸುವಲ್ಲಿ ವಿಶೇಷ ಆಸಕ್ತಿ ತೋರಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಮತ್ತು ಹಾಗೂ ಅಧಿವೇಶನದಲ್ಲಿ ವಿಧೇಯಕ ಮಂಡಿಸಿ ಜಾರಿಗೊಳಿಸಲು ಶ್ರಮವಹಿಸಿದ ಸಚಿವ ವೆಂಕಟೇಶ ಅವರಿಗೂ ಸಮಿತಿ ಧನ್ಯವಾದಗಳನ್ನು ಸಲ್ಲಿಸುತ್ತದೆ ಎಂದು ಹೆಗಡೆ ಹೇಳಿದರು.

ವಿಧಾನಸಭೆಯೊಳಗೆ ಕುರಿಗಾಹಿಗಳ ಪರವಾಗಿ ಧ್ವನಿ ಎತ್ತಿ, ಮೀಸಲು ಅರಣ್ಯ ಪ್ರದೇಶಗಳಲ್ಲಿಯೂ ಕುರಿ ಮೇಯಿಸುವ ಹಕ್ಕು ದೊರಕಬೇಕು ಎಂಬ ಬೇಡಿಕೆಯನ್ನು ಸರ್ಕಾರದ ಗಮನಕ್ಕೆ ತಂದ ಶಾಸಕರುಗಳಾದ ಬಿ.ಬಿ.ಚಿಮ್ಮನಕಟ್ಟಿ ಹಾಗೂ ಜೆ.ಟಿ.ಪಾಟೀಲ ಅವರಿಗೂ ಹೋರಾಟ ಸಮಿತಿ ಅಭಿನಂದಿಸುತ್ತದೆ ಎಂದ ಅವರು, ಕಾಯ್ದೆಯಲ್ಲಿ ಕೆಲ ತಿದ್ದುಪಡಿಗಳು ಮತ್ತು ಕೆಲ ಅಂಶಗಳ ಸೇರ್ಪಡೆ ಆಗಬೇಕಿದೆ. ಮುಂದಿನ ಚಳಿಗಾಲ ಅಧಿವೇಶನದಲ್ಲಿ ತಿದ್ದುಪಡಿ ಕಾಯಿದೆ ಜಾರಿಗೆ ಮಾಡಬೇಕು ಎಂದು ಒತ್ತಾಯಿಸಿದರು.

ಮುಖಂಡರಾದ ಬಸವರಾಜ ಧರ್ಮತಿ, ಸಿದ್ದಪ್ಪ ಬಳಗಾನೂರ, ಪರಶುರಾಮ ಮಂಟೂರ, ಸುವರ್ಣಾ ನಾಗರಾಳ ಇದ್ದರು.

# ಶಿಸ್ತುಬದ್ಧ ಜೀವನದಿಂದ ಆರೋಗ್ಯ ವೃದ್ಧಿ–ಡಾ.ಅಪೇಕ್ಷಾ




**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.18–ಉತ್ತಮ ಆಹಾರ ಸೇವನೆ ಮಾಡುವುದರ ಜೊತೆಗೆ ಶಿಸ್ತುಬದ್ಧ ಜೀವನವನ್ನು ಅಳವಡಿಸಿಕೊಂಡಲ್ಲಿ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಅಪೇಕ್ಷಾ ಕುಲಕರ್ಣಿ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಆಯ್‌ಕ್ಯೂಎಸಿ ಮತ್ತು ಮಹಿಳಾ ಸಶಕ್ತೀಕರಣಘಟಕ ಬುಧವಾರ ಹಮ್ಮಿಕೊಂಡಿದ್ದ ಮಹಿಳಾ ಆರೋಗ್ಯ ಮತ್ತು ನೈರ್ಮಲ್ಯ ಜಾಗೃತಿ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉತ್ತಮ ಶಾರೀರಿಕ ಆರೋಗ್ಯ–ಕ್ಕೆ ಆಹಾರದ ಜೊತೆಗೆ ಉತ್ತಮ ನೀರು, ವಾಯು, ವಿಶ್ರಾಂತಿಯ ಅವಶ್ಯಕತೆವಿದೆ. ಊಟ, ನಿದ್ದೆ ಸರಿಯಾದ ಸಮಯದಲ್ಲಿ ಆಗದೇ ಹೋದಲ್ಲಿ ಅದು ಆರೋಗ್ಯ ಸಮಸ್ಯೆಗೆ ಕಾರಣವಾಗಬಹುದು. ವಿದ್ಯಾರ್ಥಿಗಳು ಇವುಗಳ ಬಗ್ಗೆ ಎಚ್ಚರ ವಹಿಸಬೇಕು ಎಂದರು. ವಿನಾಕಾರಣ ಭಯ, ಆತಂಕ, ಒತ್ತಡದ ಬದುಕು ಹಾಗೂ ಮಾದಕ ವಸ್ತುಗಳ ಸೇವನೆ ಮಾನಸಿಕ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತವೆ. ಉತ್ತಮ ಗೆಳೆಯರ ಸಹವಾಸ ಮಾಡಿಕೊಂಡು ಸಕಾರಾತ್ಮಕ ಯೋಚನೆಗಳನ್ನು ಬೆಳೆಸಿಕೊಂಡಲ್ಲಿ ಉತ್ತಮ ಆರೋಗ್ಯವನ್ನು ಹೊಂದಬಹುದು ಎಂದು ಡಾ.ಅಪೇಕ್ಷಾ ಹೇಳಿದರು.

ಸಂಸ್ಥೆಯ ಕಾರ್ಯಾಧ್ಯಕ್ಷೆ ಶ್ರೀಮತಿ ಶ್ರೀಲತಾ ಹೆರಂಜಲ ಮಾತನಾಡಿ, ಮಹಿಳೆಯರು ತಮ್ಮ ಸೌಂದರ್ಯಕ್ಕೆ ಕೊಡುವಷ್ಟು ಮಹತ್ವವನ್ನು ಸ್ವಚ್ಛತೆಗೂ ನೀಡಬೇಕು. ಉತ್ತಮ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರ ಮೂಲಕ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಹೊಂದಬಹುದು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ನಮ್ಮ ಸಂಸ್ಕೃತಿ, ಪರಂಪರೆ ಬೋಧಿಸಿದ ಉತ್ತಮ ಜೀವನಶೈಲಿಯಿಂದ ಉತ್ತಮ ಆರೋಗ್ಯವನ್ನು ಪಡೆಯಬಹುದು. ದುಶ್ಚಟಗಳಿಂದ ಆರೋಗ್ಯ ಹಾಳಾಗುತ್ತದೆ ಎಂಬ ಅರಿವಿದ್ದರೂ ಅವುಗಳಿಗೆ ದಾಸರಾಗುತ್ತಿರುವುದು ವಿಷಾದದ ಸಂಗತಿ. ಇಂತಹ ಜಾಗೃತಿ ಕಾರ್ಯಕ್ರಮಗಳು ಯುವಜನತೆಯಲ್ಲಿ ಪರಿವರ್ತನೆ ತರುವಲ್ಲಿ ಸಹಕಾರಿಯಾಗಬಲ್ಲವುಸ ಎಂದರು.

ನಂತರ ನಡೆದ ಸಂವಾದದಲ್ಲಿ ಹಲವಾರು ವಿದ್ಯಾರ್ಥಿನಿಯರು ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಪಡೆದುಕೊಂಡರು.

ಅಕ್ಷತಾ ಬೋಕಿ ಪ್ರಾರ್ಥಿಸಿದರು. ಸಂಯೋಜಕಿ ಶ್ವೇತಾ ಕುಲಕರ್ಣಿ ಸ್ವಾಗತಿಸಿದರು. ವಿದ್ಯಾರ್ಥಿ ಪ್ರಧಾನ ಕಾರ್ಯದರ್ಶಿ ದಿಲ್‌ಶ್ಯಾದ ನದಾಫ್ ವಂದಿಸಿದರು. ಶ್ರೀಮತಿ ಎಸ್.ಎಂ.ಜೇವೂರ ನಿರೂಪಿಸಿದರು. ಡಾ.ಎಸ್.ಎಸ್.ಹಂಗರಗಿ, ಜಂಟೀ ಕಾರ್ಯದರ್ಶಿ ಎಸ್.ಬಿ.ಪರ್ವತೀಕರ, ಮಲ್ಲಪ್ಪ ಮಸ್ಕಿ ಇದ್ದರು.

# ಲಿಂಗಾಯತ ಎಂದು ಬರೆಯಿಸಲು ಬರಗುಂಡಿ ಮನವಿ




**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.18– 22 ರಿಂದ ಆರಂಭಿವಾಗಲಿರುವ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಗಣತಿ ವೇಳೆ ಬಸವತತ್ವಪಾಲಕರೆಲ್ಲ ಧರ್ಮದ ಕಾಲಂನಲ್ಲಿ ಲಿಂಗಾಯತ ಎಂದು ಬರೆಯಿಸುವಂತೆ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಅಶೋಕ ಬರಗುಂಡಿ ಹೇಳಿದ್ದಾರೆ. ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಬಸವ ಸಂಸ್ಕೃತಿ ಪ್ರತಿಪಾದಕರು ಮೊದಲಿನಿಂದ ಸ್ವತಂತ್ರ ಲಿಂಗಾಯತ ಧರ್ಮಕ್ಕಾಗಿ ಹೋರಾಡುತ್ತಲೇ ಬಂದಿದ್ದಾರೆ. ಸಮಸಮಾಜ ಸಿದ್ದಾಂತ ಲಿಂಗಾಯತ ಸಂಸ್ಕೃತಿ. ಇದು ಎಲ್ಲರನ್ನೂ ಒಳಗೊಳ್ಳುವ ಸಂಸ್ಕೃತಿ ಆಗಿದೆ. ಲಿಂಗಾಯತ ಅಸ್ಮಿತಿ ಉಳಿಸಿಕೊಳ್ಳಲು ಗಣತಿ ವೇಳೆ ಧರ್ಮದ ಕಾಲಂನಲ್ಲಿ ಲಿಂಗಾಯತ ಎಂದು ಬರೆಯಿಸಬೇಕು ಎಂದರು.

ಬಾಗಲಕೋಟೆಯಲ್ಲಿ ಬಸವ ಸಂಸ್ಕೃತಿ ಉತ್ಸವ ಅದ್ದೂ–ರಿಯಾಗಿ ನಡೆದ ಹಿನ್ನೆಲೆಯಲ್ಲಿ, ಸಂಘಟಕರನ್ನು ಗೌರವಿಸಲು ಶೀಘ್ರ ಧನ್ಯತಾ ಸಮಾವೇಶ ನಡೆಯಲಿದೆ ಎಂದ ಅವರು, ಬೆಂಗಳೂರಿನಲ್ಲಿ ಅಕ್ಟೋಬರ 5 ರಂದು ಬಸವ ಸಂಸ್ಕೃತಿ ಅಭಿಯಾನ ಸಮಾರೋಪ ಸಮಾರಂಭ ಅರಮನೆ ಮೈದಾನದಲ್ಲಿ ಜರುಗಲಿದ್ದು, ಬಸವಣ್ಣ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ ಸರ್ಕಾರದ ಪ್ರತಿನಿಧಿಗಳಿಗೆ ಸನ್ಮಾನ ನಡೆಯಲಿದೆ ಎಂದು ಅವರು ತಿಳಿಸಿದರು.

ಬಸವರಾಜ ಕಡಪಟ್ಟಿ, ಶ್ರೀಶೈಲ ಕರಿಶಂಕರಿ, ಗುರುಬಸವ ಸಿಂಧೂರ, ಬಸವರಾಜ ಅನಗವಾಡಿ, ಶೋಭಾ ಹುಲಗಬಾಳಿ, ಗಿರಿಜಾ ಹೊಸಮನಿ ಇದ್ದರು.

# ಗ್ರಾಹಕರ ಕುಂದುಕೊರತೆ ಸಭೆ

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ,ಸೆ.18–ಕಲಬುರಗಿ ಜೆಸ್ಕಾಂ ಗ್ರಾಮೀಣ ವಿಭಾಗೀಯ ಕಚೇರಿ–2ರ ವ್ಯಾಪ್ತಿಯಲ್ಲಿ ಬರುವ ಜೇವರ್ಗಿ, ಯಡ್ರಾಮಿ, ಶಹಾಬಾದ, ಚಿತ್ತಾಪೂರ ಹಾಗೂ ಕಾಳಗಿ ಉಪವಿಭಾಗಗಳ ಜೆಸ್ಕಾಂ ಕಚೇರಿಗಳಲ್ಲಿ ಇದೇ ಸೆಪ್ಟೆಂಬರ್ 20 ಬೆಳಿಗ್ಗೆ 11 ರಿಂದ ಮಧ್ಯಾಹ್ನ 1ಗಂಟೆವರೆಗೆ ಗ್ರಾಹಕರ ಕುಂದು–ಕೊರತೆ ಸಭೆ ಹಾಗೂ ವಿದ್ಯುತ್ ಸುರಕ್ಷತಾ ದಿನದ ಕುರಿತು ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಗ್ರಾಮೀಣ ವಿಭಾಗೀಯ ಕಚೇರಿ–2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ಶಿವಕುಮಾರ್‌ಗೆ ಇರುವ ಸಾಮಾಜಿಕ ಬದ್ದತೆ ಇದೆ: ಕೆವಿ ಪ್ರಭಾಕರ್



**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು:ನೂತನವಾಗಿ ವಿಧಾನ ಪರಿಷತ್ ಸದಸ್ಯರಾಗಿ ನೇಮಕಗೊಂಡಿರುವ ಹಿರಿಯ ಪತ್ರಕರ್ತರಾದ ಕೆ.ಶಿವಕುಮಾರ್ ಅವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ(ಕೆಯುಡಬ್ಲ್ಯೂಜೆ) ವತಿಯಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕಾರ ಮಾಡಿ ಮಾತನಾಡಿದ ಅವರು, ಎಲ್ಲಾ ಪತ್ರಕರ್ತರೂ ತಮ್ಮ ವೃತ್ತಿ ಬದುಕಿನಲ್ಲಿ ಸಾಮಾಜಿಕ ಬದ್ಧತೆ–ಯ ಕಳಕಳಿಯನ್ನು ಹೊಂದುವುದು ಮುಖ್ಯ ಎಂದರು.

ಪ್ರತಿಯೊಬ್ಬ ಪತ್ರಕರ್ತರೂ ಧಮನಿತರ ಧ್ವನಿಯಾದಾಗ ಮಾತ್ರ ಸಮಾಜಕ್ಕೆ ಅಗತ್ಯವಿರುವ ನ್ಯಾಯ ಒದಗಿಸಿದಂತಾಗುತ್ತದೆ. ತಾನೂ ಕೂಡಾ ವಿಧಾನ ಪರಿಷತ್‌ನಲ್ಲಿ ಮುಂದಿನ ದಿನಗಳಲ್ಲಿ ಪತ್ರಕರ್ತರ ಗಟ್ಟಿಧ್ವನಿಯಾಗುವೆ ಕೆಲಸ ಮಾಡುವೆ ಎಂದರು.

ತಾನು ಮೊದಲಿನಿಂದಲೂ ಸಮಾಜದ ವ್ಯವಸ್ಥೆಯಲ್ಲಿ ಹೋರಾಟ ಮನೋಭಾವವನ್ನು ರೂಢಿಸಿಕೊಂಡವನು. ಆ ಕಾರಣಕ್ಕಾಗಿ ಕೆ.ಯು.ಡಬ್ಲ್ಯೂ.ಜೆ. ಜೊತೆ ದೀರ್ಘಕಾಲದ ನಂಟನ್ನು ಬೆಳೆಸಲು ಸಾಧ್ಯವಾಯಿತು. ಹಾಗಾಗಿ ಕೆ.ಯೂ.ಡಬ್ಲ್ಯೂ.ಜೆ. ಮೈಸೂರು ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷನಾಗಿ ಪತ್ರಕರ್ತರ ಶ್ರೇಯೋಭಿವೃದ್ಧಿಗಾಗಿ ದುಡಿಯಲು ನನ್ನಿಂದ ಸಾಧ್ಯವಾಗಿದೆ ಎಂದರು. ಪತ್ರಕರ್ತರು ಪ್ರಾಮಾಣಿಕರಾಗಿದ್ದರೆ, ಉತ್ತಮ ಸ್ಥಾನಮಾನಗಳು ಅವರನ್ನು ಅರಸಿ ಬರುತ್ತವೆ. ನಾನಂತೂ ನನ್ನ ಬದುಕಿನುದ್ದಕ್ಕೂ ಇದೇ ಮಾದರಿಯಲ್ಲಿ ಬಂದಿದ್ದೇನೆ. ಮುಂದೆಯೂ ಹೀಗೆಯೇ ಇರುತ್ತೇನೆ ಎಂದು ಶಿವಕುಮಾರ್ ಹೇಳಿದರು.

**ಶಿವಕುಮಾರ್‌ರಲ್ಲಿ ಸಾಮಾಜಿಕ ಬದ್ದತೆ ಇದೆ: ಕೆವಿಪಿ**

ಇದೇ ವೇಳೆ ಅಭಿನಂದನಾ ಭಾಷಣ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ. ವಿ. ಪ್ರಭಾಕರ್, ನೂತನ ವಿಧಾನ ಪರಿಷತ್ ಸದಸ್ಯರಾಗಿರುವ ಕೆ. ಶಿವಕುಮಾರ್ ಅವರು ಪತ್ರಕರ್ತರಾಗಿ ಬದ್ಧತೆಯನ್ನು ಮೆರೆದವರು ಎಂದು ಶ್ಲಾಘಿಸಿದರು.

ಸಾಮಾಜಿಕ ನ್ಯಾಯ ವ್ಯವಸ್ಥೆಯನ್ನು ತನ್ನ ಪತ್ರಿಕಾ ವೃತ್ತಿಯ ಮೂಲಕ ಓದುಗರಿಗೆ ತಲುಪಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಆ ಕಾರಣಕ್ಕಾಗಿಯೇ ವಿಧಾನ ಪರಿಷತ್ ಸದಸ್ಯರಾಗಲು ಆಯ್ಕೆಯು ಅತ್ಯಂತ ಸಮಂಜಸ ಎಂದೂ ಮುಖ್ಯಮಂತ್ರಿಗೂ ಅರಿವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ನೂತನ ವಿಧಾನ ಪರಿಷತ್ ಸದಸ್ಯ ಕೆ. ಶಿವಕುಮಾರ್ ಅವರು ಮಾನವೀಯ ಅಂತ:ಕರಣ ಹೊಂದಿದವರು. ಸಂಘದ ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷರಾಗಿ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿದಿರುವುದು ನಮಗೆಲ್ಲಾ ಹೆಮ್ಮೆಯ ವಿಷಯ ಎಂದರು.

ಕೆಯೂಡಬ್ಲ್ಯೂಜೆ ಜೊತೆಗೆ ಅವಿನಾಭಾವ ಸಂಬಂಧ ಹೊಂದಿರುವ ಶಿವಕುಮಾರ್ ಸದಾ ನಮ್ಮೆಲ್ಲರ ಧ್ವನಿಯಾಗಿ ಪರಿಷತ್‌ನಲ್ಲಿ ಇರುತ್ತಾರೆ ಎನ್ನುವುದು ಹೆಮ್ಮೆ. ಸರ್ಕಾರದ ಬದ್ಧ ನಿಲುವುಗಳ ಜೊತೆ ಪತ್ರಕರ್ತರ ಸಮಸ್ಯೆಗಳಿಗೂ ಅವರು ಸದಾ ಸ್ಪಂದಿಸುವರೆಂಬ ನಿರೀಕ್ಷೆ ಇದೆ ಎಂದರು.

ಐಡಬ್ಲ್ಯೂಜೆ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜನಯ್ಯ ಮಾತನಾಡಿ, ಪತ್ರಕರ್ತರಾಗಿ ಬದ್ಧತೆಯಿಂದ ಕೆಲಸ ಮಾಡಿದ ಸರಳ ವ್ಯಕ್ತಿತ್ವದ ಶಿವಕುಮಾರ್ ಅವರ ಜನಪರ ಕಾರ್ಯ ಶ್ಲಾಘನೀಯ ಎಂದರು.

**ಹರೀಶ್ ಗೌಡ ಅವರಿಗೆ ಅಭಿನಂದನೆ:**

ನಟ, ನಿರ್ದೇಶಕ ದ್ವಾರಕೀಶ್ ಹೆಸರಿನಲ್ಲಿ ಕೆಯುಡಬ್ಲೂಜೆಯಲ್ಲಿ ಪ್ರಶಸ್ತಿಯನ್ನು ಸ್ಥಾಪನೆ ಮಾಡಿರುವ ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಡಿ. ಹರೀಶ್ ಗೌಡ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕಾರ ಮಾಡಿ ಮಾತನಾಡಿದ ಅವರು, ಕನ್ನಡ ಚಿತ್ರೋದ್ಯಮದ ಕೀರ್ತಿ ಪತಾಕೆಯನ್ನು ಹಾರಿಸಿದ ನಟ, ನಿರ್ದೇಶಕ ದ್ವಾರಕೀಶ್ ಅವರು ಮೂಲತ: ಹುಣಸೂರಿನವರಾಗಿರುವುದರಿಂದ ಅವರ ಹೆಸರಿನಲ್ಲಿ ದತ್ತಿ ಪ್ರಶಸ್ತಿಯೊಂದನ್ನು ಸ್ಥಾಪಿಸಿರುವುದು ತನಗೆ ಬಹಳ ಸಂತಸದ ಮತ್ತು ಹೆಮ್ಮೆಯ ವಿಷಯ ಎಂದರು.

ಪತ್ರಕರ್ತರಾಗಿರುವ ಕೆ. ಶಿವಕುಮಾರ್ ಅವರು ವಿಧಾನ ಪರಿಷತ್ ಸದಸ್ಯರಾಗಿರುವುದು ಅವರ ಸೇವೆಗೆ ಸಂದ ಗೌರವ ಎಂದು ಶ್ಲಾಘಿಸಿದರು.

ರಾಜ್ಯ ವಸತಿ ಸಚಿವರ ಮಾಧ್ಯಮ ಸಲಹೆಗಾರ ಕೆ. ಲಕ್ಷ್ಮೀನಾರಾಯಣ, ವಾರ್ತಾ ಇಲಾಖೆಯ ಹಿರಿಯ ಅಧಿಕಾರಿ ಪೂರ್ಣಿಮಾ, ಹಾಸನದ ಬಿ.ಆರ್. ಉದಯಕುಮಾರ್, ವಿಜಯಪುರದ ರಶ್ಮಿ ಮತ್ತಿತರರು ಸಮಾರಂಭದಲ್ಲಿ ಮಾತನಾಡಿ ಅಭಿನಂದಿಸಿದರು.

ಕೆಯೂಡಬ್ಲ್ಯೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಸ್ವಾಗತಿಸಿದರು. ಕಾರ್ಯದರ್ಶಿ ಸೋಮಶೇಖರ ಕೆರೆಗೋಡು ವಂದಿಸಿದರು. ಕೆಯೂಡಬ್ಲ್ಯೂಜೆ ಕಾರ್ಯದರ್ಶಿ ಮತ್ತೀಕೆರೆ ಜಯರಾಂ, ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ, ಸಂಘದ ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರೂ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

# ಸಾಧನೆಗೆ ಗುರಿ, ಪರಿಶ್ರಮ ಮುಖ್ಯ–ಪ್ರೊ.ಚಳಗೇರಿ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.18–ವಿದ್ಯಾರ್ಥಿಗಳ ಸಾಧನೆಗೆ ಗುರಿ ಇರಬೇಕು. ಅದರ ಸಾರ್ಥಕತೆಗೆ ಪರಿಶ್ರಮ ಮುಖ್ಯವಾಗಿದೆ ಎಂದು ಹುನಗುಂದದ ದೈಹಿಕ ಶಿಕ್ಷಣ ನಿರ್ದೇಶಕ ಪ್ರೊ.ಎಸ್.ಬಿ.ಚಳಗೇರಿ ಹೇಳಿದರು.

ಜಿಲ್ಲೆಯ ಹುನಗುಂದ ಪಟ್ಟಣದಲ್ಲಿ ಬಾಗಲಕೋಟೆ ವಿಶ್ವವಿದ್ಯಾಲಯ ಜಮಖಂಡಿ, ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಗ್ರಾಮೀಣ ಕಲೆ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಕ್ರೀಡೆ, ಸಾಂಸ್ಕೃತಿಕ ಹಾಗೂ ಎನ್‌ಎಸ್‌ಎಸ್ ಚಟುವಟಿಕೆಗಳ ಉದ್ಘಾಟನೆ ಮತ್ತು ಬಿಎ, ಬಿಕಾಂ ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಅವರು ಮಾತನಾಡಿದರು.

ಸಾಧನೆಗೆ ಅಸಾಧ್ಯವಾದುದು ಯಾವುದು ಇಲ್ಲ, ಸಾಧನೆಯ ಬೆನ್ನತ್ತಿದರೆ ಯಶಸ್ಸು ಕಾಣಬಹುದು. ಶಿಕ್ಷಣದ ಜೊತೆಗೆ ಸದೃಢವಾದ ದೇಹವನ್ನು ಹೊಂದಿರಬೇಕು ಅದಕ್ಕಾಗಿ ಯೋಗ, ವ್ಯಾಯಾಮ ಹಾಗೂ ಸಮಗ್ರವಾದ ಶಿಕ್ಷಣ ಅವಶ್ಯಕ ಎಂದರು. ಶಿಕ್ಷಣದ ಜೊತೆಗೆ ಸಾಮಾನ್ಯ ಜ್ಞಾನವು ಬೇಕು ಮತ್ತು ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಬೇಕು ಅಂದಾಗ ಮಾತ್ರ ಯಶಸ್ಸು ಕಾಣಲು ಸಾಧ್ಯ ಎಂದು ಪ್ರೊ.ಚಳಗೇರಿ ಹೇಳಿದರು.

ಪಟ್ಟಣ ಪಂಚಾಯತ ಅಧ್ಯಕ್ಷ ಬಸವರಾಜ ಕುಂಬಳಾವತಿ ಮಾತನಾಡಿ, ಕೇವಲ ಶಿಕ್ಷಣದಿಂದ ಮುಂದಿನ ಜೀವನ ಸಾಗಿಸಲು ಸಾಧ್ಯವಿಲ್ಲ ಅದರ ಜೊತೆಗೆ ದೈಹಿಕ ಶಿಕ್ಷಣ ಬೇಕು. ಈಗಿನ ದಿನಮಾನಗಳಲ್ಲಿ ಎಲ್ಲ ತರಹದ ಶಿಕ್ಷಣ ಮತ್ತು ಭಾಷೆಗಳನ್ನು ನಾವು ಕಲಿಯಬೇಕು ಎಂದರು.

ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ಹೊಳೆ ಹುಚ್ಚೇಶ್ವರ ಶ್ರೀಗಳು, ವಿದ್ಯಾರ್ಥಿಗಳು ದುಶ್ಚಟದಿಂದ ದೂರವಿರಬೇಕು, ಆರೋಗ್ಯದ ಕಡೆ ಗಮನಹರಿಸಬೇಕು. ದೈಹಿಕ ಮತ್ತು ಮಾನಸಿಕವಾಗಿ ಸದೃಢವಾಗಿರಬೇಕು ಎಂದು ಹೇಳಿದರು. ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಸಹಕಾರ್ಯದರ್ಶಿ ವಿದ್ಯಾಧರ ಮಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಟ್ಟಣ ಪಂಚಾಯತ ಉಪಾಧ್ಯಕ್ಷೆ ನೇತ್ರಾವತಿ ನಿಂಬಲಗುಂದಿ, ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ನಿರ್ದೇಶಕರಾದ ಆರ್.ಎಸ್.ಭಾಪ್ರಿ, ಎಮ್.ಬಿ.ಶಾಬಾದಿ, ಶಿವಬಸಪ್ಪ ಗುರಿಕಾರ, ಸಂಸ್ಥೆಯ ಆಡಳಿತಾಧಿಕಾರಿ ಅನಿಲಕುಮಾರ ಕಲ್ಯಾಣಶೆಟ್ಟಿ, ಪ್ರಾಚಾರ್ಯ ಪಿ.ಎಂ. ಗುರುವಿನಮಠ, ಕ್ರೀಡೆ ಮತ್ತು ಸಾಂಸ್ಕೃತಿಕ ವಿಭಾಗ ಕಾರ್ಯಾಧ್ಯಕ್ಷ ಎಂ.ಎಂ.ಲಾಯದಗುಂದಿ, ಡಿ.ಆರ್. ಕಬಸದ, ರುಕ್ಸಾರಾ ಹಾವರಗಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಎಂ.ಎಂ.ಪಾಟೀಲ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಆರ್. ಜೆ.ಚಿತ್ತವಾಡಗಿ, ಕೆ.ಜೆ.ಅಂಗಡಿ ನಿರೂಪಿಸಿದರು. ಜೆ.ಆರ್.ಬಾದವಾಡಗಿ ವಂದಿಸಿದರು. ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಸಂಗೀತಾ ಗಡೇದಗೌಡ್ರ, ಪ್ರೀತಿ ಕಂಬಾರ ಅವರನ್ನು ಸನ್ಮಾನಿಸಲಾಯಿತು.

# ಸಂಘಟಿತಗೊಂಡರೆ ಸೌಲಭ್ಯ ಪಡೆಯಲು ಸಾಧ್ಯ–ದೊಡ್ಡನಗೌಡ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.18–ಪ್ರತಿಯೊಂದು ಸಮಾಜ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡಿ ಸಂಘಟಿತರಾದಾಗ ಮಾತ್ರ ಹಕ್ಕು ಮತ್ತು ಸೌಲಭ್ಯವನ್ನು ಪಡೆಯಲು ಸಾಧ್ಯ ಎಂದು ಮಾಜಿ ಶಾಸಕ ದೊಡ್ಡನಗೌಡ ಪಾಟೀಲ ಹೇಳಿದರು.

ಜಿಲ್ಲೆಯ ಹುನಗುಂದ ನಗರದ ಅಮರಾವತಿ ರಸ್ತೆಯಲ್ಲಿರುವ ಗುರುಭವನದಲ್ಲಿ ಹುನಗುಂದ ತಾಲೂಕ ವಿಶ್ವಕರ್ಮ ಕಟ್ಟಡ ಕಾರ್ಮಿಕ ಕಾರ್ಪೆಂಟರ್ ಸಂಘವು ಬುಧವಾರ ಹಮ್ಮಿಕೊಂಡ ವಿಶ್ವಕರ್ಮ ಪೂಜಾ ಮಹೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿ, ವಿಶ್ವಕರ್ಮ ಸಮಾಜ ಎಲ್ಲ ಸಮಾಜಕ್ಕೂ ಬೇಕಾಗಿರುವ ಸಮಾಜವಾಗಿದೆ ಎಂದರು.

ಲೇಬಗಿರಿಯ ಸರಸ್ವತಿ ಪೀಠದ ನೀಲಕಂಠ ಮಹಾಸ್ವಾಮಿಗಳು ಸಾನಿಧ್ಯವಹಿಸಿ ಮಾತನಾಡಿ, ಸರ್ವ ಸಮಾಜದ ಕೇಂದ್ರ ಬಿಂದುಗಳೇ ವಿಶ್ವಕರ್ಮ. ಸನಾತನ ಕಾಲದಿಂದಲೂ ವಿಶ್ವಕರ್ಮ ಸಮಾಜಕ್ಕೆ ಒಂದಿಲ್ಲೊಂದು ಅನ್ಯಾಯವಾಗುತ್ತಲೇ ಬಂದಿದೆ. ಸದ್ಯ ರಾಜ್ಯ ಸರ್ಕಾರ ಮಾಡುತ್ತಿರುವ ಗೊಂದಲ ಗಮನಿಸದೆ ಜಾತಿಗಣತಿಯಲ್ಲಿ ಹಿಂದೂ ವಿಶ್ವಕರ್ಮ ಅಥವಾ ವಿಶ್ವ ಬ್ರಾಹ್ಮಣ ಎಂದು ಬರೆಯಸಬೇಕೆಂದು ಸಮಾಜದವರಿಗೆ ತಿಳಿಸಿದರು.

ಗ್ರೇಡ್–2 ತಹಶೀಲ್ದಾರ ಮಹೇಶ ಸಂದಿಗವಾಡ, ನಿವೃತ್ತ ಶಿಕ್ಷಕ ಜಿ.ಎಸ್.ಪತ್ತಾರ, ಸಂಗೀತ ರಾಜ್ಯ ಪ್ರಶಸ್ತಿ ವಿಜೇತ ಚಿದಾನಂದ ಬಡಿಗೇರ ವಿಶ್ವಕರ್ಮರ ಮಹತ್ವವನ್ನು ಕುರಿತು ಮಾತನಾಡಿದರು.

ವೇದಿಕೆಯಲ್ಲಿ ವಿಶ್ವಕರ್ಮ ಸಮಾಜದ ಅಧ್ಯಕ್ಷ ತಿಪ್ಪಣ್ಣ ಕಮ್ಮಾರ, ಮುಖಂಡ ಮಹಾಂತಪ್ಪ ಚನ್ನಿ, ವಿಶ್ರಾಂತ ಶಿಕ್ಷಕ ಎಸ್.ಕೆ. ಕೊನೆಸಾಗರ, ವಿಶ್ವಕರ್ಮ ಕಟ್ಟಡ ಕಾರ್ಮಿಕರ ಕಾರ್ಪೆಂಟರ್ ಸಂಘದ ತಾಲೂಕ ಅಧ್ಯಕ್ಷ ಮೌನೇಶ ಕಮ್ಮಾರ, ಪ್ರಧಾನ ಕಾರ್ಯದರ್ಶಿ ಮೌನೇಶ ಬಡಗೇರ, ಅಖಂಡೇಶ ಪತ್ತಾರ, ನಿಂಗಪ್ಪ ಬಡಿಗೇರ, ಕಾಳಪ್ಪ ಬಡಿಗೇರ, ಬಸವರಾಜ ಬಡಿಗೇರ, ಗಂಗಾಧರ ಬಡಿಗೇರ, ಸುರೇಶ ಪತ್ತಾರ, ಪ್ರಹ್ಲಾದ ಬಡಿಗೇರ ಸೇರಿದಂತೆ ಇತರರು ಇದ್ದರು.

ಬೆಳಿಗ್ಗೆ ಗುರುಭವನದಿಂದ ವಿಶ್ವಕರ್ಮರ ಭಾವಚಿತ್ರದ ಮೆರವಣಿಗೆ ಕುಂಭಮೇಳ, ಪುರವಂತಿಕೆಯ ಸಕಲ ವಾದ್ಯ ವೈಭವದೊಂದಿಗೆ ವಿಜೃಂಭಣೆಯಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಡೆಯಿತು.

# ಸೆ.23 ರಂದು ಇಂಕ್ಯುಬೇಶನ್ ಯೋಜನೆ ಕುರಿತು ಒಂದು ದಿನದ ಜಾಗೃತಿ ಕಾರ್ಯಾಗಾರ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.18 –ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಮತ್ತು ಜಿಲ್ಲಾ ಕೈಗಾರಿಕಾ ಕೇಂದ್ರ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ಇಂಕ್ಯುಬೇಶನ್ ಯೋಜನೆಯ ಕುರಿತು ಸೆ.23 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕಂಟೋನ್‌ಮೆಂಟ್‌ನ ರಾವ್ ಬಹದ್ದೂರ್ ವೈ ಮಹಾಬಳೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜ್ ಸಭಾಂಗಣದಲ್ಲಿ ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್ ಅವರು ತಿಳಿಸಿದ್ದಾರೆ.

ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳು ಮತ್ತು ಉದ್ಯಮಿಗಳಲ್ಲಿ ಹಣಕಾಸು, ತಾಂತ್ರಿಕ ಮತ್ತು ಮಾರ್ಗದರ್ಶನ ಬೆಂಬಲದ ಕುರಿತು ಜಾಗೃತಿ ಮೂಡಿಸಲಾಗುತ್ತದೆ. ಇದು ಇನ್‌ಕ್ಯುಬೇಶನ್ ಸೌಲಭ್ಯಗಳನ್ನು ಪ್ರದರ್ಶಿಸುತ್ತದೆ. ಯಶಸ್ಸಿನ ಕಥೆಗಳನ್ನು ಹಂಚಿಕೊಳ್ಳುತ್ತದೆ ಮತ್ತು ನೆಟ್ ವರ್ಕಿಂಗ್‌ಗಾಗಿ ತಜ್ಞರು, ಅಧಿಕಾರಿಗಳು ಮತ್ತು ಉದ್ಯಮಿಗಳೊಂದಿಗೆ ಸಂಪರ್ಕ ಸಾಧಿಸಲು ಅವಕಾಶಗಳನ್ನು ಒದಗಿಸಿಕೊಡುತ್ತದೆ.

ಹಾಗಾಗಿ ಆಸಕ್ತ ವಿದ್ಯಾರ್ಥಿಗಳು, ಉದ್ದಿಮೆದಾರರು ಕಾರ್ಯಾಗಾರಲ್ಲಿ ಭಾಗವಹಿಸಬಹುದು ಎಂದು ಅವರು ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:8073731722

**CITATION**
**IN THE COURT OF THE PRL. CIVIL JUDGE AND JMFC., AT HUMNABAD**
**CRL. MISC. NO.1604/2025**

Petitioners :-

P-1 Jagadevi Wo Late Sangappa Age 57 Yrs Ro Muttangi Advocate- SUBHASHRAO KUNDAN

2) P-2 Raj Kumar So Late Sangappa Age 29 Yrs Ro Muttangi

Respondent:-

The Registrar of Birth and Death through the Tahsildar Chitguppa.

Sub: Petition U/Sec 13(3) of Birth and Death Registration Act 1969

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate of Husband of petitioner No.1 and Father of petitioner No.2, namely; Sangappa S/o Siddappa, who is died on 02-05-2002 at Village Muttangi Tq: Chitguppa Dist: Bidar. The petitioners claiming the death certificate of said Sangappa S/o Siddappa, for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 15.10.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 16-09-2025

//By order of the court//
(Mahananda Mathapati)
Chief Ministerial Officer,
Prl. Civil Judge and JMFC court
Humnabad

# ಮತಕಳ್ಳತನ ಪತ್ತೆ ಹಚ್ಚಲು ಕಾಂಗ್ರೆಸ್ ಪ್ರಚಾರ ಸಮಿತಿ ಸಿದ್ಧ:ಮಾಜಿ ಸಚಿವ ಸೊರಕೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 18 : ರಾಜ್ಯದಲ್ಲಿ ಮತಕಳ್ಳತನ ನಡೆದಿರುವುದು ಜಗಜ್ಜಾಹಿರವಾಗಿದ್ದು, ಇದಕ್ಕೆ ಕಳೆದ ವರ್ಷ ನಡೆದ ಲೋಕಸಭೆ ಚುನಾವಣೆಯಲ್ಲಿ ಮಹಾದೇವಪುರ ವಿಧಾನಸಭೆ ಕ್ಷೇತ್ರದಲ್ಲಿ ಒಂದು ಲಕ್ಷಕ್ಕೂ ಅಧಿಕ ಮತದಾರರು ಪತ್ತೆ ಹಚ್ಚಲಾಗಿದೆ. ರಾಜ್ಯದ ಇತರೆಡೆಗಳಲ್ಲಿ ಇಂಥ ಘಟನೆ ನಡೆದಿದ್ದು, ಅದನ್ನು ಪತ್ತೆ ಹಚ್ಚುವ ಕೆಲಸ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪ್ರಚಾರ ಸಮಿತಿ ಮಾಡಲಿದೆ ಎಂದು ಕೆ.ಪಿ.ಸಿ.ಸಿ ಪ್ರಚಾರ ಸಮಿತಿ ರಾಜ್ಯಾಧ್ಯಕ್ಷರು ಹಾಗೂ ಮಾಜಿ ಸಚಿವ ವಿನಯಕುಮಾರ ಸೊರಕೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿಉದ್ದೇಶಿಸಿ ಮಾತನಾಡಿರುವ ಅವರು, ಕಳೆದ ವರ್ಷ ಮಹಾರಾಷ್ಟ್ರದಲ್ಲಿ ನಡೆದ ವಿಧಾನ ಸಭೆ ಚುನಾವಣೆಯಲ್ಲಿ ಮತಗಳ್ಳತನ ನಡೆದಿರುವುದಕ್ಕೆ ಅನೇಕ ಸಾಕ್ಷಾಧಾರಗಳು ದೊರೆತಿವೆ. ತಾನು ಮಹಾರಾಷ್ಟ್ರದ ಸಾತಾರಾ ಜಿಲ್ಲೆಯ ಚುನಾವಣೆ ಉಸ್ತುವಾರಿ ಆಗಿದ್ದಾಗೂ ಅಲ್ಲಿ ಬೋಗಸ್ ಮತದಾರರ ಯಾದಿ ಕಂಡು ಬಂದಿತ್ತು.

ಈ ವರ್ಷ ಬಿಹಾರದಲ್ಲಿ ಚುನಾವಣೆ ನಡೆಯುತ್ತಿದ್ದು, ನಮ್ಮ ನಾಯಕರಾದ ರಾಹುಲ ಗಾಂಧಿಯವರು ಸುಮಾರು 800 ಕಿ.ಮೀಟರ್ ಪಾದಯಾತ್ರೆ ಹಮ್ಮಿಕೊಂಡು ಮತಗಳ್ಳತನದ ಕಡಿವಾಣಕ್ಕಾಗಿ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆಂದು ಸ್ಪಷ್ಟಪಡಿಸಿದರು.

ನಮ್ಮ ರಾಜ್ಯದಲ್ಲಿ ಮುಂಬರುವ ಜಿಲ್ಲಾ ಪಂಚಾಯತಿ ಹಾಗೂ ತಾಲೂಕು ಪಂಚಾಯತಿ ಚುನಾವಣೆಯಲ್ಲಿ ಎಲೆಕ್ಟ್ರಾನಿಕ್ ಮತಯಂತ್ರ ಬದಲು ಬ್ಯಾಲೆಟ್ ಪೇಪರ್ ಮೂಲಕವೇ ಮತದಾನ ಮಾಡಲು ನಮ್ಮ ಸರ್ಕಾರ ಮುಂದಾಗಿದೆ. ಇದಕ್ಕಾಗಿ ಜಿಲ್ಲಾ ಹಾಗೂ ಬ್ಲಾಕ್ ಮಟ್ಟದಲ್ಲಿ 23 ಜನ ಕಾರ್ಯಕರ್ತರ ತಂಡ ರಚಿಸಲಾಗುತ್ತಿದೆ. ಬ್ಲಾಕ್ ಮಟ್ಟದ ಸಮಿತಿಗಳಲ್ಲಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿನ ಎಲ್ಲ ಸಮುದಾಯಗಳ ಕಾರ್ಯಕರ್ತರನ್ನು ನೇಮಿಸಿಕೊಳ್ಳಲಾಗುತ್ತದೆ. ಅದರಲ್ಲಿ ಮಹಿಳೆಯರು ಸೇರಿದಂತೆ ಎಲ್ಲ ವರ್ಗದವರಿಗೆ ಆದ್ಯತೆ ನೀಡಲಾಗುತ್ತದೆ. ಪ್ರಾಂತವಾರು ಕಾರ್ಯಕರ್ತರನ್ನು ಸಹ ಗಣನೆಗೆ ತೆಗೆದುಕೊಳ್ಳಲಾಗುತ್ತದೆ.

ರಾಜ್ಯದಲ್ಲಿ ಒಟ್ಟು 59 ಸಾವಿರ ಬುತ್‌ಗಳಿದ್ದು, ಪ್ರತಿ ಬೂತ್‌ನಿಂದ ತಲಾ ಇಬ್ಬರು ಕಾರ್ಯಕರ್ತರನ್ನು ನೇಮಿಸಿ ಅವರನ್ನು ಡಿಜಿಟಲ್ ಯುತ್ ಎಂದು ಕರೆಯಲಾಗುತ್ತದೆ. ರಾಜ್ಯದಲ್ಲಿ ಸುಮಾರು ಒಂದು ಲಕ್ಷಕ್ಕೂ ಅಧಿಕ ಡಿಜಿಟಲ್ ಯುತ್‌ಗಳು ಪಕ್ಷದ ಸಾಮಾಜಿಕ ಜಾಲತಾಣ ಕಾರ್ಯನಿರ್ವಹಿಸುವರು. ಪ್ರಚಾರ ಸಮಿತಿಯಿಂದ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ವಿಶೇಷ ತರಬೇತಿ ನೀಡುವ ಉದ್ದೇಶ ಹೊಂದಿದ್ದೇವೆ. ಒಟ್ಟಾರೆ ನಮ್ಮ ಸಮಿತಿ ಕೇವಲ ಚುನಾವಣೆಗೆ ಸೀಮಿತವಾಗಿರದೆ ಇಡೀ 5 ವರ್ಷ ಪ್ರಚಾರ ಕಾರ್ಯ ಮಾಡುತ್ತದೆ. ಈಲ್ಲಾ ಮಟ್ಟದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರೆ ಪ್ರಚಾರ ಸಮಿತಿಯ ಅಧ್ಯಕ್ಷರಾಗಿದ್ದಾರೆ. ಹಾಗಾಗಿ ಜಿಲ್ಲೆಯಲ್ಲಿ ಹಾಗೂ ಆಯಾ ಬ್ಲಾಕ್ ಮಟ್ಟದಲ್ಲಿ ಸಾರ್ವಜನಿಕರಿಗೆ ಗ್ಯಾರಂಟಿ ಯೋಜನೆಗಳ ಬಗ್ಗೆ ಪ್ರಚಾರ ಹಾಗೂ ಜಾಗೃತಿ ಮೂಡಿಸುವ ಕಾರ್ಯ ಮಾಡುತ್ತಿದ್ದೇವೆ ಎಂದರು.

ನಾವು ಗ್ಯಾರಂಟಿ ಯೋಜನೆ ಜಾರಿಗೆ ತಂದಾಗ ವಿರೋಧ ಪಕ್ಷದವರು ಬಹಳಷ್ಟು ಟೀಕೆ ಟಿಪ್ಪಣಿ ಮಾಡಿದರು. ಆದರೆ ಕಳೆದ ವರ್ಷ ಮುಖ್ಯಮಂತ್ರಿ ಸಿದ್ಧರಾಮಯ್ಯನವರು 4.9 ಲಕ್ಷ ಕೋಟಿ ಬಜೆಟ್ ಮಂಡಿಸುವ ಮೂಲಕ ವಿರೋಧ ಪಕ್ಷದವರಿಗೆ ಉತ್ತರ ನೀಡಿದ್ದಾರೆ. ಅದರಲ್ಲಿ 55 ಸಾವಿರ ಕೋಟಿ ಗ್ಯಾರಂಟಿಗಾಗಿ ವಿನಿಯೋಗಿಸಿ, ಉಳಿದ ಹಣ ಅಭಿವೃದ್ಧಿಗಾಗಿ ವಿನಿಯೋಗಿಸಲಾಗಿದೆ. ಕೇಂದ್ರ ಸರ್ಕಾರ ಘೋಷಿಸಿರುವಂತೆ ತಲಾ ಆದಾಯದಲ್ಲಿ 2.4 ಲಕ್ಷ ತಲಾ ಆದಾಯ ತೋರಿಸಿದೆ. ಇದು ಇಡೀ ದೇಶದಲ್ಲೆ ನಂರ್ವನ್ ಆಗಿ ಕಂಡು ಬಂದಿದೆ. ಜಿ.ಡಿ.ಪಿಯಲ್ಲಿ 8, ವಿದೇಶಿ ಬಂಡವಾಳ ಹುಡಿಕೆಯಲ್ಲಿ ಇಡೀ ದೇಶದಲ್ಲಿ ಮೂರನೇ ಸ್ಥಾನದಲ್ಲಿರುವುದು ಹೆಮ್ಮೆ ಹಾಗೂ ಅಭಿಮಾನದ ಸಂಗತಿ. ಇಷ್ಟೆಲ್ಲ ಬೆಳವಣಿಗೆ ಕಂಡರೂ ಬಿಜೆಪಿಯವರಿಗೆ ನಮ್ಮನ್ನು ವಿರೋಧಿಸುವುದೇ ಒಂದು ಕೆಲಸವಾಗಿ ಬಿಟ್ಟಿದೆ ಎಂದು ಕುಟುಕಿದರು.

ಕೆ.ಪಿ.ಸಿ.ಸಿ ಪ್ರಚಾರ ಸಮಿತಿಯ ಉಪಾಧ್ಯಕ್ಷ ಭೀಮಣ್ಣ ಮೇಟಿ, ಗ್ಯಾರಂಟಿ ಯೋಜನೆ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡೆ, ಭಾಲ್ಕಿ ಬ್ಲಾಕ್ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಹಣಮಂತರಾವ ಚವ್ಹಾಣ, ಬೂಡಾ ಸದಸ್ಯ ಮಹಮ್ಮದ್ ಸಮಿ, ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಾರ್ಜ್ ಫರ್ನಾಂಡಿಸ್ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಮಹಿಳಾ ಸಮುದಾಯದ ನೋವಿಗೆ ಮಿಡಿದ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆ18: ರಾಯಚೂರ ಪ್ರವಾಸದಲ್ಲಿರುವ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಅವರು ಸೆ.17ರಂದು ಮೊದಲ ದಿನದ ಪ್ರವಾಸದ ನಾನಾ ಕಾರ್ಯಕ್ರಮಗಳ ಮಧ್ಯೆ ಮಹಿಳೆಯರ ನೋವಿಗೆ ಆತ್ಮೀಯ ಸ್ಪಂದನೆ ನೀಡಿದರು.

ಬೆಳಗ್ಗೆ ಕಾಲೇಜೊಂದರಲ್ಲಿ ಸಂವಾದ ನಡೆಸಿ, ನಂತರ ನಗರದ ಎಂಸಿಎಚ್ ಆಸ್ಪತ್ರೆಗೆ ಹೊರಡುವಾಗ ದಾರಿ ಮಧ್ಯೆ ವಾಹನ ನಿಲ್ಲಿಸಿ, ಶಕ್ತಿನಗರಕ್ಕೆ ಹೊರಡುವ ರಸ್ತೆ ಬದಿಯಲ್ಲಿ ಕುಳಿತಿದ್ದ ವಯೋವೃದ್ದೆ ಬಳಿ ತೆರಳಿ ಅವರ ಯೋಗಕ್ಷೇಮ ವಿಚಾರಿಸಿದರು. 'ನನಗೆ ಹಲ್ಲು ನೋವು ಇದೆ, ಕಣ್ಣು ಕಾಣಿಸುತ್ತಿಲ್ಲ' ಎಂದು ಅಜ್ಜಿಯು ತಿಳಿಸಿದರು. 'ನಾನು ವೈದ್ಯೆ ಸಹ ಇದ್ದೀನಿ. ನನಗೆ ತಿಳಿಯುತ್ತದೆ' ಎಂದು ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು ಆ ವಯೊವೃದ್ಧೆಯ ಕಣ್ಣು, ಹಲ್ಲುಗಳ ಪರೀಕ್ಷಿಸಿದರು. 'ನಿನಗೆ ಆಸ್ಪತ್ರೆಗೆ ದಾಖಲಿಸುತ್ತೇನೆ' ಎಂದು ಅವಳಿಗೆ ಎಳೆನೀರು ನೀಡಿ, ತಾವು ಸಹ ಎಳೆನೀರು ಸೇವಿಸಿ ಆಸ್ಪತ್ರೆಯತ್ತ ಸಾಗಿದರು.

ಸಖಿ ಸೆಂಟರನಲ್ಲಿ ಸ್ಪಂದನೆ: ಎಂಸಿಎಚ್ ಆಸ್ಪತ್ರೆಯಿಂದ ಸಖಿ ಒನ್ ಸ್ಟಾಪ್ ಸೆಂಟರಗೆ ಆಗಮಿಸಿ ಪರಿಶೀಲನೆ ನಡೆಸುವ ವೇಳೆ, ರಾಯಚೂರ ಜಿಲ್ಲೆಯ ಹೊಸೂರ ಗ್ರಾಮದ ಸಂಗೀತಾ ಎನ್ನುವ ಮಹಿಳೆಯೊಬ್ಬರು ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರ ಬಳಿ ಬಂದು, 'ನನ್ನ ಪತಿಯಿಂದ ನನಗೆ ಮೋಸವಾಗಿದೆ.. ನನಗೆ ನ್ಯಾಯ ಕೊಡಿಸಿ' ಎಂದು ಕಣ್ಣೀರು ಹಾಕಿದರು. ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು, ಅವರ ಕಣ್ಣೀರು ಒರೆಯಿಸಿ, ಅಪ್ಪಿಕೊಂಡು ಸಾಂತ್ವನ ಹೇಳಿದರು. ಸಂಗೀತಾ ಅವರ ಸಂಪರ್ಕ ಸಂಖ್ಯೆ ಪಡೆದು–ಕೊಂಡರು.

ರಿಮ್ಸನಲ್ಲಿ ಸ್ಪಂದನೆ: ಸಖಿ ಒನ್ ಸ್ಟಾಪ್ ಸೆಂಟರನಿಂದ ರಿಮ್ಸ್ ಆಸ್ಪತ್ರೆಗೆ ತೆರಳಿ ವಿವಿಧ ವಾರ್ಡಗಳ ಪ್ರವೇಶಿಸಿ ಪರಿಶೀಲನೆ ನಡೆಸುವ ವೇಳೆಯಲ್ಲಿ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು ರೋಗಿ ಸಂಬಂಧಿಕರ ಬಳಿಯಲ್ಲಿ ಕುಳಿತು, 'ಏನವ್ವ.. ಯಾವ ಊರಿಂದ ಬಂದಿದ್ದೀರಿ ನೀವು.. ಊಟ ಮಾಡ್ರವ್ವ.. ನನಗು ಹಸುವಾಗಿದೆ ಕಣವ್ವ..ಬೆಳಗ್ಗೆಯಿಂದ ಏನೂ ತಿಂದಿಲ್ಲ..

ರೊಟ್ಟಿ ತಿನ್ರಾ' ಎಂದು ಹೇಳುತ್ತ ರೋಗಿಯೊಬ್ಬರ ಸಂಬಂಧಕರಿಂದ ಎರಡು ಬಾರಿ ಕೈತುತ್ತು ಪಡೆದರು.

ಆ ಜಾತಿ, ಈ ಜಾತಿ ಎಂದು ಬೇಧ–ಭಾವ ಮಾಡುವುದು ಈ ಕಾಲಕ್ಕೂ ನಿಲ್ಲುತ್ತಿಲ್ಲ.

ನೊಂದುಬರುವ ಎಲ್ಲ ಮಹಿಳೆಯರಿಗೂ ಸ್ಪಂದಿಸಿ, ಆತ್ಮೀಯವಾಗಿ ಮಾತನಾಡಿಸಿ, ಅಪ್ಪಿಕೊಂಡು ಧೈರ್ಯ ಹೇಳುವ, ಸಾಂತ್ವನ ಹೇಳುವ, ಅವರ ಬಳಿ ಕುಳಿತು ಊಟ

ಮಾಡುವ ನಿಮ್ಮ ನಡೆ ಇಡೀ ಮಹಿಳಾ ಸಮುದಾಯಕ್ಕೆ ಮಾದರಿಯಾಗಿದೆ ಎಂದು ಇದೆ ವೇಳೆ ಮುಖಂಡರಾದ ಶ್ರೀದೇವಿ ನಾಯಕ ಅವರು ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮುಖಂಡರಾದ ಶ್ರೀದೇವಿ ಶ್ರೀನಿವಾಸ, ಈರಮ್ಮ ಗುಂಜಳ್ಳಿ, ಮಂಜುಳಾ ಅಮರೇಶ, ವಂದನಾ ಶಿವಕುಮಾರ, ಪ್ರತಿಭಾ ರೆಡ್ಡಿ, ಲಕ್ಷ್ಮಿ ಹಾಗೂ ಇನ್ನಿತರರು ಇದ್ದರು.

# ಸರ್ಕಾರದ ಸೌಲಭ್ಯ ನೀಡದೆ ಕರ್ತವ್ಯ ಲೋಪ ಹಾಗೂ ಭ್ರಷ್ಟಾಚಾರ ಆರೋಪ: ಉಪ ಲೋಕಾಯುಕ್ತರಿಂದ ಸ್ವಯಂ ಪ್ರೇರಿತ ದೂರು ದಾಖಲು




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಸೆ.18: ಜಿಲ್ಲೆಯ ನಿವೃತ್ತ ಯೋಧರು ಹಾಗೂ ಹುತಾತ್ಮ ಯೋಧರ ಅವಲಂಬಿತರಿಗೆ ಮತ್ತು ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಅವರ ಅವಲಂಬಿತರಿಗೆ ನಿಯಮಾನುಸಾರ ಸರ್ಕಾರದ ಸೌಲಭ್ಯ ನೀಡದೇ ಕರ್ತವ್ಯ ಲೋಪ ಎಸಗುತ್ತಿರುವ ದೂರು ಬಂದ ಹಿನ್ನೆಲೆಯಲ್ಲಿ ದೂರಿನಲ್ಲಿ ಸಾರ್ವಜನಿಕ ಹಿತಾಸಕ್ತಿ ಇದ್ದು, ಈ ಬಗ್ಗೆ ಕೂಲಂಕುಷವಾದ ತನಿಖೆಯ ಅವಶ್ಯಕತೆ ಇರುವುದರಿಂದ ಇದ–ಕ್ಕೆ ಸಂಬಂಧಿಸಿದಂತೆ ಜಿಲ್ಲೆಯ ಅಧಿಕಾರಿಗಳ ಮೇಲೆ ಕರ್ನಾಟಕ ಲೋಕಾಯುಕ್ತದ ಗೌರವಾನ್ವಿತ ಉಪ ಲೋಕಾಯುಕ್ತರಾದ ನ್ಯಾ. ಬಿ ವೀರಪ್ಪ ರವರು ಸ್ವಯಂಪ್ರೇರಿತ ದೂರು ದಾಖಲು ಮಾಡಿಕೊಂಡಿದ್ದಾರೆ.

ಕೊಪ್ಪಳ ಜಿಲ್ಲೆಯಲ್ಲಿ ನಿವೃತ್ತರಾದ ಯೋಧರಿಗೆ ಹಾಗೂ ಹುತಾತ್ಮ ಯೋಧರ ಅವಲಂಬಿತರಿಗೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರಿಗೆ ಹಾಗೂ ಅವರ ಅವಲಂಬಿತರಿಗೆ ನಿಯಮಾನುಸಾರ ಸರ್ಕಾರದಿಂದ ದೊರೆಯಬೇಕಾದ ನಿವೇಶನವನ್ನು ನಿಗದಿತ ಸಮಯದಲ್ಲಿ ನೀಡದೆ ಸರ್ಕಾರಿ, ಸಾರ್ವಜನಿಕ ನೌಕರ, ಅಧಿಕಾರಿಗಳು ಭ್ರಷ್ಟಾಚಾರ ನಡೆಸುತ್ತಿರುವುದು ಹಾಗೂ ಸಂವಿಧಾನಾತ್ಮಕವಾಗಿ ನೀಡಬೇಕಾದ ಪರಿಹಾರವನ್ನು (ಜಮೀನು) ಕಲ್ಪಿಸುವ ನಿರ್ಲಕ್ಷ ಮತ್ತು ವಿಳಂಬ ಧೋರಣೆ ತೋರಿದ ಆರೋಪವು ಕೇಳಿಬಂದಿರುತ್ತದೆ. ಈ ಬಗ್ಗೆ ಕರ್ತವ್ಯಲೋಪ ಎಸಗುತ್ತಿರುವುದು ಮೇಲ್ನೋಟಕ್ಕೆ ಕಂಡುಬಂದಿತ್ತು, ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಸಕಾಲದಲ್ಲಿ ಕಲ್ಪಿಸುವ ಸರ್ಕಾರದ ವಿವಿಧ ಇಲಾಖೆಗಳಿಂದ ಪೂರಕ ಸ್ಪಂದನೆ ದೊರೆಯದೆ ಇರುವುದು ಲೋಕಾಯುಕ್ತ ಕಾಯ್ದೆಯಡಿ ದುರಾಡಳಿತ ವ್ಯಾಪ್ತಿಗೆ ಒಳಪಡುವುದರಿಂದ ಸ್ವಯಂಪ್ರೇರಿತ ದೂರು ದಾಖಲು ಮಾಡಿಕೊಂಡಿರುತ್ತಾರೆ. ಈ ಆರೋಪದ ಹಿನ್ನೆಲೆಯಲ್ಲಿ ಕೊಪ್ಪಳ ಉಪ ವಿಭಾಗಾಧಿಕಾರಿ ಮಹೇಶ್ ಮಾಲಗಿತ್ತಿ, ಕೊಪ್ಪಳ ತಹಶೀಲ್ದಾರ ವಿಠ್ಠಲ್ ಚೌಗಲಾ, ಗಂಗಾವತಿ ತಹಶೀಲ್ದಾರ ಯು. ನಾಗರಾಜ, ಕುಷ್ಟಗಿ ತಹಶೀಲ್ದಾರ ಅಶೋಕ ಎಸ್. ಶಿಗ್ಗಾವಿ, ಯಲಬುರ್ಗಾ ತಹಶೀಲ್ದಾರ ಬಸವರಾಜ, ಕಾರಟಗಿ ತಹಶೀಲ್ದಾರ ಕುಮಾರಸ್ವಾಮಿ, ಕನಕಗಿರಿ ತಹಶೀಲ್ದಾರ ವಿಶ್ವನಾಥ ಮುರಡಿ, ಕುಕನೂರು ತಹಶೀಲ್ದಾರ ಪ್ರಾಣೇಶ ಇವರ ಮೇಲೆ ಉಪಲೋಕಾಯುಕ್ತರು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿದ್ದಾರೆ. ಸರ್ಕಾರದ ಆದೇಶಗಳು, ಸುತ್ತೋಲೆಗಳು ಹಾಗೂ ಕಾನೂನಿನ್ವಯ, ನಿವೃತ್ತರಾದ ಯೋಧರಿಗೆ ಹಾಗೂ ಹುತಾತ್ಮ ಯೋಧರು ಅವಲಂಬಿತರಿಗೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರಿಗೆ ಹಾಗೂ ಅವರ ಅವಲಂಬಿತರಿಗೆ ನಿಯಮಾನುಸಾರ ಸರ್ಕಾರದಿಂದ ದೊರೆಯಬೇಕಾದ ಸೌಲಭ್ಯಗಳನ್ನು ಹಾಗೂ ನಿವೇಶನವನ್ನು ನೀಡುವಂತೆ ಗೌರವಾನ್ವಿತ ಉಚ್ಚ ನ್ಯಾಯಾಲಯದ ಆದೇಶಗಳು ಇದ್ದರೂ ಸಹ ಸರ್ಕಾರಿ ನೌಕರರು ತಮ್ಮ ಕರ್ತವ್ಯ ಪ್ರಜ್ಞೆಯನ್ನು ಮರೆತು, ನಿವೃತ್ತರಾದ ಯೋಧರಿಗೆ ಹಾಗೂ ಹುತಾತ್ಮ ಯೋಧರ ಅವಲಂಬಿತರಿಗೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರಿಗೆ ಹಾಗೂ ಅವರ ಅವಲಂಬಿತರಿಗೆ ನಿಯಮಾನುಸಾರ ಸರ್ಕಾರದಿಂದ ದೊರೆಯಬೇಕಾದ ಸೌಲಭ್ಯಗಳನ್ನು ಹಾಗೂ ನಿವೇಶನವನ್ನು ನೀಡಲು ಯಾವುದೇ ಕ್ರಮ ಕೈಗೊಳ್ಳದೆ ತೆ–ೂಂದರೆ ನೀಡುತ್ತಿರುವುದು ವಿಷಾದಕರ. ದೇಶವನ್ನು ರಕ್ಷಿಸಲು ಪ್ರಾಣ ನೀಡಿದ ಹಾಗೂ ತಮ್ಮ ಅಂಗಾಂಗಗಳನ್ನು ಕಳೆದುಕೊಂಡ ಯೋಧರಿಗೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ನೀಡುವುದು ಎಲ್ಲಾ ಭಾರತೀಯರ ಕರ್ತವ್ಯವಾಗಿರುತ್ತದೆ ಹಾಗೂ ನಮ್ಮ ನಿವೃತ್ತ ಹಾಗೂ ಹುತಾತ್ಮ ಯೋಧರಿಗೆ, ಸ್ವಾತಂತ್ರ್ಯ ಹೋರಾಟಗಾರರಿಗೆ ಮತ್ತು ಅವರ ಅವಲಂಬಿತರಿಗೆ ಅವಮಾನ ಮಾಡಿ ಅಗೌರವ ಉಂಟು ಮಾಡುತ್ತಿರುವುದು ಕಂಡುಬಂದಿದುÝundefined ಈ ಕುರಿತು ಗೌರವಾನ್ವಿತ ಉಪ ಲೋಕಾಯುಕ್ತರು ತನಿಖೆ ನಡೆಸುವರು ಎಂದು ಕರ್ನಾಟಕ ಲೋಕಾಯುಕ್ತದ ಕೊಪ್ಪಳ ಕಚೇರಿಯ ಪ್ರಕಟಣೆ ತಿಳಿಸಿದೆ.

# ನಾರಾಯಣ ಗುರು ಈಡಿಗ ನಿಗಮ ಶೀಘ್ರದಲ್ಲೇ ಕಾರ್ಯಾರಂಭ:ಸೊರಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಸೆ.18: ರಾಜ್ಯದಲ್ಲಿರುವ ಪ್ರಮುಖ ಈಡಿಗ ಬಿಲ್ಲವ ಸೇರಿದಂತೆ 26 ಪಂಗಡಗಳ ಕಲ್ಯಾಣಕ್ಕಾಗಿ ಘೋಷಣೆ ಮಾಡಿದ ನಾರಾಯಣ ಗುರು ಈಡಿಗ ನಿಗಮ ಶೀಘ್ರದಲ್ಲೇ ಕಾರ್ಯಾರಂಭ ಮಾಡಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ ಎಂದು ಮಾಜಿ ಸಚಿವರು ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ಅಧ್ಯಕ್ಷರಾದ ವಿನಯ್ ಕುಮಾರ್ ಸೊರಕೆ ತಿಳಿಸಿದರು.

ಕಲಬುರಗಿಗೆ ಪಕ್ಷದ ಕಾರ್ಯ ನಿಮಿತ್ತ ಸೆಪ್ಟೆಂಬರ್ 18ರಂದು ಆಗಮಿಸಿದ ಅವರನ್ನು ಬ್ರಹ್ಮಶ್ರೀ ನಾರಾಯಣ ಗುರು 171ನೇ ಜಯಂತಿ ಉತ್ಸವದ ಜಿಲ್ಲಾಧ್ಯಕ್ಷರಾದ ಡಾ. ವಿನಯ್ ಗುತ್ತೇದಾರ್ ಗಾರಂಪಳ್ಳಿ ಅವರ ನೇತೃತ್ವದಲ್ಲಿ ಭೇಟಿಯಾದ ಈಡಿಗ, ಬಿಲ್ಲವ ನಿಯೋಗಕ್ಕೆ ಭರವಸೆ ನೀಡಿ ಮಾತನಾಡಿದ ಅವರು ಇತ್ತೀಚೆಗಷ್ಟೇ ನಡೆದ ನಾರಾಯಣಗುರು ಜಯಂತಿ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಈಡಿಗ ನಿಗಮ ಸ್ಥಾಪನೆಗಾಗಿ ಈಗಾಗಲೇ ದೇವರಾಜ್ ಅರಸು ನಿಗಮದಲ್ಲಿ 10 ಕೋಟಿ ರೂಪಾಯಿಯನ್ನು ಮೀಸಲಿಡಲಾಗಿದೆ ಜೊತೆಗೆ ನಿಗಮವನ್ನು ಕಂಪನಿ ಕಾಯ್ದೆ ಅಡಿಯಲ್ಲಿ ನೋಂದಣಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು ಶೀಘ್ರದಲ್ಲೇ ಅದು ಮುಗಿದ ನಂತರ ನಿಗಮದ ಅಧ್ಯಕ್ಷರು ನಿರ್ದೇಶಕರ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಅದರೊಂದಿಗೆ ಸಮಾಜದವರಿಗೆ ಒಂದು ವೈದ್ಯಕೀಯ ಕಾಲೇಜನ್ನು ನೀಡಲು ಚಿಂತನೆ ನಡೆಸಿರುವುದಾಗಿ ತಿಳಿಸಿದ್ದಾರೆ. ಇದರಿಂದಾಗಿ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ನೀಡಿದ ಭರವಸೆ ಶೀಘ್ರದಲ್ಲಿ ಕೈಗೂಡಲಿದೆ ಎಂದು ಸೊರಕೆ ಹೇಳಿದರು.

ನಿಗಮ ಸ್ಥಾಪನೆಯ ಮುಖ್ಯ ಗುರಿ ರಾಜ್ಯದಲ್ಲಿರುವ ಈಡಿಗ ಸೇರಿದಂತೆ 26 ಪಂಗಡಗಳ ಸಮಗ್ರ ಕಲ್ಯಾಣದ ದೃಷ್ಟಿಯಿಂದ ವಿವಿಧ ಯೋಜನೆಗಳನ್ನು ಹಮ್ಮಿಕೊಳ್ಳಲು ಕೇವಲ ಹತ್ತು ಕೋಟಿ ಅಲ್ಲದೆ ಇನ್ನಷ್ಟು ಆರ್ಥಿಕ ನೆರವು ನೀಡಲು ಕೂಡ ಒತ್ತಾಯಿಸಲಾಗುವುದು. ಇದಕ್ಕಾಗಿ ಶೀಘ್ರದಲ್ಲೇ ಮುಖ್ಯಮಂತ್ರಿಗಳನ್ನು ಭೇಟಿಯಾಗಿ ಚರ್ಚಿಸಿ ಸಂಬಂಧಪಟ್ಟವರು ಕೂಡಲೇ ಕ್ರಮ ಕೈಗೊಳ್ಳುವಂತೆ ಆಗ್ರಹಪಡಿಸಲಾಗುವುದು .ಇದರ ಬಗ್ಗೆ ಪ್ರಗತಿಯನ್ನು ತಿಳಿಸುವುದಾಗಿ ಡಾ. ವಿನಯ್ ಗುತ್ತೇದಾರ್ ಗಾರಂಪಳ್ಳಿಯವರಿಗೆ ಭರವಸೆ ನೀಡಿದರು.

ಈಗಾಗಲೇ ವಿಧಾನ ಪರಿಷತ್ ಸದಸ್ಯರಾದ ಜಗದೇವ ಗುತ್ತೇದಾರ ಸಮಾಜದ ಕಲ್ಯಾಣದ ದೃಷ್ಟಿಯಿಂದ ಇತ್ತೀಚೆಗೆ ಮುಕ್ತಾಯಗೊಂಡ ವಿಧಾನ ಪರಿಷತ್ ಅಧಿವೇಶನದಲ್ಲಿ ಎತ್ತಿದ ಪ್ರಶ್ನೆಗಳಿಗೆ ಹಿಂದುಳಿದ ಖಾತೆಯ ಸಚಿವರಾದ ಶಿವರಾಜ್ ತಂಗಡಗಿಯವರು ಉತ್ತರ ನೀಡಿ ದೇವರಾಜ ಅರಸು ನಿಗಮದಲ್ಲಿ 10 ಕೋಟಿ ರೂಪಾಯಿ ಮೀಸಲಿರಿಸುವುದನ್ನು ಅಧಿಕೃತವಾಗಿ ಒಪ್ಪಿಕೊಂಡಿದ್ದಾರೆ. ಕಂಪನಿ ಕಾಯ್ದೆ ಪ್ರಕಾರ ನೋಂದಣಿ ಮಾಡುವ ಪ್ರಕ್ರಿಯೆ ನಡೆಯುತ್ತಿರುವ ಬಗ್ಗೆ ಕೂಡ ಆಶ್ವಾಸನೆ ನೀಡಿದ್ದಾರೆ–ಂದು ಡಾ. ವಿನಯ್ ಗುತ್ತೇದಾರ್ ಗಾರಂಪಳ್ಳಿಯವರು ವಿನಯ್ ಕುಮಾರ್ ಸೊರಕೆಯವರಿಗೆ ಮನವರಿಕೆ ಮಾಡಿ ಮನವಿ ಸಲ್ಲಿಸಿದರು. ರಾಜ್ಯದಲ್ಲಿ ಈಡಿಗ, ಬಿಲ್ಲವ ಸೇರಿದಂತೆ 26 ಪಂಗಡಗಳ ಹೆಸರಿನಲ್ಲಿ ಕನಿಷ್ಠ ಒಂದು ವೈದ್ಯಕೀಯ ಕಾಲೇಜು ತೆರೆಯಲು ಮುಖ್ಯಮಂತ್ರಿಗಳಲ್ಲಿ ಒತ್ತಡ ಹೇರಬೇಕು ಹಾಗೂ ಸಮುದಾಯದ ಮಕ್ಕಳಿಗಾಗಿ ಶಿಕ್ಷಣ ಪಡೆಯಲು ಇನ್ನಷ್ಟು ಸಂಸ್ಥೆಗಳನ್ನು ಆರಂಭಿಸಲು ಸರಕಾರದಿಂದ ಹೆಚ್ಚಿನ ನೆರವು ಸಿಗಬೇಕು ಎಂದು ಈಡಿಗ ಸಮುದಾಯದ ಮುಖಂಡರಾದ ವೆಂಕಟೇಶ್ ಕಡೇಚೂರ್ ಸೊರಕೆಯವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಈಡಿಗ ಸಮುದಾಯದ ಮುಖಂಡರಾದ ರಾಜೇಶ್ ಡಿ .ಗುತ್ತೇದಾರ್, ಬಿಲ್ಲವ ಸಂಘದ ಮುಖಂಡರಾದ ಪ್ರವೀಣ್ ಜತ್ತನ್, ಡಾ. ಸದಾನಂದ ಪೆರ್ಲ, ಸಂತೋಷ್ ಪೂಜಾರಿ, ಜೀವನ್ ಕುಮಾರ್ ಜತ್ತನ್ ಮಿಲಿತ್ ಹೆಗಡೆ ಜೊತೆಗಿದ್ದರು. ಸಂದರ್ಭದಲ್ಲಿ ಪ್ರಚಾರ ಸಮಿತಿಯ ರಾಜ್ಯ ಉಪಾಧ್ಯಕ್ಷರಾದ ಭೀಮಣ್ಣ ಮೇಟಿ, ಕಲಬುರ್ಗಿ ಜಿಲ್ಲಾ ಪ್ರಚಾರ ಸಮಿತಿಯ ಅಧ್ಯಕ್ಷರಾದ ಅಶೋಕ್ ವೀರ ನಾಯಕ್, ಯುವ ಮುಖಂಡರಾದ ಅಶ್ವಿನಿ ಸಂಕ ಮತ್ತಿತರರು ಜೊತೆಗಿದ್ದರು.

# ಅಪೌಷ್ಠಿಕತೆ ತಡೆಗೆ ಜಾಗೃತಿ ಅಗತ್ಯ : ಡಿಸಿ ಸಂಗಪ್ಪ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.18–ಗರ್ಭಿಣಿ, ಬಾಣಂತಿಯರ ಹಾಗೂ ಚಿಕ್ಕಮಕ್ಕಳಲ್ಲಿನ ಅಪೌಷ್ಟಿಕತೆ ಮತ್ತು ರಕ್ತಹೀನತೆಯನ್ನು ತಡೆಯಲು ಸಾರ್ವಜನಿಕರಲ್ಲಿ ಹಾಗೂ ಸಮುದಾಯದಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು. ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ, ತಾಲೂಕಾ ಆಡಳಿತ, ತಾಲೂಕಾ ಪಂಚಾಯತ ಹಾಗೂ ಶಿಶು ಅಭಿವೃದ್ಧಿ ಯೋಜನೆ ಸಹಯೋಗದಲ್ಲಿ ಹಮ್ಮಿಕೊಂಡ ಜಿಲ್ಲಾ ಮತ್ತು ತಾಲೂಕಾ ಮಟ್ಟದ ಪೋಷನ್ ಮಾಸಾಚರಣೆ, ಸ್ವಾಸ್ಥ್ಯ ನಾರಿ, ಸಶಕ್ತ ಕುಟುಂಬ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜನಿಸುವ ಪ್ರತಿಯೊಬ್ಬ ಮಗು ದೇಶದ ಆಸ್ತಿಯಾಗಬೇಕೆಂಬ ಉದ್ದೇಶದಿಂದ ಗರ್ಭಾವಸ್ಥೆಯಲ್ಲಿ ಮತ್ತು ಹೆರಿಗೆಯಲ್ಲಾಗುವ ಅಪಾಯ ತಪ್ಪಿಸುವ ನಿಟ್ಟಿನಲ್ಲಿ ಈ ಪೋಷನ್ ಮಾಸಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಗರ್ಭಾವಸ್ಥೆಯ ಸಮಯದಲ್ಲಿ ಕಬ್ಬಿಣಾಂಶದ ಕೊರತೆಯಿಂದ ತಾಯಂದಿರು ಮರಣ ಹೊಂದುತ್ತಿದ್ದಾರೆ. ಆರೋಗ್ಯ ಅಮೂಲ್ಯವಾಗಿದ್ದು, ತಮ್ಮ ಜೀವನ ಕಳೆದುಕೊಳ್ಳುವಂತಾಗಬಾರದು. ಗರ್ಭಿಣಿ ಮಹಿಳೆಯರು ರಕ್ತತಪಾಸಣೆ ಮಾಡಿಸಿಕೊಂಡು ತಮ್ಮ ಆರೋಗ್ಯವನ್ನು ಉತ್ತಮವಾಗಿಟ್ಟುಕೊಂಡಾಗ ಮಾತ್ರ ಸಮಾಜಕ್ಕೆ ಆರೋಗ್ಯವಂತ ಮಗುವನ್ನು ಕೊಡಲು ಸಾಧ್ಯವಾಗುತ್ತದೆ ಎಂದರು.

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಂಟಿ ನಿರ್ದೇಶಕ ನಟರಾಜ್ ಮಾತನಾಡಿ, ತಾಯಿ ಗರ್ಬಿಣಿಯಿಂದ ಹಿಡಿದು ಮಗು ಜನಿಸಿ, ಆರು ವರ್ಷ ತುಂಬಿ ಶಾಲೆಗೆ ಹೋಗುವವರೆಗೆ ಸಂಪೂರ್ಣ ಮಗುವಿನ ಮಾಹಿತಿ ಅಂಗನವಾಡಿ ಕಾರ್ಯಕರ್ತೆಯರಿಗೆ ಇರುತ್ತದೆ. ಅಪೌಷ್ಠಿಕತೆಯಿಂದ ಹುಟ್ಟಿದ ಮಕ್ಕಳು, ಭಾಣಂತಿಯರು ಮರಣ ಹೊಂದುತ್ತಿದ್ದಾರೆ. ಅದನ್ನು ತಡೆಯುವ ನಿಟ್ಟಿನಲ್ಲಿ ಸರಕಾರ ಯೋಜನೆಗಳನ್ನು ರೂಪಿಸಿದ್ದು, ಅವುಗಳ ಸಮರ್ಪಕ ಅನುಷ್ಠಾನಕ್ಕೆ ತರುವ ಕೆಲಸವಾಗಬೇಕು ಎಂದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಕೃಷಿ ವಿಜ್ಞಾನ ಕೇಂದ್ರ ವಿಷಯ ತಜ್ಞೆ ಡಾ.ರಮೀತ ಬಿ.ಈ, ಪೌಷ್ಠಿಕ ಆಹಾರದ ಬಗ್ಗೆ ವಿವರವಾಗಿ ತಿಳಿಸಿಕೊಟ್ಟರು. ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಅವರು ಅಂಗನವಾಡಿ ಕಾರ್ಯಕರ್ತೆಯರೊಂದಿಗೆ ಸಂವಾದ ನಡೆಸಿದರು. ಗರ್ಭಿಣಿಯರಿಗೆ ಕೊಡುವ ಆಹಾರದ ಪ್ರಮಾಣ ಹೆಚ್ಚಿಗೆ ಆಗಬೇಕಿದೆ. ತರಕಾರಿ ಪದಾರ್ಥಗಳನ್ನು ಹೆಚ್ಚಿಗೆ ನೀಡಲು ತಿಳಿಸಿದರು. ಅಲ್ಲದೇ ಫೇಸ್ ರಿಕಂಗ್ನ್ಯಾಜೇಷನ್ ಇರುವದರಿಂದ ತೊಂದ–ರೆಯಾಗುತ್ತಿದೆ ಎಂದು ತಿಳಿಸಿದಾಗ ಪಾರದರ್ಶಕವಾಗಿ ಮಾಡಲು ಈ ವ್ಯವಸ್ಥೆ ಮಾಡಲಾಗಿದೆ ಎಂದು ದಿಡ್ಡಿ ತಿಳಿಸಿದರು.

ಈ ಸಂದರ್ಭದಲ್ಲಿ 5 ಜನ ಗರ್ಭಿಣಿಯರಿಗೆ ಸೀಮಂತ ಕಾರ್ಯ, 6 ತಿಂಗಳು ಪೂರ್ಣಗೊಂಡ 5 ಜನ ಮಕ್ಕಳಿಗೆ ಅನ್ನಪ್ರಾಶನ ಹಾಗೂ ಮೂರು ಜನ ಮಕ್ಕಳ ಹುಟ್ಟು ಹಬ್ಬ ಆಚರಿಸಲಾಯಿತು. ಅಲ್ಲದೇ ಏಕ್ ಪೇಡ್ ಮಾ ಕೆ. ನಾಮ್ ತಾಯಿ ಹೆಸರಿನಲ್ಲಿ ಒಂದು ಗಿಡ ನೆಡುವ ಕಾರ್ಯಕ್ರಮದಡಿ ಸಾಂಕೇತಿಕವಾಗಿ ಸಸಿಗಳನ್ನು ವಿತರಣೆ ಮಾಡಲಾಯಿತು. ಪ್ರಾರಂಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಅಧಿಕಾರಿ ಸುಮಂಗಲಾ ಹಿರೇಮನಿ, ತಾಲೂಕಾ ಶಿಶು ಅಭಿವೃದ್ದಿ ಯೋಜನಾಧಿಕಾರಿ ರಮೇಶ ಸೂಳಿಕೇರಿ, ಜಿಲ್ಲಾ ನಿರೂಪಣಾಧಿಕಾರಿ ಮಂಜುನಾಥ ಪರಸನ್ನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕನ್ನಡದಲ್ಲಿ 6ನೇ ವಿಜ್ಞಾನ, ತಂತ್ರಜ್ಞಾನ ಸಮ್ಮೇಳನಕ್ಕೆ ಇಂದು ಚಾಲನೆ

ರಾಯಚೂರು ಸೆ 18 : ಬೆಂಗಳೂರಿನ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಸಹಯೋಗದಲ್ಲಿ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಸೆಪ್ಟೆಂಬರ್19ರಂದು ಬೆಳಗ್ಗೆ 10 ಗಂಟೆಗೆ ಕನ್ನಡದಲ್ಲಿ 6ನೇ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನದ ಉದ್ಘಾಟನಾ ಸಮರಂಭ ನಡೆಯಲಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾನಾಯಕರಾದ ಎನ್.ಎಸ್.ಬೋಸರಾಜು ಅವರು ಕಾರ್ಯಕ್ರಮ ಉದ್ಘಾಟಿಸುವರು. ಸ್ಮರಣ ಸಂಚಿಕೆಯ ಮುಖಪುಟವನ್ನು ಸಂಸದರಾದ ಜಿ. ಕುಮಾರ ನಾಯಕ ಅವರು ಬಿಡುಗಡೆ ಮಾಡುವರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.